ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 73
3–9–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 73

## ಸೆಪ್ಟೆಂಬರ್ 4 ರಂದು ವರಸಿದ್ಧಿ ವಿನಾಯಕ ವಿಸರ್ಜನೆ, ಸಂಚಾರಮಾರ್ಗ ಬದಲಾವಣೆ

**ದಾವಣಗೆರೆ:** ದಾವಣಗೆರೆ ನಗರದ ವಿನೋಬ ನಗರದಲ್ಲಿ ಪ್ರತಿಷ್ಠಾಪಿಸಿರುವ ವರಸಿದ್ಧಿ ವಿನಾಯಕ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆ ಸೆಪ್ಟೆಂಬರ್ 4 ರಂದು ನಡೆಯಲಿದೆ. ಈ ಸಂದರ್ಭದಲ್ಲಿ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಅಂದು ಬೆಳಿಗ್ಗೆ 11 ರಿಂದ ರಾತ್ರಿ 11 ಗಂಟೆಯವರೆಗೆ ಸಂಚಾರ ಮಾರ್ಗ ಬದಲಾಯಿಸಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

ಹರಿಹರದಿಂದ ದಾವಣಗೆರೆಗೆ ಹಳೆ ಪಿಬಿ ರಸ್ತೆಯ ಮೂಲಕ ಬರುವ ಎಲ್ಲಾ ಭಾರಿ ವಾಹನ, ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್‌ಗಳು ಹರಿಹರ ನಗರದಿಂದ ನೇರವಾಗಿ ಶಿವಮೊಗ್ಗ ಬೈಪಾಸ್ ಮುಖಾಂತರ ಹೊಸ ಎನ್‌ಹೆಚ್–48 ರಸ್ತೆಯಿಂದ ಹಾಗೂ ಚಿತ್ರದುರ್ಗ ಕಡೆಯಿಂದ ಬರುವ ಎಲ್ಲಾ ವಾಹನಗಳು ಸಹ ಆವರಗೆರೆ ಹತ್ತಿರದ ಬಾಡಾಕ್ರಾಸ್ ಮುಖಾಂತರ ಬಂದು ಸರಕು ಲಾರಿಗಳು ಡಿಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೆಟ್ ಕ್ರಾಸ್‌ನಿಂದ ಎಪಿಎಂಸಿ ಗೆ ಹೋಗುವುದು. ಕೆಎಸ್‌ಆರ್‌ಟಿಸಿ ಬಸ್‌ಗಳು ಅದೇ ಮಾರ್ಗವಾಗಿ ಬಾಡಾಕ್ರಾಸ್ ಮುಖಾಂತರ ಆವರಗೆರೆ ಕಡಿಯಿಂದ ನೂತನ ಬಸ್ ನಿಲ್ದಾಣಕ್ಕೆ ಬಂದು ಅದೇ ಮಾರ್ಗವಾಗಿ ಬೆಂಗಳೂರು ಬೆಳಗಾವಿ ಕಡೆಗೆ ಹೋಗುವುದು. ಬಸ್‌ಗಳು ಖಾಸಗಿ ಬಸ್‌ಗಳು ಸಹ ಅದೇ ಆರ್ಗವಾಗಿ ಬಂದು ಎಂ.ಜಿ ಸರ್ಕಲ್ ಮುಖೇನ ನೂತನ ಖಾಸಗಿ ನಿಲ್ದಾಣಕ್ಕೆ ಬಂದು ಅದೇ ಮಾರ್ಗದಲ್ಲಿ ನಿರ್ಗಮಿಸಲು ಸೂಚಿಸಿದೆ. ಜಿಎಂಐಟಿ ಕಾಲೇಜ್ ಹತ್ತಿರ ತಾತ್ಕಾಲಿಕ ರಸ್ತೆಯ ಬದಿಯಲ್ಲಿ ನಿಲ್ಲಿಸುವಂತಹ ಗೂಡ್ಸ್ ಲಾರಿಗಳನ್ನು ಹಳೇ ಪಿಬಿ ರಸ್ತೆಯ ಎರಡೂ ಬದಿಗಳಲ್ಲಿ ನಿಲ್ಲಿಸದೇ ದೂರದಲ್ಲಿ ಖಾಸಗಿ ಪಾರ್ಕಿಂಗ್ ವ್ಯವಸ್ಥೆ ಮಾಡಕೊಳ್ಳಬೇಕು. ನಗರದ ನೂತನ ಖಾಸಗಿ ಬಸ್ ನಿಲ್ದಾಣದಿಂದ ಕಾರ್ಯಾಚರಣೆಗೊಳ್ಳುವ ಬಸ್‌ಗಳು ಎಸಿ ಕಚೇರಿ ವೃತ್ತದಿಂದ ಅರುಣ ಸರ್ಕಲ್ ಮುಖಾಂತರ ಹರಿಹರದ ಕಡೆಗೆ ಹಳೇ ಪಿಬಿ ರಸ್ತೆಗೆ ಬಾರದೇ ಗಾಂಧಿ ವೃತ್ತದ ಮೂಲಕ ಹದಡಿ ರಸ್ತೆಯಿಂದ ಕಾರ್ಯಚರಣೆಗೊಳಿಸಲು ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

## ಸೆ.5ರಂದು ಈದ್‌ಮಿಲಾದ್ ಹಬ್ಬದ ಆಚರಣೆ: ಸಂಚಾರ ಮಾರ್ಗ ಬದಲಾವಣೆ

**ದಾವಣಗೆರೆ :** ಸೆಪ್ಟೆಂಬರ್ 5 ರಂದು ಈದ್‌ಮಿಲಾದ್ ಹಬ್ಬದ ಪ್ರಯುಕ್ತ ವಿವಿಧ ಕಡೆ ಮೆರವಣಿಗೆ ನಡೆಸುವುದರಿಂದ ಸುಗಮ ಸಂಚಾರ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಅಂದು ಬೆಳಗ್ಗೆ 11 ರಿಂದ ರಾತ್ರಿ 11 ಗಂಟೆಯವರೆಗೆ ಸಂಚಾರ ಮಾರ್ಗ ಬದಲಾಯಿಸಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

ಹರಿಹರದಿಂದ ದಾವಣಗೆರೆಗೆ ಹಳೆ ಪಿಬಿ ರಸ್ತೆಯ ಮೂಲಕ ಬರುವ ಎಲ್ಲಾ ಭಾರಿ ವಾಹನ, ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್‌ಗಳು ಹರಿಹರ ನಗರದಿಂದ ನೇರವಾಗಿ ಶಿವಮೊಗ್ಗ ಬೈಪಾಸ್ ಮುಖಾಂತರ ಹೊಸ ಎನ್‌ಹೆಚ್–48 ರಸ್ತೆಯಿಂದ ಹಾಗೂ ಚಿತ್ರದುರ್ಗ, ಕಡೆಯಿಂದ ಬರುವ ಎಲ್ಲಾ ವಾಹನಗಳು ಸಹ ಆವರಗೆರೆ ಹತ್ತಿರದ ಬಾಡಾಕ್ರಾಸ್ ಮುಖಾಂತರ ಬಂದು ಸರಕು ಲಾರಿಗಳು ಡಿಸಿಎಂ ಅಂಡರ್ ಪಾಸ್ ಹತ್ತಿರದ ದನದ ಮಾರ್ಕೆಟ್ ಕ್ರಾಸ್‌ನಿಂದ ಎಪಿಎಂಸಿ ಗೆ ಹೋಗುವುದು. ಕೆಎಸ್‌ಆರ್‌ಟಿಸಿ ಬಸ್‌ಗಳು ಅದೇ ಮಾರ್ಗವಾಗಿ ಬಾಡಾಕ್ರಾಸ್ ಮುಖಾಂತರ ಆವರಗೆರೆ ಕಡಿಯಿಂದ ನೂತನ ಬಸ್ ನಿಲ್ದಾಣಕ್ಕೆ ಬಂದು ಅದೇ ಮಾರ್ಗವಾಗಿ ಬೆಂಗಳೂರು ಬೆಳಗಾವಿ ಕಡೆಗೆ ಹೋಗುವುದು. ಬಸ್‌ಗಳು ಖಾಸಗಿ ಬಸ್‌ಗಳು ಸಹ ಅದೇ ಆರ್ಗವಾಗಿ ಬಂದು ಎಂ.ಜಿ ಸರ್ಕಲ್ ಮುಖೇನ ನೂತನ ಖಾಸಗಿ ನಿಲ್ದಾಣಕ್ಕೆ ಬಂದು ಅದೇ ಮಾರ್ಗದಲ್ಲಿ ನಿರ್ಗಮಿಸಲು ಸೂಚಿಸಿದೆ.ಚನ್ನಗಿರಿ ಮಾರ್ಗವಾಗಿ ಬರುವ ಕೆಎಸ್‌ಆರ್‌ಟಿಸಿ ಬಸ್‌ಗಳು ಬಾಡಾಕ್ರಾಸ್ ಮೂಲಕ ಆವರಗೆರೆ ಕಡೆಯಿಂದ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಬಂದು ನಂತರ ಅದೇ ಮಾರ್ಗವಾಗಿ ಹಿಂತಿರುಗಬೇಕು. ಖಾಸಗಿ ಬಸ್‌ಗಳು ಮಾಗನೂರು ಬಸಪ್ಪ ಪೆಟ್ರೋಲ್ ಬಂಕ್ ಹತ್ತಿರದ ಮೈದಾನದಲ್ಲಿ ಪಾರ್ಕಿಂಗ್ ಮಾಡಲು ಸ್ಥಳಾವಕಾಶ ಕಲ್ಪಿಸಿದೆ.

### ರೇಣುಕಾ ಸ್ವಾಮಿ ಕೊಲೆ ಪ್ರಕರಣ

# ಎ1 ಆರೋಪಿ ಪವಿತ್ರಾ ಗೌಡ ಹೊಸ ಜಾಮೀನು ಅರ್ಜಿ ಮತ್ತೆ ವಜಾ

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಮತ್ತೆ ಜೈಲುಪಾಲಾಗಿರುವ ಎ1 ಆರೋಪಿ ಪವಿತ್ರಾ ಗೌಡ ಜಾಮೀನು ಅರ್ಜಿಯನ್ನು 57ನೇ ಸೆಷನ್ಸ್ ಕೋರ್ಟ್ ಮಂಗಳವಾರ ವಜಾಗೊಳಿಸಿದೆ.

ಚಿತ್ರದುರ್ಗದ ರೇಣುಕಾಸ್ವಾಮಿ ಎಂಬುವರಿಗೆ ಪವಿತ್ರಾ ಗೌಡ ಅವರಿಗೆ ಅಶ್ಲೀಲ ಸಂದೇಶ ಕಳುಹಿಸಿದನೆಂಬ ಕಾರಣಕ್ಕಾಗಿ, ನಟ ದರ್ಶನ್ ಹಾಗೂ ಅವರ ಗ್ಯಾಂಗ್ ಅಪಹರಿಸಿ ಬೆಂಗಳೂರಿಗೆ ತಂದು, ಪಟ್ಟಣಗೆರೆಯಲ್ಲಿನ ಶೆಡ್‌ನಲ್ಲಿ ಚಿತ್ರಹಿಂಸೆ ನೀಡಿ ಕೊಲೆ ಮಾಡಿದ್ದರು. ಈ ಪ್ರಕರಣದಲ್ಲಿ ಪವಿತ್ರಾ ಗೌಡ ಪ್ರಮುಖ ಆರೋಪಿಯಾಗಿದ್ದಾರೆ.

ಇತ್ತೀಚಿಗೆ ನಟ ದರ್ಶನ್ ಅವರ ಆಪ್ತರಾದ ಪವಿತ್ರ ಗೌಡ ಜಾಮೀನು ಕೋರಿ ಸೆಷನ್ಸ್ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು.

ಅವರ ಪರ ವಾದಿಸಿದ ವಕೀಲ ಬಾಲನ್,



ಸುಪ್ರೀಂಕೋರ್ಟ್ ಈ ಹಿಂದೆ ನೀಡಿದ್ದ ಆದೇಶವನ್ನು ಪ್ರಶ್ನಿಸದಿದ್ದರೂ ಚಾರ್ಜ್ ಶೀಟ್ ಸಲ್ಲಿಕೆಯಲ್ಲಿ ತಾಂತ್ರಿಕ ದೋಷಗಳಿವೆ. crpcಅಡಿಯಲ್ಲಿ ಚಾರ್ಜ್ ಶೀಟ್ ಸಲ್ಲಿಸದೆ BNSS ಅಡಿಯಲ್ಲಿ ಚಾರ್ಜ್ ಶೀಟ್ ಸಲ್ಲಿಸಿರುವುದರಿಂದ ಕಾನೂನು ಪ್ರಕಾರ ಅಮಾನ್ಯವಾಗಿದೆ. ಹೀಗಾಗಿ ಪವಿತ್ರ ಗೌಡ ಅವರಿಗೆ ಜಾಮೀನು ನೀಡಬೇಕು ಎಂದು ವಾದಿಸಿದರು.

ಆರೋಪಿ ಪರ ವಕೀಲರ ವಾದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಪ್ರಾಸಿಕ್ಯೂಷನ್ ವಕೀಲ ಸಚಿನ್, ಜಾಮೀನು ನೀಡದಂತೆ ನ್ಯಾಯಾಲಯಕ್ಕೆ ಮನವಿ ಮಾಡಿದರು.

ವಾದ ವಿವಾದ ಆಲಿಸಿದ ನ್ಯಾಯಾಧೀಶರು, ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದ್ದಾರೆ. ಈ ಹಿಂದೆ ಕರ್ನಾಟಕ ಹೈಕೋರ್ಟ್ ಎಲ್ಲಾ ಆರೋಪಿಗಳಿಗೆ ನೀಡಿದ್ದ ಜಾಮೀನು ಅರ್ಜಿಯನ್ನು ಸುಪ್ರೀಂಕೋರ್ಟ್ ರದ್ದುಗೊಳಿಸಿತ್ತು. ಕೂಡಲೇ ಆರೆಸ್ಟ್ ಮಾಡುವಂತೆ ಸೂಚಿಸಿತ್ತು. ತದನಂತರ ಆಗಸ್ಟ್ 14 ರಿಂದ ಪವಿತ್ರ ಗೌಡ ಮತ್ತೆ ಜೈಲು ಸೇರಿದ್ದಾರೆ.

# ಧರ್ಮಸ್ಥಳದ ವಿರುದ್ಧ ಷಡ್ಯಂತ್ರದ ಪ್ರಕರಣಕ್ಕೆ ಇ.ಡಿ ಎಂಟ್ರಿ..!

**ಬೆಂಗಳೂರು,ಸೆ.2–** ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸುದ್ದಿ ಮಾಡಿರುವ ಶ್ರೀಕ್ಷೇತ್ರ ಧರ್ಮಸ್ಥಳದ ವಿರುದ್ಧ ಸಂಚು ರೂಪಿಸಲು ವಿದೇಶದಿಂದ ಸರ್ಕಾರೇತರ ಸಂಘಸಂಸ್ಥೆ(ಎನ್‌ಜಿಒ)ಗಳಿಗೆ ಹಣ ಬಂದಿದೆ ಎಂಬ ಶಂಕೆ ಹಿನ್ನಲೆಯಲ್ಲಿ ಜಾರಿ ನಿರ್ದೇಶನಾಲಯ(ಇ.ಡಿ) ರಂಗಪ್ರವೇಶ ಮಾಡಿದೆ.

ಕರ್ನಾಟಕ ಸೇರಿದಂತೆ ದೇಶದ ಕೆಲವು ಮುಂಚೂಣಿಯಲ್ಲಿರುವ ಎನ್‌ಜಿಒಗಳಿಗೆ ವಿದೇಶದಿಂದ ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ರೂಪಿಸಲು ಭಾರೀ ಪ್ರಮಾಣದ ಹಣ ಹರಿದುಬಂದಿದೆ ಎಂಬುದನ್ನು ಇ.ಡಿ ಪತ್ತೆ ಮಾಡಿದೆ.ಇದೀಗ ಮಾನವಹಕ್ಕುಗಳು, ಮಹಿಳಾಪರ ಹೋರಾಟ ನಡೆಸುವ ಸಂಘಸಂಸ್ಥೆಯವರು ಸೇರಿದಂತೆ ರಾಜ್ಯದ ಕೆಲವು ಎನ್‌ಜಿಒಗಳ ಹಣದ ವಹಿವಾಟು ನಡೆದಿರುವ ಕುರಿತು ಇಡಿ ನೋಟಿಸ್ ನೀಡಲು ಸಿದ್ದತೆ ನಡೆಸಿದೆ ಎಂದು ತಿಳಿದುಬಂದಿದೆ.

ಮೇಲ್ನೋಟಕ್ಕೆ ಧರ್ಮಸ್ಥಳದ ವಿರುದ್ಧ ಎನ್‌ಜಿಒಗಳಿಗೆ ಹಣ ಜಮೆಯಾಗಿರುವುದು ಕಂಡುಬಂದ ಹಿನ್ನೆಲೆಯಲ್ಲಿ ಇದರ ಸತ್ಯಾಸತ್ಯತೆಯನ್ನು ಪತ್ತೆ ಮಾಡಲು ರಾಜ್ಯದ ನಾಲ್ಕಕ್ಕೂ ಹೆಚ್ಚು ಎನ್‌ಜಿಒಗಳಿಗೆ ನೋಟಿಸ್ ನೀಡಲು ಮುಂದಾಗಿದೆ. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯ(ಎಸ್‌ಬಿಐ), ಯೂನಿಯನ್ ಬ್ಯಾಂಕ್ ಆಫ್ ಇಂಡಿಯ(ಯುಬಿಐ), ಐಸಿಐಸಿಐ ಸೇರಿದಂತೆ ಕೆಲವು ಪ್ರತಿಷ್ಠಿತ ಬ್ಯಾಂಕ್‌ಗಳ ಖಾತೆಗಳಿಗೆ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ(ಫೆಮ) ಉಲ್ಲಂಘಿಸಿ ದೇಣಿಗೆ ರೂಪದಲ್ಲಿ ಹಣ ಪಡೆದಿರುವುದು ಕಂಡುಬಂದಿದೆ ಎನ್ನಲಾಗುತ್ತಿದೆ.

### ಜೈಲು ಶಿಕ್ಷೆಗೆ ಗುರಿಯಾಗಿರುವ ನಟಿ ರನ್ಯಾರಾವ್‌ಗೆ ಬಿಗ್ ಶಾಕ್:

# ಚಿನ್ನ ಕಳ್ಳಸಾಗಣೆ ಕೇಸ್‌ನಲ್ಲಿ 102 ಕೋಟಿ ದಂಡ ಕಟ್ಟುವಂತೆ 'ಡಿಆರ್‌ಐ' ನೋಟಿಸ್




**ಬೆಂಗಳೂರು:** ಅಕ್ರಮ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಜೈಲು ಶಿಕ್ಷೆಗೆ ಗುರಿಯಾಗಿರುವ ನಟಿ ರನ್ಯಾರಾವ್ ಗೆ ಇದೀಗ ಬಿಗ್ ಶಾಕ್ ಎದುರಾಗಿದ್ದು 102.55 ಕೋಟಿ ರೂ ದಂಡ ಪಾವತಿಸುವಂತೆ ಆದಾಯ ಗುಪ್ತಚರ ನಿರ್ದೇಶನಾಲಯದ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ.

ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಕ್ರಮವಾಗಿ ಚಿನ್ನ ಕಳ್ಳಸಾಗಣೆ ಮಾಡಿದ್ದ ಹಿನ್ನೆಲೆ ಕನ್ನಡದ ನಟಿ ರನ್ಯಾರಾವ್ ರನ್ನು ಪೊಲೀಸರು ಬಂಧಿಸಿದ್ದರು. ಈ ವೇಳೆ ಡಿಆರ್‌ಐ ಅಧಿಕಾರಿಗಳು ರನ್ಯಾರಾವ್ ಬಳಿ 14.8 ಕೆಜಿ ಚಿನ್ನವನ್ನು ವಶಪಡಿಸಿಕೊಂಡಿದ್ದರು. DRI ತನಿಖೆಯಲ್ಲಿ, ರನ್ಯಾ ರಾವ್ ಸುಮಾರು 15 ದಿನಗಳಲ್ಲಿ 4 ಬಾರಿ ದುಬೈಗೆ ಹೋಗಿ ಚಿನ್ನ ಕಳ್ಳಸಾಗಣೆ ಮಾಡಿದ್ದರು ಎಂದು ಬಹಿರಂಗಗೊಂಡಿತ್ತು.

ನಟಿ ರನ್ಯಾ ರಾವ್ ಅವರಿಗೆ ಕಾಫಿಪೋಸಾ ಅಡಿಯಲ್ಲಿ ಒಂದು ವರ್ಷ ಜೈಲು ಶಿಕ್ಷೆ ವಿಧಿಸಲಾಗಿದ್ದು, ಜಾಮೀನು ಪಡೆಯುವ ಅವಕಾಶವೇ ಇಲ್ಲದಂತಾಗಿದೆ. ಇನ್ನು ರನ್ಯಾ ವಿರುದ್ಧ ವಿದೇಶಿ ವಿನಿಮಯ ನಿಯಂತ್ರಣ ಮತ್ತು ಕಳ್ಳಸಾಗಣೆ ಚಟುವಟಿಕೆಗಳ ತಡೆ ಕಾಯ್ದೆಯನ್ನು ಜಾರಿ ಮಾಡಲಾಗಿದ್ದು, ಈ ವಿಷಯವನ್ನು ನಿರ್ವಹಿಸುವ ಸಲಹಾ ಮಂಡಳಿಯು ಇತ್ತೀಚೆಗೆ ರನ್ಯಾರಾವ್ ಗೆ ಬಂಧನದ ಸಂಪೂರ್ಣ ಅವಧಿಯಲ್ಲಿ ಜಾಮೀನು ಸಿಗುವುದಿಲ್ಲ.

### ಹೊನ್ನಾಳಿಯಲ್ಲಿ ನಿವೃತ್ತ ನೌಕರರಿಗೆ ಬೀಳ್ಕೋಡುಗೆ ಸಮಾರಂಭ

# ನೌಕರರ ಸಮಸ್ಯೆಗಳ ಪರಿಹಾರಕ್ಕೆ ಒಗ್ಗಟ್ಟಿನಿಂದ ಕೆಲಸ ಮಾಡಬೇಕು : ಅರುಣ್



**ಹೊನ್ನಾಳಿ:** ಸಂಘದ ಪದಾಧಿಕಾರಿಗಳು ನೌಕರರ ನಿರೀಕ್ಷೆಗೆ ತಕ್ಕಂತೆ ಸಂಘದ ಎಲ್ಲಾ ಕಾರ್ಯಗಳಲ್ಲಿ ಭಾಗವಹಿಸಿ ತಮಗೆ ಮತ ನೀಡಿದ ನೌಕರರ ಸಮಸ್ಯೆಗಳ ಪರಿಹಾರಕ್ಕೆ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಅಗ ಮಾತ್ರ ಸರಕಾರಿ ನೌಕರರ ಸಂಘಕ್ಕೆ ಒಳ್ಳೆಯ ಹೆಸರು ಬರಲು ಹಾಗೂ ನೌಕರರ ಪ್ರೀತಿ ವಿಶ್ವಾಸ ಗಳಿಸಲು ಸಾಧ್ಯ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ತಾಲೂಕು ಘಟಕದ ಅಧ್ಯಕ್ಷ ಅರುಣ್ ಹೇಳಿದರು.

ಪಟ್ಟಣದ ಸರಕಾರಿ ನೌಕರರ ಭವನದಲ್ಲಿ ಆಯೋಜಿಸಲಾಗಿದ್ದ ನಿವೃತ್ತ ನೌಕರರಿಗೆ ಬೀಳ್ಕೋಡುಗೆ ಸಮಾರಂಭ ಹಾಗೂ ತಾಲೂಕು ಸಂಘಕ್ಕೆ ನೂತನವಾಗಿ ನಾಮನಿರ್ದೇಶಿತ ಸದಸ್ಯರಾಗಿ ಆಯ್ಕೆ 10 ಜನ ಸದಸ್ಯರಿಗೆ ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.

ನೌಕರರ ಸಂಘದ ಚುನಾವಣೆಗಳಲ್ಲಿ ನಮ್ಮ ನೌಕರರು ತಮ್ಮ ಮೇಲೆ ಭರವಸೆ ಇಟ್ಟು ಅಭಿಮಾನ ಗೌರವಗಳೊಂದಿಗೆ ಮತಹಾಕಿ ಸಂಘದ ಸದಸ್ಯರಾಗಲು ಕಾರಣರಾಗಿರುತ್ತಾರೆ ಇದನ್ನು ಅರಿತು ಸದಸ್ಯರುಗಳು ಸಂಘದ ಎಲ್ಲಾ ಕಾರ್ಯಚಟುವಟಿಕೆಗಳು, ಸಭೆಗಳಿಗೆ ತಪ್ಪದೇ ಹಾಜರಾಗಿ ನೌಕರರ ಸಮಸ್ಯೆಗಳು ಹಾಗೂ ಇತರೆ ವಿಚಾರಗಳ ಕುರಿತು ಚರ್ಚೆಯಲ್ಲಿ ಭಾಗವಹಿಸುವುದನ್ನು ಮರೆಯಬಾರದು ಎಂದ ಅವರು ಕೆಲ ಪದಾಧಿಕಾರಿಗಳು ಭಾಗವಹಿಸದೇ ಇರುವುದು ತಮಗೆ ಬೇಸರ ತಂದಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ತಾಲೂಕಿನ ಚೀಲಾಪುರ ಗ್ರಾಮದ ಪ್ರಾಥಮಿಕ ಶಾಲೆಯಲ್ಲಿ ಶಿಕ್ಷಕರಾಗಿ ಸೇವೆಸಲ್ಲಿಸಿ ನಿವೃತ್ತರಾದ ವಿಜಯಕುಮಾರ್ ಅವರಿಗೆ ಸನ್ಮಾನಿಸಿ ಬೀಳ್ಕೋಡಲಾಯಿತು.ಸನ್ಮಾನ ಸ್ವೀಕರಿಸಿದ ಶಿಕ್ಷಕರು ತಮ್ಮ ಅನಿಸಿಕೆ,ಅನುಭವಗಳನ್ನು ಹಂಚಿಕೊಂಡರು.

ಇದೇ ಸಂದರ್ಭದಲ್ಲಿ ಸರಕಾರಿ ನೌಕರರ ಸಂಘಕ್ಕೆ ನೂತನವಾಗಿ ನಾಮನಿರ್ದೇಶಿತ ಸದಸ್ಯರಾಗಿ ಆಯ್ಕೆಯಾದ 1.ಚಂದ್ರಶೇಖರ ಎಚ್.ಕೆ, 2.ಸಿದ್ದಪ್ಪಹೊಸಕೇರಿ, 3.ಕೆ.ಪ್ರಕಾಶ್ ನಾಯ್ಕ, 4. ಬಿ.ಕುಮಾರ್, 5.ಬಿ.ಎಸ್. ರುದ್ರೇಶ್, 6.ಎನ್. ಎಂ. ದೀಪಕ್, 7. ಪಿ.ರವಿಕುಮಾರ್,8.ವೈ.ಎಲ್. ಸಂತೋಷ್ ಕುಮಾರ್, 9.ಎಚ್.ಆರ್.ಬಸವರಾಜ,10. ಎಸ್. ರಾಜೇಂದ್ರ ಇವರುಗಳನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಎಚ್.ಕೆ.ಚಂದ್ರಶೇಖರ್, ನಾಗರಾಜ್ ನಾಯ್ಕ ಹಾಗೂ ದೊಡ್ಡೇಶ್ ಅವರು ಮಾತನಾಡಿದರು.ಕುಮಾರ್‌ಬರ್ಕಿ,ಹಾಸ್ಟಲ್‌ವಾರ್ಡನ್ ಸತೀಶ್ ಹಾಗೂ ಸಂಘದ ಅನೇಕ ಪದಾಧಿಕಾರಿಗಳು, ಸರಕಾರಿ ನೌಕರರು ಇದ್ದರು.

### ಎನ್‌ಬಿಎಫ್‌ಸಿ ಬ್ಯಾಂಕ್‌ಗಳಿಂದ ಸರ್ಫೇಸಿಕಾಯ್ದೆ ದುರುಪಯೋಗ

# ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬದಲಾವಣೆಗೆ ಒತ್ತಾಯಿ ಪ್ರತಿಭಟನೆ



**ಜಗಳೂರು :** ಎನ್‌ಬಿಎಫ್‌ಸಿ ಬ್ಯಾಂಕ್‌ಗಳು ಸರ್ಫೇಸಿ ಕಾಯ್ದೆ ದುರುಪಯೋಗ ಮಾಡಿಕೊಳ್ಳುತ್ತಿದ್ದು, ಇಂತಹ ಕಾಯ್ದೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬದಲಾವಣೆಮಾಡಬೇಕು ಎಂದು ಒತ್ತಾಯಿಸಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ (ರಾಜ್ಯಾಧ್ಯಕ್ಷ ಹುಚ್ಚವ್ವನಹಳ್ಳಿಮಂಜುನಾಥ) ಬಣದಿಂದ ಶನಿವಾರ ಜಗಳೂರು ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಗುತ್ತದೆ ಎಂದು ರೈತ ಸಂಘದ ಪ್ರಧಾನ ಕಾರ್ಯದರ್ಶಿ ರಾಜು ಹೇಳೀದರು.

ಪಟ್ಟಣದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಕೂಲಿ ಕಾರ್ಮಿಕರಿಗೆ ಹೊಸಮನೆ ನಿರ್ಮಿಸಲು, ಹಳೇ ಮನೆ ಮೇಲೆ ಎನ್ ಬಿ ಎಫ್ ಸಿ ಬ್ಯಾಂಕ್ ಗಳು ಸಾಲ ನೀಡುತ್ತಿವೆ. ಸಾಲ ನೀಡುವಾಗ ಎಲ್ಲ ಖಾಲಿ ಇರುವ ಫಾರಂಗಳ ಮೇಲೆ ಸಹಿ ಮಾಡಿಸಿಕೊಂಡು ಬ್ಯಾಂಕ್ ಗಳು ದುರುಪಯೋಗ ಮಾಡಿಕೊಳ್ಳುತ್ತಿವೆ.

ಸರ್ಫೇಸ್ ಕಾಯ್ದೆಯಲ್ಲಿ ಬದಲಾವಣೆ ತರಬೇಕು ಅಥವಾ ಕಾನೂನಿನಲ್ಲಿ ಸಾಲಗಾರನಿಗೂ ಅವಕಾಶ ಇರುವಂತೆ ಉಪ ಕಾಯ್ದೆ ತರಬೇಕು. ಇಲ್ಲವಾದರೆ ಬ್ರಿಟಿಷರು ಮಾಡಿರುವ ಇಂತಹ ಕಾನೂನನ್ನು ಮೊದಲು ಸಂಪೂರ್ಣವಾಗಿ ತೆಗೆದು ಹಾಕಬೇಕು ಎಂದರು. ದಾವಣಗೆರೆ ಜಿಲ್ಲಾ, ತಾಲೂಕು ನ್ಯಾಯಾಲಯಗಳಲ್ಲಿ ದಾವೆ ಹಾಕದೇ, ತಮಿಳುನಾಡು, ಮಹಾರಾಷ್ಟ್ರ ಸೇರಿದಂತೆ ಹೀಗೆ ಬೇರೆ ಬೇರೆ ದಾವೆ ಮಾಡುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಜಗಳೂರು ತಾಲ್ಲೂಕಿನ ಪಾಲನಾಯಕನಕೋಟೆ, ಮಿನುಗರಹಳ್ಳಿ ಸೇರಿದಂತೆ ವಿವಿಧ ಹಳ್ಳಿಗಳಲ್ಲಿ ಕೆಲವು ರೈತರ ಮೇಲೆ ಎನ್ ಬಿ ಎಫ್ ಸಿ ಬ್ಯಾಂಕ್ ಗಳು ಸಾಲ ನೀಡಿ, ಸಾಲ ನೀಡಿದವರ ಮೇಲೆ ಸರ್ಫೇಸಿ ಕಾಯ್ದೆ ದುರುಪಯೋಗ ಮಾಡಿಕೊಳ್ಳುವ ಮೂಲಕ ದೌರ್ಜನ್ಯ ಮಾಡುತ್ತಿರುವುದು ಕಂಡು ಬಂದಿದೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ (ರಾಜ್ಯಾಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ) ಬಣ ಜಿಲ್ಲಾ ಉಪಾಧ್ಯಕ್ಷ ಗುರುಸಿದ್ದಪ್ಪ, ತಾಲ್ಲೂಕು ಹಸಿರು ಸೇನೆಯ ಅಧ್ಯಕ್ಷ ನಾಗಪ್ಪ, ಪದಾಧಿಕಾರಿಗಳಾದ ಕ್ಯಾಸನಹಳ್ಳಿ ಬಸಣ್ಣ, ವೀರೇಶ್, ಬೈರನಾಯ್ಕನಹಳ್ಳಿ ಅಂಜಿನಪ್ಪ, ರಾಜಣ್ಣ ಸೇರಿದಂತೆ ಇತರರು ಪತ್ರಿಕಾಗೋಷ್ಠಿಯಲ್ಲಿ ಇದ್ದರು.

# ಭಾರತ ಚುನಾವಣಾ ಆಯೋಗ ತಂಡದ ಭೇಟಿ : ಮತಗಟ್ಟೆ ಪರಿಶೀಲನೆ

**ಶಿವಮೊಗ್ಗ :** ಭಾರತ ಚುನಾವಣಾ ಆಯೋಗದ ಅಧಿಕಾರಿಗಳು ಮತಗಟ್ಟೆ ಹಾಗೂ ಸಮಗ್ರ ಚುನಾವಣಾ ಪ್ರಕ್ರಿಯೆ ಪರಿಶೀಲನೆಯ ಭಾಗವಾಗಿ ಸೆ.01 ರಂದು ಶಿವಮೊಗ್ಗ ಜಿಲ್ಲೆಗೆ ಭೇಟಿ ನೀಡಿದರು.

ಮಹಾನಗರಪಾಲಿಕೆ ಕಚೇರಿಯಲ್ಲಿ ಮತಗಟ್ಟೆ ಅಧಿಕಾರಿಗಳಿಗೆ (ಬಿಎಲ್‌ಓ) ಆಯೋಜಿಸಲಾಗಿದ್ದ ತರಬೇತಿ ಕಾರ್ಯಕ್ರಮದಲ್ಲಿ ತಂಡವು ಪಾಲ್ಗೊಂಡು ಮತಗಟ್ಟೆ ಅಧಿಕಾರಿಗಳ ಮೂಲ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಕುರಿತು ವಿಶ್ಲೇಷಿಸಿತು. ನಂತರ ಮತಗಟ್ಟೆ ಅಧಿಕಾರಿಗಳೊಂದಿಗೆ ಸಂವಾದಿಸಲಾಯಿತು. ತರಬೇತಿ ನಂತರ ತಂಡವು ಮತಗಟ್ಟೆಗಳ ಪರಿಶೀಲನೆ ನಡೆಸಿತು. 111–ಶಿವಮೊಗ್ಗ ಗ್ರಾಮಾಂತರ ಹಾಗೂ 117–ಸಾಗರ ವಿಧಾನಸಭಾ ಕ್ಷೇತ್ರಗಳ ಆಯ್ದ ಮತಗಟ್ಟೆಗಳಿಗೆ ಭೇಟಿ



ನೀಡಿ, ಮತಗಟ್ಟೆಗಳಲ್ಲಿ ಖಚಿತ ಕನಿಷ್ಟ ಸೌಲಭ್ಯಗಳು ಇವೆಯೇ ಎಂಬುದನ್ನು ಪರಿಶೀಲಿಸಲಾಯಿತು. ಹಿಂದಿನ ಸಂಸತ್ ಹಾಗೂ ವಿಧಾನಸಭಾ ಚುನಾವಣೆಯ ಮತದಾನದ ಶೇಕಡಾವಾರು ಅಂಕಿಅಂಶಗಳ ಮಾಹಿತಿ ಪಡೆದು, ಪ್ರಸ್ತುತ ಸಾಲಿನ ಮತದಾರರ ಪಟ್ಟಿಗೆ ಮತದಾರರ ಸೇರ್ಪಡೆ, ಕೈಬಿಡಲಾಗಿರುವ ಮತ್ತು ತಿದ್ದುಪಡಿ ಮಾಡಿರುವ ಮತದಾರರ ಸಂಖ್ಯೆಯನ್ನು ಸಂಗ್ರಹಿಸಿತು.ಚುನಾವಣಾ ಮೂಲಭೂತ ಸಿದ್ದತೆಯನ್ನು ಬಲಪಡಿಸುವುದು, ದೋಷರಹಿತ ಮತದಾರರ ಪಟ್ಟಿಯನ್ನು ಖಚಿತಪಡಿಸುವುದು, ಮತದಾರರಿಗೆ ಹೆಚ್ಚಿನ ಸೌಲಭ್ಯ ಒದಗಿಸುವುದು ಹಾಗೂ ಜಿಲ್ಲೆಯಾದ್ಯಂತ ಚುನಾವಣೆಗಳು ಸುಗಮವಾಗಿ ನಡೆಯುವಂತೆ ಖಾತ್ರಿ ಪಡಿಸುವ ಉದ್ದೇಶದಿಂದ ಜಿಲ್ಲೆಗೆ ಭೇಟಿ ನೀಡಲಾಗಿದೆ

### ಅಲೆಮಾರಿಗಳಿಗೆ ಮೀಸಲಾತಿ ಅನ್ಯಾಯ

# ಹೋರಾಟ ನಿರಂತರದ ಎಚ್ಚರಿಕೆ

**ದಾವಣಗೆರೆ:** ರಾಜ್ಯ ಸರ್ಕಾರದ ಒಳ ಮೀಸಲಾತಿ ಬಡ ಅಲೆಮಾರಿಗಳ ಪಾಲಿಗೆ ಮರಣ ಶಾಸನವಾಗಿದೆ, ಅಲೆಮಾರಿಗಳಿಗೆ ಸಾಮಾಜಿಕ ನ್ಯಾಯ ಧಿಕ್ಕರಿಸಿದ ರಾಜ್ಯ ಸರ್ಕಾರದ ವಿರುದ್ಧ, ಹೋರಾಟ ನಡೆಸುವುದಾಗಿ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ – ಅಲೆಮಾರಿಗಳು, ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ 49 ಜಾತಿಗಳ ಮಹಾ ಒಕ್ಕೂಟ ಎಚ್ಚರಿಸಿದೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಒಕ್ಕೂಟದ ಜಿಲ್ಲಾ ಸಂಚಾಲಕ ಡಿ.ತಿಪ್ಪಣ, ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದಲ್ಲಿ ಆಯೋಗದ ವರದಿ ಪಡೆಯಲಾಗಿದೆ. ಆಯೋಗವು ಎಂಪಿರಕಲ್ ಡಾಟಾ (ದತ್ತಾಂಶ) ಆಧರಿಸಿ ವೈಜ್ಞಾನಿಕ, ಸಮೀಕ್ಷಾ ವರದಿ ಸರ್ಕಾರಕ್ಕೆ ಸಲ್ಲಿಸಿತ್ತು. ಸರ್ಕಾರ ವರದಿ ಪರಿಶೀಲಿಸಿ, ಪರಿಷ್ಕರಿಸಿ, ಅಸ್ಪೃಶ್ಯ ಎಡಗೈ ಮತ್ತು ಬಲಗೈ ಸಮುದಾಯಗಳಿಗೆ ತಲಾ ಶೇ 6 ರ ಮೀಸಲಾತಿ ಮತ್ತು ಸ್ಪೃಶ್ಯ ಸಮುದಾಯಗಳಿಗೆ ಶೇ 5ರ ಮೀಸಲಾತಿ ನೀಡಿದೆ. ಸ್ಪೃಶ್ಯ ಜಾತಿಗಳಾದ ಕೊರಚ, ಕೊರಮ. ಭೋವಿ ಮತ್ತು ಲಂಬಾಣಿ ಸಮುದಾಯದೊಂದಿಗೆ 59 ಅಲೆಮಾರಿ ಜಾತಿಗಳನ್ನೂ ಸೇರಿಸಿರುವುದರಿಂದ ಇಂದಿಗೂ ಶೈಕ್ಷಣಿಕ, ಸಾಮಾಜಿಕ, ಆರ್ಥಿಕವಾಗಿ ತೀರ ಹಿಂದುಳಿದು, ಸಣ್ಣಪುಟ್ಟ ಕಸುಬು ನಡೆಸುತ್ತಾ ಒಪ್ಪತ್ತಿನ ಕೂಳಿಗೂ ಕಷ್ಟಪಡುವ ಅಲೆಮಾರಿ ಸಮುದಾಯಕ್ಕೆ ಹೊಡೆತ ಬಿದ್ದಂತಾಗಿದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

# ಕ್ರೀಡಾಕೂಟಗಳು ಜೀವನೋತ್ಸಾಹ ಹೆಚ್ಚಿಸುವ ಸಾಧನ : ಪುರುಷೋತ್ತಮಾನಂದ ಶ್ರೀ

**ಚಿಕ್ಕಮಗಳೂರು:** ಕ್ರೀಡಾ ಕೂಟಗಳು ಜೀವನದ ಉತ್ಸಾಹವನ್ನು ಹೆಚ್ಚಿಸುವ ಸಾಧನ, ಸೋಲು, ಗೆಲುವಿನ ಮೆಟ್ಟಿಲಾಗಬೇಕು. ಕ್ರೀಡಾ ಮನೋಭಾವದಿಂದ ಪ್ರತಿಭೆಯನ್ನು ಅನಾವರಣಗೊಳಿಸಬೇಕು ಎಂದು ಹೊಸದುರ್ಗದ ಶ್ರೀ ಪುರುಷೋತ್ತಮಾನಂದ ಸ್ವಾಮೀಜಿ, ತಿಳಿಸಿದರು.

ಅವರು ಇಂದು ನಗರದ ನೇತಾಜಿ ಸುಭಾಷ್ ಚಂದ್ರಬೋಸ್ ಜಿಲ್ಲಾ ಆಟದ ಮೈದಾನದಲ್ಲಿ ಜಿ.ಪಂ, ತಾ.ಪಂ, ಶಾಲಾ ಶಿಕ್ಷಣ ಇಲಾಖೆ ಉಪವೀರ ಜಗದ್ಗುರು ವಿದ್ಯಾಸಂಸ್ಥೆ ಹಾಗೂ ಲಕ್ಯಾ ಗ್ರಾಮದ ಶ್ರೀ ಸಿದ್ದೇಶ್ವರ ಪ್ರೌಢಶಾಲೆ ಇವರುಗಳ ಸಹಯೋಗದೊಂದಿಗೆ ಆಯೋಜಿಸಿದ್ದ ಚಿಕ್ಕಮಗಳೂರು ಎಫ್ ವಲಯ ಮಟ್ಟದ ಪ್ರೌಢ ಶಾಲೆಗಳ ಕ್ರೀಡಾಕೂಟ–2025–26ರ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.

ಕ್ರೀಡೆಗಳು ಜೀವನೋತ್ಸಾಹದ ಜೊತೆಗೆ ದೈಹಿಕ, ಮಾನಸಿಕ, ಭೌದ್ಧಿಕ ಬೆಳವಣಿಗೆಗೆ ಹೆಚ್ಚು ಸಾಮರ್ಥ್ಯ ಪಡೆಯಲು ಸಾಧ್ಯವಾಗುತ್ತದೆ. ಸೋಲು–ಗೆಲುವು ಸಹಜ, ಪ್ರತಿಯೊಬ್ಬರೂ ಕ್ರೀಡಾ ಮನೋಭಾವದಿಂದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ಮೂಲಕ ನಿಮ್ಮಲ್ಲಿರುವ ಪ್ರತಿಭೆ ಹೊರಬರಲು ಸಾಧ್ಯ ಎಂದರು.

ತೀರ್ಪುಗಾರರು ತಾರತಮ್ಯ ಇಲ್ಲದಂತೆ ನ್ಯಾಯಸಮ್ಮತವಾದ ನಿರ್ಣಯ ಕೈಗೊಳ್ಳಲಿದ್ದಾರೆ. ಜೀವನದಲ್ಲಿ ಸಾಧನೆ ಮಾಡಬೇಕಾದರೆ ದೈಹಿಕವಾಗಿ, ಮಾನಸಿಕವಾಗಿ ಉತ್ತಮ ಸಾಮರ್ಥ್ಯ ಪಡೆಯಲು ಕ್ರೀಡೆಗಳಲ್ಲಿ ಭಾಗವಹಿಸಿ ಜೀವನೋತ್ಸಾಹ ಹೆಚ್ಚಿಸಿಕೊಳ್ಳಿ ಎಂದು ಸಾಂಕೇತಿಕವಾಗಿ ಹೇಳಿದರು.

ಕ್ರೀಡಾಕೂಟವನ್ನು ಉದ್ಘಾಟಿಸಿದ ಶಾಸಕ ಹೆಚ್.ಡಿ. ತಮ್ಮಯ್ಯ ಮಾತನಾಡಿ, ಗ್ರಾಮೀಣ ಕ್ರೀಡೆಗಳು ದೇಶದ ಬಹುದೊಡ್ಡ ಆಸ್ತಿ. ವಿದ್ಯಾರ್ಥಿಗಳು ಹೆಚ್ಚು ಗ್ರಾಮೀಣ



ಮಟ್ಟದ ಕ್ರೀಡೆಗಳಲ್ಲಿ ಸ್ಪರ್ಧಿಸುವ ಮೂಲಕ ಪೂರ್ವಿಕರ ಕ್ರೀಡಾಕೂಟವನ್ನು ಉಳಿಸಿ ಬೆಳೆಸ ಬೇಕು ಎಂದರು.

ಆಗಸ್ಟ್ ಮತ್ತು ಸೆಪ್ಟೆಂಬರ್ ತಿಂಗಳಿಂದ ನಡೆಯುತ್ತಿರುವ ಕ್ರೀಡಾಕೂಟಗಳು ವಿದ್ಯಾರ್ಥಿಗಳಿಗೆ ಬಹಳಷ್ಟು ಉಪಯೋಗಿಯಾಗಿದೆ ಎಂದ ಅವರು, ಗ್ರಾಮೀಣ ಭಾಗದ ಕ್ರೀಡೆಗಳು ನಶಿಸುತ್ತಿರುವ ಕಾಲದಲ್ಲಿ ವಿದ್ಯಾರ್ಥಿಗಳು ಇಂದಿಗೂ ದೇಹಕ್ಕೆ ಶಕ್ತಿ ತುಂಬುವಂಥ ಕಬ್ಬಡ್ಡಿ ಕ್ರೀಡೆ ಬೆಳೆಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಕ್ರೀಡಾಕೂಟಕ್ಕೆ ಸರ್ಕಾರದ ಜೊತೆಗೆ ಸಾರ್ವಜನಿಕರು, ದಾನಿಗಳು ಹಾಗೂ ಸ್ಥಳೀಯ ಸಹಭಾಗಿತ್ವದಲ್ಲಿ ನಡೆಯುತ್ತಿರುವುದು ಒಳ್ಳೆಯ ಬೆಳವಣಿಗೆ. ಶಿಕ್ಷಕರು ಕೂಡ ಮಕ್ಕಳಲ್ಲಿರುವ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ಇದರಿಂದ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ವಿದ್ಯಾರ್ಥಿಗಳು ಮುಂಚೂಣಿಗೆ ಬರಲು ಸಾಧ್ಯ ಎಂದು ಹೇಳಿದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ರೇಖಾ ಹುಲಿಯಪ್ಪ ಮಾತನಾಡಿ, ಕ್ರೀಡೆಗಳು ಸರ್ವತೋಮುಖ ಅಭಿವೃದ್ಧಿಗೆ ಸಹಕಾರಿ. ಸ್ಪರ್ಧೆಗಳಲ್ಲಿ ಪ್ರಯತ್ನಗಳಿರಬೇಕು. ಗೆದ್ದರು ಖುಷಿಯಿರಲಿ, ಸೋತರೇ ಮತ್ತೊಮ್ಮೆ ಪ್ರಯ ತ್ನಿಸುವ ಛಲವು ಇದ್ದಲ್ಲಿ, ಭವಿಷ್ಯದಲ್ಲಿ ಎತ್ತರ ಮಟ್ಟಕ್ಕೆ ಕೊಂಡೊಯ್ಯಲು ಸಾಧ್ಯ ಎಂದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ, ಸಂಯೋಜಕ ಕೃಷ್ಣಮೂರ್ತಿ ಅರಸ್, ಲಕ್ಯಾ ಗ್ರಾ.ಪಂ. ಅಧ್ಯಕ್ಷ ಹನೀಫ್, ಉಪಾಧ್ಯಕ್ಷ ಕಾಂತರಾಜ್, ಹಾಗೂ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ವಿವಿಧ ಇಲಾಖೆ ಶಿಕ್ಷಕರು ಉಪಸ್ಥಿತರಿದ್ದರು.

ಮೊದಲಿಗೆ ಶಾಲೆಯ ಮುಖ್ಯೋಪಾಧ್ಯಾಯ ನರಸಿಂಹಮೂರ್ತಿ ಸ್ವಾಗತಿಸಿ, ಚಂದ್ರಶೇಖರ್ ನಿರೂಪಿಸಿ, ಕೊನೆಯಲ್ಲಿ ವಂದಿಸಿದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ನಿಮ್ಮ ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ಸಮಸ್ಯೆಗಳನ್ನು ತಪ್ಪಿಸುವುದು ಒಳ್ಳೆಯದು. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

### ವೃಷಭ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದಾದರೂ ನಿಮ್ಮ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ ಹಾಗೂ ಜೀವನದ ರಕ್ಷಣೆ ನಿಮ್ಮ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

### ಮಿಥುನ ರಾಶಿ

ಒಟ್ಟಾರೆ ಆರೋಗ್ಯ ಉತ್ತಮವಾಗಿದ್ದರೂ ಪ್ರಯಾಣ ಒತ್ತಡಮಯವೂ ಮತ್ತು ಕಷ್ಟಕರವೂ ಆಗಿರುತ್ತದೆ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ನಿಮ್ಮ ಹೆತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ. ಪ್ರೀತಿ ಮತ್ತು ಪ್ರಣಯ ನಿಮ್ಮನ್ನು ಸಂತೋಷದ ಮನೋಭಾವದಲ್ಲಿಡುತ್ತದೆ. ನೀವು ಎಂದಾದರೂ ಶುಂಠಿ ಮತ್ತು ಗುಲಾಬಿಗಳ ಚಾಕೋಲೇಟ್ ಅನ್ನು ಆಘ್ರಾಣಿಸಿದ್ದೀರೇ? ನಿಮ್ಮ ಪ್ರೇಮ ಜೀವನ ಇಂದು ಈ ರೀತಿಯಾಗಿರುತ್ತದೆ.

### ಕರ್ಕ ರಾಶಿ

ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು.

### ಸಿಂಹ ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಆಶೀರ್ವಾದ ಹಾಗೂ ಅದೃಷ್ಟ ನಿಮ್ಮ ಬಳಿ ಬರುತ್ತಿದ್ದ ಹಾಗೆ ನಿಮ್ಮ ಬಯಕೆಗಳು ಪೂರೈಸಲ್ಪಡುತ್ತವೆ – ಮತ್ತು ಹಿಂದಿನ ದಿನಗಳ ಶ್ರಮ ಈಗ ಫಲ ನೀಡುತ್ತದೆ.

### ಕನ್ಯಾ ರಾಶಿ

ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

### ತುಲಾ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ಪತ್ನಿಯ ವ್ಯವಹಾರಗಳಲ್ಲಿ ನಿಮ್ಮ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು.

### ವೃಶ್ಚಿಕ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

### ಧನು ರಾಶಿ

ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ.

### ಮಕರ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ.

ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ. ಪತ್ನಿಯ ವ್ಯವಹಾರಗಳಲ್ಲಿ ನಿಮ್ಮ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು.

### ಕುಂಭ ರಾಶಿ

ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಇವತ್ತು ಡೇಟ್‌ಗೆ ಹೋದಲ್ಲಿ ವಿವಾದಾತ್ಮಕ ವಿಷಯಗಳನ್ನು ಕೆದಕುವುದನ್ನು ತಪ್ಪಿಸಿ.

### ಮೀನ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ನಿಮ್ಮ ಹವ್ಯಾಸಗಳನ್ನು

ಮುಂದುವರಿಸುವ ಮತ್ತು ಕುಟುಂಬದ ಸದಸ್ಯರಿಗೆ ಸಹಾಯ ಮಾಡುವ ಮೂಲಕ ನೀವು ಸಮಯ ಕಳೆಯಬಹುದು. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ಆರಾಮ– ಆನಂದ ಮತ್ತು ಭಾವಪರವಶತೆಯನ್ನು ನೀವು ಕಾಣುವುದರಿಂದ ನಿಮ್ಮ ಕೆಲಸ ಹಿಂದೆ ಬೀಳುತ್ತದೆ.

## ಪ್ಲಾಸ್ಟಿಕ್ ಮುಕ್ತ ಕಾರ್ಯಗಾರದಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ

# ಪ್ಲಾಸ್ಟಿಕ್ ಮುಕ್ತ ಪರಿಸರ ಅಭಿಯಾನದಲ್ಲಿ ಮಕ್ಕಳು ಚಾಂಪಿಯನ್ ಆಗಬೇಕು




**ದಾವಣಗೆರೆ:** ದೇಶದ ಭವಿಷ್ಯ ಮಕ್ಕಳು ಹಾಗೂ ಯುವ ಸಮುದಾಯದ ಮೇಲಿದೆ. ಭವಿಷ್ಯದ ಪೀಳಿಗೆಗೆ ಉತ್ತಮ ಪರಿಸರ, ಆರೋಗ್ಯ ಉಳಿಸಬೇಕಾದರೆ ಪ್ಲಾಸ್ಟಿಕ್ ಮುಕ್ತ ಜಿಲ್ಲೆಯನ್ನಾಗಿಸಲು ಮಕ್ಕಳು ಇದರ ಚಾಂಪಿಯನ್ ಗಳಾಗಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಧರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಶಾಲಾ ಶಿಕ್ಷಣ ಇಲಾಖೆ ಹಾಗೂ ಅಮೃತ ವಿದ್ಯಾಲಯಂ ಸಹಯೋಗದಲ್ಲಿ ಸೋಮವಾರ ನಗರದ ಅಮೃತ ವಿದ್ಯಾಲಯಂ ಸಂಸ್ಥೆಯಲ್ಲಿ ಆಯೋಜಿಸಲಾಗಿದ್ದ ಪ್ಲಾಸ್ಟಿಕ್ ಮುಕ್ತ ಅಭಿಯಾನದಡಿ ಪ್ಲಾಸ್ಟಿಕ್ ತ್ಯಜಿಸಿ ಪರಿಸರ ಮತ್ತು ಆರೋಗ್ಯ ಉಳಿಸಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತ ನಗರವಾಗಿಸಲು ಹಲವಾರು ಯೋಜನೆ, ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅದರಂತೆ ಸಾಗರ ಮಿತ್ರ ಅಭಿಯಾನದಡಿ 5 ರಿಂದ 9ನೇ ತರಗತಿ ಮಕ್ಕಳನ್ನು ಬಳಸಿಕೊಂಡು ಪ್ಲಾಸ್ಟಿಕ್ ಮುಕ್ತ ಜಿಲ್ಲೆಯಾಗಿಸಲು ಪಣತೊಡಲಾಗಿದೆ. ಸರ್ಕಾರದಿಂದ ಹಸಿ ಕಸ, ಒಣ ಕಸ ವಿಂಗಡಿಸಿ ಕೊಡಬೇಕೆಂಬ ಸುತ್ತೋಲೆ ಇದೆ. ಆದರೂ ಸಾರ್ವಜನಿಕರು ತ್ಯಾಜ್ಯವನ್ನು ಸರಿಯಾದ ರೀತಿಯಲ್ಲಿ ವಿಂಗಡಿಸಿ ವೈಜ್ಞಾನಿಕವಾಗಿ ವಿಲೇವಾರಿ ಮಾಡುವುದಿಲ್ಲ. ನಮ್ಮ ಮನೆ ಸುತ್ತ ಮುತ್ತ ಸರಿ ಇದ್ದರೆ ಸಾಕೆಂಬ ಮನಃಸ್ಥಿತಿ ಹಲವರಲ್ಲಿದೆ. ದಾವಣಗೆರೆ ನಗರದಲ್ಲಿ ಸುಮಾರು 6 ರಿಂದ 6.5 ಲಕ್ಷ ಜನತೆ ಇದ್ದು, ಸ್ವಚ್ಛತೆಗೆ ಕೇವಲ 400 ಪೌರಕಾರ್ಮಿಕರಿದ್ದಾರೆ.

ಯಾರೇ ಆಗಲಿ ಕಸ ಅಥವಾ ಇತರೆ ತ್ಯಾಜ್ಯ ರಸ್ತೆ ಬದಿ ಎಲ್ಲೆಂದರಲ್ಲಿ ಎಸೆಯುವುದು ಕಂಡಾಗ ಪ್ರಶ್ನಿಸುವ ಗುಣ ಬೆಳೆಸಿಕೊಳ್ಳಬೇಕು. ಹಾಗೆ ಮಾಡಲು ಆಗದಿದ್ದಲ್ಲಿ ಪ್ರಸ್ತುತ ಎಲ್ಲರೂ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣ ಬಳಸುವರು. ಅಂಥಹ ದೃಶ್ಯಗಳನ್ನು ಸೆರೆ ಹಿಡಿದು ಸಾಮಾಜಿಕ ಜಾಲತಾಣಗಳಲ್ಲಿ ಅಥವಾ ಸಂಬಂಧಿಸಿದ ಇಲಾಖೆಗೆ ಮಾಹಿತಿ ನೀಡಿದಲ್ಲಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮಕ್ಕಳಿಗೆ ತಿಳಿ ಹೇಳಿದರು.

ಗಣೇಶ ವಿಗ್ರಹ ವಿಸರ್ಜನೆ ವೇಳೆ ಆಗುವ ತ್ಯಾಜ್ಯ ಕಡಿಮೆಗೊಳಿಸಿ ಪರಿಸರ ಸಂರಕ್ಷಿಸಬೇಕು. ಮುಂದಿನ ದಿನಗಳಲ್ಲಿ ರಸ್ತೆ ಬದಿಗಳಲ್ಲಿ ಕಸ ಎಸೆಯುವ ವ್ಯಕ್ತಿ ಮನೆ ಮುಂದೆ ಡಂಗೂರ ಒಡೆಯುವ ಕೆಲಸ ಮಾಡಲಿದ್ದೇವೆ ಎಂದ ಅವರು, ಮನೆಯಲ್ಲಿ ಬಳಸಿ ಬಿಸಾಡುವ ಏಕ ಬಳಕೆ ಪ್ಲಾಸ್ಟಿಕ್ ಮತ್ತು ಇತರೆ ತ್ಯಾಜ್ಯ ಸಂಗ್ರಹಿಸಿ ವಾರಕ್ಕೊಮ್ಮೆ ಶಾಲೆ, ಕಾಲೇಜಗಳ ಮುಖೇನ ಸ್ಥಳೀಯ ಸಂಸ್ಥೆಗಳಿಗೆ ನೀಡಿ ಪರಿಸರ ಮಾಲಿನ್ಯ ತಪ್ಪಿಸಬೇಕು. ಸಮಾಜದಲ್ಲಿ ಆರೋಗ್ಯವಂತರಾಗಿ ಬದುಕಬೇಕಾದರೆ ಇಂತಹ ಒಳ್ಳೆಯ ಗುಣಗಳನ್ನು ಬೆಳೆಸಿಕೊಳ್ಳಬೇಕು. ಉತ್ತಮ ಕೆಲಸ ಮಾಡಬೇಕಾದರೆ ತೊಂದರೆ ಸಹಜ, ಅವುಗಳನ್ನು ನಿಭಾಯಿಸಿ ಯಶಸ್ಸು ಕಾಣಬೇಕು. ಇಂತಹ ಕೆಲಸ ತಮ್ಮ ಮನೆಗಳಿಂದಲೇ ಮೊದಲು ಆರಂಭವಾಗಬೇಕು. ಪ್ಲಾಸ್ಟಿಕ್ ಮುಕ್ತ ಅಭಿಯಾನದಲ್ಲಿ ನೀವೆಲ್ಲ ಚಾಂಪಿಯನ್ ಆಗಬೇಕು ಎಂದರು.

ಇದೇ ಸಂದರ್ಭದಲ್ಲಿ ಮಕ್ಕಳು ಸಂಗ್ರಹಿಸಿ ತಂದಿದ್ದ ಪ್ಲಾಸ್ಟಿಕ್ ಮತ್ತು ಇತರೆ ತ್ಯಾಜ್ಯವನ್ನು ಸ್ವತಃ ಜಿಲ್ಲಾಧಿಕಾರಿಗಳೇ ಚೀಲಕ್ಕೆ ತುಂಬಿಕೊಂಡು ಪ್ಲಾಸ್ಟಿಕ್ ಮುಕ್ತ ಅಭಿಯಾನದಡಿ ಮಕ್ಕಳಿಗೆ ಜಾಗೃತಿ ಮೂಡಿಸಿದರು.

ಕಾರ್ಯಗಾರದಲ್ಲಿ ಡಿಡಿಪಿಐ ಕೊಟ್ರೇಶ್, ಅಮೃತ ವಿದ್ಯಾಲಯಂ ಶಾಲೆಯ ಪ್ರಾಂಶುಪಾಲರಾದ ಎನ್.ಸಿ.ವಿವೇಕ್, ಎನ್.ಪ್ರತಿಭಾ, ಪ್ರತೀಕ್ ಹಾಗೂ ವಿದ್ಯರ್ಥಿಗಳು ಸೇರಿದಂತೆ ಶಾಲಾ ಸಿಬ್ಬಂದಿ ಉಪಸ್ಥಿತರಿದ್ದರು.

## ‘ಸತ್ಯಾನಾಸ್ತಿ ಪರೋಧರ್ಮಃ’ ಮೌಲ್ಯ ಸಾರ್ವಕಾಲಿಕ




**ಗದಗ:** ‘ಸತ್ಯಕ್ಕೆ ಸಾವಿಲ್ಲ, ಸುಳ್ಳಿಗೆ ಸುಖವಿಲ್ಲ’ ನಾಣ್ಣುಡಿ ಸಾರ್ವಕಾಲಿಕ ಮೌಲ್ಯವಾಗಿದ್ದು, ಸುಳ್ಳು, ಮೋಸ, ವಂಚನೆಯನ್ನು ತೊರೆದು ಪ್ರಾಮಾಣಿಕವಾಗಿ ಬಾಳುವುದೇ ಸತ್ಯಧರ್ಮವಾಗಿದೆ. ತನ್ನ ನಡೆ–ನುಡಿಯನ್ನು ಉತ್ತಮವಾಗಿಟ್ಟುಕೊಂಡು ಸತ್ಯವಾದ ಧರ್ಮ, ದೇವರು, ಗುರು, ಶಾಸ್ತ್ರವವನ್ನು ನಂಬಿ ತಿಳಿದು ಪಾಲಿಸುವುದೇ ಉತ್ತಮ ಸತ್ಯವಾಗಿದ್ದು, ಸತ್ಯಧರ್ಮವೇ ಸಾರ್ವಕಾಲಿಕ ಮೌಲ್ಯವಾಗಿದೆ ಎಂದು ಸುನೀಲ ಖೋದಾನಪುರ ಹೇಳಿದರು. ಅವರು ಗದಗ ಜಿಲ್ಲಾ ದಿಗಂಬರ ಜೈನ ಸಂಘವು ‘ದಶಲಕ್ಷಣ ಪರ್ವಾಚರಣೆ ಮತ್ತು ಸಮಾಜ ಸಂಪರ್ಕ ಸಭೆ’ ನಿಮಿತ್ತ ಮುಂಡರಗಿ ತಾಲ್ಲೂಕಿನ ಹಮ್ಮಿಗಿಯ ಚಂದ್ರಪ್ರಭನಾಥ ಬಸದಿಯಲ್ಲಿ ಹಮ್ಮಿಕೊಂಡಿದ್ದ ‘ಉತ್ತಮ ಸತ್ಯಧರ್ಮ’ ಕುರಿತು ಉಪನ್ಯಾಸ ಮಾಡುತ್ತ, ಸತ್ಯವಂತನು ಸರ್ವರಿಂದ ಗೌರವಕ್ಕೊಳಗಾಗಿ ಸದಾಕಾಲ ಸ್ಮರಣೀಯನಾಗಿರುತ್ತಾನೆಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಭುಜಬಲಿ ಗುಂಜಾಳ ಅವರು ವಿಕಾರ ಭಾವನೆಗಳನ್ನು ತ್ಯಜಿಸಿ, ಮಾನವೀಯ ಮೌಲ್ಯಗಳನ್ನು ಹೊಂದಿರುವ ಉದಾತ್ತ ಭಾವನೆಗಳನ್ನು ಸ್ವೀಕರಿಸುವುದೇ ದಶಲಕ್ಷಣ ಪರ್ವದ ಉದ್ದೇಶವಾಗಿದ್ದು,

ಅಸತ್ಯದಿಂದ ಅಪಕೀರ್ತಿ ಮತ್ತು ನಿಂದೆಗಳು ಪ್ರಾಪ್ತವಾಗುವುದರ ಜೊತೆಗೆ ಆಪ್ತರು, ಇಷ್ಟರು, ಬಂಧುಗಳು ದೂರವಾಗುತ್ತಾರೆಂದು ಹೇಳಿದರು. ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ, ಡಾ. ಬಾಬುರಾವ ಜೈನರ, ಯಶವಂತ ಸಿದ್ದಣ್ಣವರ ಸೇರಿದಂತೆ ಸ್ಥಳೀಯ ಜೈನ ಪ್ರಮುಖರು, ಶ್ರಾವಕರು, ಶ್ರಾವಿಕೆಯರು ಭಾಗವಹಿಸಿದ್ದರು.

## ಗಣಪತಿ ಪ್ರತಿಷ್ಠಾಪನೆ ಪ್ರಿನ್ಸ್ ವಿನಾಯಕ ಗ್ರೂಪ್



**ದಾವಣಗೆರೆ:** ನಗರದ ಪಿಜೆ ಬಡಾವಣೆಯಲ್ಲಿ ಪ್ರಿನ್ಸ್ ವಿನಾಯಕ ಗ್ರೂಪ್ ವತಿಯಿಂದ 17ನೇ ವರ್ಷದ ಪ್ರತಿಷ್ಠಾಪಿಸಲಾದ ವಿನಾಯಕ ಮಹೋತ್ಸವವನ್ನು ಇಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಅವರು ಭೇಟಿ ನೀಡಿದರು.

ಈ ಸಂದರ್ಭದಲ್ಲಿ ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿ ಅವರು ಉಪಸ್ಥಿತರಿದ್ದರು ಹಾಗೂ ಪ್ರಿನ್ಸ್ ವಿನಾಯಕ ಬಳಗದ ನಿಖಿತ್ ಶೆಟ್ಟಿ ನಿಖಿತ್ ಶೆಟ್ಟಿ ಪವನ್ (ಪಾಂಡು ಆಎ) ಚೇತನ್ ವಿನಯ್ ಬನ್ನಿಕಟ್ಟಿ ರೋಹನ್ ಸುಮಿತ್ ಪ್ರತೀಕ್ ವಿನಯ್ ಗೋಪಾಲ್ (ಗೋಪಿ) ಯುವರಾಜ್ ಇನ್ನು ಮುಂತಾದವರು ಇದ್ದರು

# ಶಿಕ್ಷಕರ ನೇಮಕಾತಿಯಲ್ಲಿ ಅಕ್ರಮ

**ಕೋಲ್ಕತ್ತಾ:** ಶಿಕ್ಷಕರ ನೇಮಕಾತಿಯಲ್ಲಿನ ಅಕ್ರಮಗಳ ತನಿಖೆಗೆ ಸಂಬಂಧಿಸಿದಂತೆ ಇ.ಡಿ. ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ಟಿಎಂಸಿ ಶಾಸಕ ಜಿಬನ್ ಕೃಷ್ಣ ಸಹಾ ಅವರ ನಿವಾಸ ಸೇರಿ ಹಲವೆಡೆ ದಾಳಿ ನಡೆಸುತ್ತಿದೆ.

ಇಡಿ ದಾಳಿಯ ಬಗ್ಗೆ ತಿಳಿಯುತ್ತಿದ್ದಂತೆ,ಶಾಸಕರು ಮನೆಯಿಂದ ಪರಾರಿಯಾಗಲು ಹಿಂದಿನ ಬಾಗಿಲಿನಿಂದ ಹೊರಗೆ ಓಡಿ ಕಂಪೌಂಡ್ ಹಾರಿದ್ದಾರೆ.ನಂತರ ಇದನ್ನು ಕಂಡ ಪೊಲೀಸರು,ಅಧಿಕಾರಿಗಳು ಅವರನ್ನು ಬೆನ್ನಟ್ಟಿ ಹಿಡಿದು ಬಂಧಿಸಲಾಗಿದೆವಿಚಾರಣೆ ನಡೆಸುತ್ತಿದ್ದಾರೆ ಎಂದು ಇಡಿ ಅಧಿಕಾರಿ ತಿಳಿಸಿದ್ದಾರೆ.

ಶಾಲಾ ಶಿಕ್ಷಕರ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಬಿರ್ಭಮ್ ಜಿಲ್ಲೆಯ ವ್ವ್ಯಕ್ತಿಯೊಬ್ಬ ನಡೆಸಿದ ಹಣಕಾಸಿನ ವಹಿವಾಟಿನ ಮಾಹಿತಿಯ ಆಧಾರದ ಮೇಲೆ, ದಾಳಿ ನಡೆಸಲಾಗಿದೆ ಎಂದು ಅವರು ಹೇಳಿದರು.ಹಗರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ಸಂಸ್ಥೆ ಈ ಹಿಂದೆ ಸಹಾ ಅವರ ಪತ್ನಿಯನ್ನು ವಿಚಾರಣೆ ನಡೆಸಿತ್ತು.

ಶಾಲಾ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಸಿಬಿಐ ಏಪ್ರಿಲ್ 2023 ರಲ್ಲಿ ಸಹಾ ಅವರನ್ನು ಬಂಧಿಸಿತ್ತು. ಈ ವರ್ಷದ ಮೇ ತಿಂಗಳಲ್ಲಿ ಅವರು ಜಾಮೀನಿನ ಮೇಲೆ ಬಿಡುಗಡೆಯಾದರು.

## ಕುಂದು ಕೊರತೆ ಸಭೆ

**ಚಿತ್ರದುರ್ಗ:** ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮ್ಮದ್ ಅವರ ಅಧ್ಯಕ್ಷತೆಯಲ್ಲಿ ಸೆ.03 ರಂದು ಮಧ್ಯಾಹ್ನ 3ಕ್ಕೆ ಚಿತ್ರದುರ್ಗ ನಗರದ ತಾಲ್ಲೂಕು ಪಂಚಾಯತ್ ಕಾರ್ಯಾಲಯದ ಹಿಂಭಾಗದಲ್ಲಿರುವ ಜಿಲ್ಲಾ ನೌಕರರ ಸಂಘದ ಭವನದಲ್ಲಿ “ಅಲ್ಪಸಂಖ್ಯಾತರ ಸಮುದಾಯದ ಸಾರ್ವಜನಿಕ ಕುಂದು ಕೊರತೆ ಸಭೆ”ಯನ್ನು ಆಯೋಜಿಸಲಾಗಿದೆ.

ಅಲ್ಪಸಂಖ್ಯಾತರ ಸಮುದಾಯದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಶಿಕ್ಷಕರ ದಿನಾಚರಣೆ, ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ

**ದಾವಣಗೆರೆ;** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಸೆಪ್ಟೆಂಬರ್ 5 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಹದಡಿ ರಸ್ತೆಯಲ್ಲಿರುವ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ಡಾ.ಸರ್ವಪಲ್ಲಿ ರಾಧಾಕೃಷ್ಣರವರ ಜನ್ಮ ದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆ ಅಂಗವಾಗಿ ಜಿಲ್ಲಾ ಅತ್ಯುತ್ತಮ ಶಿಕ್ಷಕರ ಪ್ರಶಸ್ತಿ ಪುರಸ್ಕೃತರಿಗೆ ಹಾಗೂ ದಾವಣಗೆರೆ ಉತ್ತರ ಮತ್ತು ದಕ್ಷಿಣ ವಲಯದ ನಿವೃತ್ತ ಶಿಕ್ಷಕರಿಗೆ ಸನ್ಮಾನ ಸಮಾರಂಭವನ್ನು ಆಯೋಜಿಸಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸುವರು. ವಿಧಾನಸಭಾ ಸದಸ್ಯರಾದ ಡಾ. ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಚಿತ್ರಕಲಾ ಪ್ರದರ್ಶನ ಭಾವಚಿತ್ರಗಳ ಅನಾವರಣ ಮಾಡುವರು.

ಮುಖ್ಯ ಅತಿಥಿಗಳಾಗಿ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಆಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎನ್.ಜಯದೇವನಾಯ್ಕ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಪಾಲಿಕೆ ಆಯುಕ್ತೆ ರೇಣುಕಾ, ತಹಶೀಲ್ದಾರ್ ಅಶ್ವಥ್, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ, ಕರ್ನಾಟಕ ರಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ವೀರೇಶ್. ಎಸ್.ಒಡೆಲ್ಯಪುರ ಭಾಗವಹಿಸುವರು.


**ಮಾನ್ಯ ಗೌರವನ್ವಿತ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ ಜೆ.ಎಮ್ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್. ನಂ.450 /2025**

**ಅರ್ಜಿದಾರರು :** ಶ್ರೀಮತಿ ಲತಾ ಕೋಂ ಕೃಷ್ಣಚಾರಿ ವಯಸ್ಸು 55 ವರ್ಷ ವಾಸ: ಹೆಚ್ ಕಲ್ಪನಹಳ್ಳಿ, ದಾವಣಗೆರೆ ತಾ ಮತ್ತು ಜಿಲ್ಲೆ.

–ವಿರುದ್ಧ–

**ಎದುರುದಾರರು :** ಜನನ ಮತ್ತು ಮರಣ ನೋಂದಣಾಧಿಕಾರಿಗಳು ತಹಶೀಲ್ದಾರ್ ಕಛೇರಿ, ದಾವಣಗೆರೆ

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ಸಹೋದರನಾದ ಶ್ರೀ ಜಯಣ್ಣ ಬಿನ್ ಚೆನ್ನಾಚಾರಿ ಇವರು ದಿನಾಂಕ: 20–09–1993 ರಂದು, ದಾವಣಗೆರೆ ತಾಲ್ಲುಕು, ಹೆಚ್ ಕಲ್ಪನಹಳ್ಳಿ ಗ್ರಾಮದ, ಸ್ವಗೃಹದಲ್ಲಿ ವಯೋಮರಣ ಹೊಂದಿರುವ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 4/10/25 ರ ಬೆಳಗ್ಗೆ 11=00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ,

ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:2/9/25.ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/– ಅರ್ಜಿದಾರರ ಪರ ವಕೀಲರು (ಶ್ರೀಅರುಣ್ ಕುಮಾರ್ ಎಮ್)

ಸಹಿ/– ಶಿರಸ್ತೇದಾರರು ಮಾನ್ಯ ಪ್ರಧಾನ ಸಿವಿಲ್ ಮತ್ತು, ಸಿ.ಜೆ.ಎಮ್ ನ್ಯಾಯಾಲಯ ದಾವಣಗೆರೆ



**ಮಾನ್ಯ ಗೌರವನ್ವಿತ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ ಜೆ.ಎಮ್ ನ್ಯಾಯಾಲಯ ದಾವಣಗೆರೆ**

**ಸಿ.ಆರ್.ಮಿಸ್. ನಂ.451 /2025**

**ಅರ್ಜಿದಾರರು :** ಶ್ರೀಮತಿ ಲತಾ ಕೋಂ ಕೃಷ್ಣಚಾರಿ ವಯಸ್ಸು 55 ವರ್ಷ ವಾಸ: ಹೆಚ್ ಕಲ್ಪನಹಳ್ಳಿ, ದಾವಣಗೆರೆ ತಾ ಮತ್ತು ಜಿಲ್ಲೆ.

–ವಿರುದ್ಧ–

**ಎದುರುದಾರರು :** ಜನನ ಮತ್ತು ಮರಣ ನೋಂದಣಾಧಿಕಾರಿಗಳು ತಹಶೀಲ್ದಾರ್ ಕಛೇರಿ, ದಾವಣಗೆರೆ

**ಸಾರ್ವಜನಿಕ ನೋಟಿಸ್**

ಮೇಲ್ಕಂಡ ಪ್ರಕರಣವನ್ನು ಅರ್ಜಿದಾರರ ಸಹೋದರನಾದ ಕೃಷ್ಣಚಾರಿ ಬಿನ್ ಚೆನ್ನಚಾರಿ ಇವರು ದಿನಾಂಕ: 04–11–2006 ರಂದು, ದಾವಣಗೆರೆ ತಾಲ್ಲುಕು, ಹೆಚ್ ಕಲ್ಪನಹಳ್ಳಿ ಗ್ರಾಮದ, ಸ್ವಗೃಹದಲ್ಲಿ ವಯೋಮರಣ ಹೊಂದಿರುವ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ.

ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 4/10/25 ರಂದು ಬೆಳಗ್ಗೆ 11=00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ,

ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ:2/9/25.ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/– ಅರ್ಜಿದಾರರ ಪರ ವಕೀಲರು (ಶ್ರೀಅರುಣ್ ಕುಮಾರ್ ಎಮ್)

ಸಹಿ/– ಶಿರಸ್ತೇದಾರರು ಮಾನ್ಯ ಪ್ರಧಾನ ಸಿವಿಲ್ ಮತ್ತು, ಸಿ.ಜೆ.ಎಮ್ ನ್ಯಾಯಾಲಯ ದಾವಣಗೆರೆ

## ಯಡಿಯೂರಪ್ಪ, ಎಚ್‌ಡಿ ರೇವಣ್ಣ, ರನ್ಯಾ ರಾವ್ ವಿರುದ್ಧದ ವಿವಿಧ ಪ್ರಕರಣಗಳ ಕರ್ನಾಟಕ ಹೈಕೋರ್ಟ್ ವಿಚಾರಣೆ



**ಬೆಂಗಳೂರು:** ಬಿಎಸ್ ಯಡಿಯೂರಪ್ಪ, ಎಚ್‌ಡಿ ರೇವಣ್ಣ, ರನ್ಯಾ ರಾವ್ ವಿರುದ್ಧದ ವಿವಿಧ ಪ್ರಕರಣಗಳ ವಿಚಾರಣೆಯನ್ನು ಮಂಗಳವಾರ ಕರ್ನಾಟಕ ಹೈಕೋರ್ಟ್ ನಡೆಸಿತು. ಎಲ್ಲಾ ಪ್ರಕರಣಗಳ ವಿಚಾರಣೆ–ಯು ಮುಂದೂಡಲಾಗಿದ್ದು, ರೇವಣ್ಣ ಹಾಗೂ ಯಡಿಯೂರಪ್ಪ ಅವರಿಗೆ ರಿಲೀಫ್ ಸಿಕ್ಕಿದೆ.

ಮನೆಕೆಲಸದ ಮಹಿಳೆಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಸಂಬಂಧ ಜೆಡಿಎಸ್ ಶಾಸಕ ಎಚ್ ಡಿ ರೇವಣ್ಣ ವಿರುದ್ಧ ಪ್ರಕರಣ ದಾಖಲಾಗಿತ್ತು. ಈ ಪ್ರಕರಣದ ರದ್ದತಿ ಕೋರಿ ರೇವಣ್ಣ ಸಲ್ಲಿಸಿರುವ ಅರ್ಜಿಯ ವಿಚಾರಣೆಯು ಹೈಕೋರ್ಟ್‌ನಲ್ಲಿ ನ್ಯಾಯಮೂರ್ತಿ ಎಂ ಐ ಅರುಣ್ ಅವರ ಏಕಸದಸ್ಯ ಪೀಠವು ನಡೆಸಿತು. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕ ಪ್ರೊ. ರವಿವರ್ಮ ಕುಮಾರ್ ಹಾಜರಾಗಿದ್ದು, ಮೆರಿಟ್ ಮೇಲೆ ಯಾವುದೇ ಪ್ರಕರಣ ಇಲ್ಲದಿರುವುದರಿಂದ ರೇವಣ್ಣ ಅರ್ಜಿಯನ್ನು ವಜಾಗೊಳಿಸಬೇಕು ಎಂದು ಪೀಠಕ್ಕೆ ಮನವಿ ಮಾಡಿದರು.

ಘಟನೆ ನಡೆದು ಮೂರು ವರ್ಷಗಳ ಬಳಿಕ ಪ್ರಕರಣ ದಾಖಲಿಸಲಾಗಿದ್ದು, ಆರೋಪಿತ ಅಪರಾಧಕ್ಕೆ ಕಡಿಮೆ ಶಿಕ್ಷೆ ಇರುವುದರಿಂದ ಅದನ್ನು ವಜಾಗೊಳಿಸಬೇಕು ಎಂದು ಅರ್ಜಿದಾರರ ಪರ ವಕೀಲರು ಮನವಿ ಮಾಡಿದರು. ಆರೋಪ ಪಟ್ಟಿ ಮತ್ತು ಸಂಜ್ಞೇ ಪರಿಗಣಿಸಿರುವುದನ್ನು ಪ್ರಶ್ನಿಸದೇ ಇರುವುದರಿಂದ ಅರ್ಜಿಯು ಊರ್ಜಿತವಾಗುವುದಿಲ್ಲ ಎಂದು ಸರ್ಕಾರಿ ಅಭಿಯೋಜಕರು ಕೋರ್ಟ್‌ನ ಗಮನಕ್ಕೆ ತಂದರು. ಈ ಎಲ್ಲಾ ಅಂಶಗಳನ್ನು ದಾಖಲಿಸಿದ ಕೋರ್ಟ್ ಅರ್ಜಿ ವಿಚಾರಣೆಯನ್ನು ಸೆಪ್ಟೆಂಬರ್ 10 ಕ್ಕೆ ಮುಂದೂಡಿತು.

ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ. ಈ ಪ್ರಕರಣವನ್ನು ರದ್ದುಪಡಿಸುವಂತೆ ಕೋರಿ ಯಡಿಯೂರಪ್ಪ ಮತ್ತು ಇತರೆ ಆರೋಪಿಗಳು ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಎಂ ಐ ಅರುಣ್ ಅವರ ಏಕಸದಸ್ಯ ಪೀಠ ಅರ್ಜಿ ವಿಚಾರಣೆ ನಡೆಸಿತು. ಯಡಿಯೂರಪ್ಪ ಪರ ವಕೀಲರ ಮನವಿಯ ಮೇರೆಗೆ ವಿಚಾರಣೆಯನ್ನು ಸೆ. 15ಕ್ಕೆ ಮುಂದಕ್ಕೆ ಹಾಕಿದೆ.

## ವಿಶೇಷ ವಿಮಾನ, ಹೆಲಿಕಾಪ್ಟರ್ ದಿನ ಬಾಡಿಗೆ ದುಬಾರಿ: ಸಿಎಂ–ಡಿಸಿಎಂ–ಹಿರಿಯ ಸಚಿವರು ಬಳಕೆಗೆ ಗುತ್ತಿಗೆ ಪಡೆಯಲು ತೀರ್ಮಾನ



**ಬೆಂಗಳೂರು:** ಸಿಎಂ, ಡಿಸಿಎಂ ಜತೆಗೆ ಹಿರಿಯ ಸಚಿವರು ಹಾಗೂ ಅಧಿಕಾರಿಗಳು ಸರಕಾರದ ಅಧಿಕೃತ ಕೆಲಸಗಳಿಗೆ ಬಳಸುವ ಹೆಲಿಕಾಪ್ಟರ್ ಹಾಗೂ ವಿಮಾನ ಸೇವೆಯು ದಿನದ ಬಾಡಿಗೆ ಲೆಕ್ಕದಲ್ಲಿ ದುಬಾರಿ ಎಂಬ ಕಾರಣಕ್ಕೆ ವಾರ್ಷಿಕ ಗುತ್ತಿಗೆ ಪಡೆಯಲು ನಿರ್ಧರಿಸಲಾಗಿದ್ದು, ಟೆಂಡರ್ ಪ್ರಕ್ರಿಯೆ ಕೈಗೊಳ್ಳಲು ಲೋಕೋಪಯೋಗಿ ಇಲಾಖೆಗೆ ಸೂಚನೆ ನೀಡಲಾಗಿದೆ.

ಈ ಸಂಬಂಧ ಸಿಎಂ ಸೂಚನೆಯಂತೆ ವಿಧಾನಸೌಧದಲ್ಲಿ ಸೋಮವಾರ ಡಿಸಿಎಂ ಡಿ.ಕೆ.ಶಿವಕುಮಾರ್, ಸಚಿವರಾದ ಕೆ.ಜೆ.ಜಾರ್ಜ್, ಬೈರತಿ ಸುರೇಶ್ ಹಾಗೂ ಅಧಿಕಾರಿಗಳ ಸಭೆ ನಡೆಯಿತು. ದಿನದ ಬಾಡಿಗೆ ದುಬಾರಿ ಎಂಬುದರ ಜತೆಗೆ, ಸಕಾಲಕ್ಕೆ ಹೆಲಿಕಾಪ್ಟರ್ ಮತ್ತು ವಿಮಾನಗಳು ಸೇವೆಗೆ ಸಿಗುತ್ತಿಲ್ಲ. ತುರ್ತು ವೇಳೆ ಹೆಚ್ಚಿನ ಬಾಡಿಗೆ ಭರಿಸಬೇಕಿದೆ. ಈ ಕಾರಣ–ಕ್ಕೆ ತುರ್ತಾಗಿ ಸೇವೆ ಸಿಗುವಂತಾಗಲು ವಾರ್ಷಿಕ ಗುತ್ತಿಗೆಯನ್ನು ಸರಕಾರ ಬಯಸಿದೆ.

ಮುಖ್ಯಮಂತ್ರಿಗಳು ವಿಶೇಷ ವಿಮಾನ ಬಳಕೆ ಮಾಡುತ್ತಿದ್ದರು. ಇತ್ತೀಚೆಗೆ ಡಿಸಿಎಂ ಹಾಗೂ ಹಿರಿಯ ಸಚಿವರೂ ಸರಕಾರದ ಅಧಿಕೃತ ಕೆಲಸಗಳಿಗೆ ವಿಶೇಷ ವಿಮಾನ ಹಾಗೂ ಹೆಲಿಕಾಪ್ಟರ್ ಬಳಕೆ ಮಾಡುತ್ತಿದ್ದಾರೆ. ಹೀಗಾಗಿ ಗುತ್ತಿಗೆಯಲ್ಲಿ ಪಡೆದರೆ ಹಣದ ಉಳಿತಾಯದ ಜತೆಗೆ, ಅಗತ್ಯ ಸಂದರ್ಭದಲ್ಲಿ ಸೇವೆ ಲಭ್ಯವಾಗಲಿದೆ ಎಂಬ ತೀರ್ಮಾನಕ್ಕೆ ಬರಲಾಗಿದೆ.

## ಕರ್ನಾಟಕದಲ್ಲಿ ಕ್ಷೀಣಿಸುತ್ತಿದೆ ದಳದ ಬಲ! ತೆನೆ ಹೊತ್ತ ಮಹಿಳೆಯ ಭವಿಷ್ಯವೇನು?

**ಬೆಂಗಳೂರು:** ಕರ್ನಾಟಕ ರಾಜ್ಯದ ರಾಜಕೀಯ ಇತಿಹಾಸದಲ್ಲಿ ಪ್ರಾದೇಶಿಕ ಪಕ್ಷವಾಗಿ ಗುರುತಿಸಿಕೊಂಡಿರುವ ಜೆಡಿಎಸ್ ತನ್ನ ಬಲವನ್ನು ಕುಗ್ಗಿಸಿಕೊಳ್ಳುತ್ತಿದೆ. ಕರ್ನಾಟಕ ವಿಧಾನಸಭೆಯಲ್ಲಿ 2013 ರಲ್ಲಿ 40 ಶಾಸಕರ ಬಲ ಹೊಂದಿದ್ದ ದಳಪತಿಗಳು, 2028 ರಲ್ಲಿ 37 ಕ್ಕೆ ಇಳಿದರು. ಆದರೆ ಕಳೆದ ಚುನಾವಣೆ ಅಂದರೆ, 2023 ರಲ್ಲಿ ಕೇವಲ 19 ಸ್ಥಾನಕ್ಕೆ ತೃಪ್ತಿಪಡಬೇಕಾಯಿತು.

ಪಕ್ಷದಲ್ಲಿರುವ ಆಂತರಿಕ ಭಿನ್ನಮತ, ತಳಮಟ್ಟದಲ್ಲಿ ಸಂಘಟನೆಯಲ್ಲಿ ಆಗುತ್ತಿರುವ ಹಿನ್ನಡೆ ಮಾತ್ರವಲ್ಲ, ಎಚ್ ಡಿ ದೇವೇಗೌಡರ ವಯಸ್ಸು ಹಾಗೂ ಆರೋಗ್ಯ ಸ್ಥಿತಿ ಜೊತೆಗೆ ಎಚ್‌ಡಿ ಕುಮಾರಸ್ವಾಮಿ ಅವರು ರಾಷ್ಟ್ರೀಯ ರಾಜಕಾರಣದಲ್ಲಿ ತೊಡಗಿಕೊಂಡಿರುವ ಪರಿಣಾಮ ದಳದ ಬಲ ರಾಜ್ಯದಲ್ಲಿ ಕ್ಷೀಣಿಸುತ್ತಿದೆ.

ಹಾಗಾದರೆ ಕಾಲದ ಹೊಡೆತಕ್ಕೆ ಜೆಡಿಎಸ್ ಕರ್ನಾಕಟದಲ್ಲಿ ಪತರುಗುಟ್ಟುತ್ತಾ? ತೆನೆ ಹೊತ್ತ ಮಹಿಳೆಯ ಭವಿಷ್ಯ ಏನು? ದಳ ಪತಿಗಳ ಇಂದಿನ ಸ್ಥಿತಿಗೆ ಏನು ಕಾರಣ ಹಾಗೂ ಇದನ್ನು ಸರಿಪಡಿಸಿಕೊಳ್ಳಲು ಮುಂದಿನ ಹೆಜ್ಜೆ ಏನು? ಎಂಬಿತ್ಯಾದಿ ಪ್ರಶ್ನೆಗಳು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

# ವಿಕ್ರಮ್ 3201 ಚಮತ್ಕಾರ : ಸೆಮಿಕಂಡಕ್ಟರ್ ರೇಸ್‌ಗೆ ಭಾರತದ ಎಂಟ್ರಿ; ಚೀನಾ, ಅಮೆರಿಕಕ್ಕೆ ಟಾಂಗ್!

**ಹೊಸದಿಲ್ಲಿ:** ಮಹತ್ವದ ಬೆಳವಣಿಗೆಯಲ್ಲಿ ಭಾರತ ಜಗತ್ತೇ ತಿರುಗಿ ನೋಡುವಂತಹ ಸಾಧನೆಯನ್ನು ಮಾಡಿದೆ. ಡಿಜಿಟಲ್ ವಜ್ರ ಎಂದೇ ಕರೆಯಲ್ಪಡುವ ಚಿಪ್ ಅನ್ನು ಭಾರತ ಸಂಪೂರ್ಣವಾಗಿ ದೇಶೀಯವಾಗಿಯೇ ಉತ್ಪಾದಿಸಿದೆ. ಈ ಮೂಲಕ ಕೆಲವೇ ದೇಶಗಳ ಪಟ್ಟಿಗೆ ಭಾರತ ಕೂಡ ಸೇರಿದೆ. ದಿಲ್ಲಿಯಲ್ಲಿ ಆಯೋಜಿಸಿದ್ದ ಸೆಮಿಕಾನ್ ಇಂಡಿಯಾ 2025ರಲ್ಲಿ ಕೇಂದ್ರ ಎಲೆಕ್ಟ್ರಾನಿಕ್ಸ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿಕ್ರಮ್ 3201 ಮೈಕ್ರೋಪ್ರೊಸೆಸರ್ ಅನ್ನು ಗಿಫ್ಟ್ ಆಗಿ ನೀಡುವ ಮೂಲಕ ಈ ಸಾಧನೆಯನ್ನು ಜಗಜ್ಜಾಹೀರು ಮಾಡಿದ್ದಾರೆ. ಈ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಇಲ್ಲಿಯವರೆಗೂ ಕಚ್ಚಾ ತೈಲವನ್ನು ಕಪ್ಪು ಬಂಗಾರ ಎಂದು ಕರೆಯಲಾಗುತ್ತಿತ್ತು. ಆದರೆ, ಈಗ ಸಣ್ಣ ಚಿಪ್‌ಗಳು ಡಿಜಿಟಲ್ ವಜ್ರಗಳಾಗಿವೆ. ಅದನ್ನು ಭಾರತ ಉತ್ಪಾದಿಸಿದೆ ಎಂದು ಹೇಳಿದ್ದಾರೆ. ಈ ಮೂಲಕ ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಇಂಡಿಯಾದ ರೇಸ್ ಆರಂಭವಾಗಿದೆ ಎಂಬ ಸಂದೇಶವನ್ನು ಜಗತ್ತಿಗೆ ನೀಡಿದ್ದಾರೆ. ಹಾಗಾದ್ರೇ ಏನಿದು ವಿಕ್ರಮ್ 3201? ಸೆಮಿಕಂಡಕ್ಟರ್ ಪ್ರೊಸೆಸರ್ ಅಥವಾ ಮೈಕ್ರೋಪ್ರೊಸೆಸರ್ ಎಂದರೆ ಏನು? ಇದು ಏಕೆ ಜಗತ್ತಿಗೆ ಪ್ರಮುಖ? ಯಾವೆಲ್ಲಾ ದೇಶಗಳು ಇದನ್ನು ಉತ್ಪಾದಿಸುತ್ತಿವೆ ಎಂಬುದನ್ನು ಇಲ್ಲಿ ಡಿಟೇಲ್ ಆಗಿ ನೋಡೋಣ ಬನ್ನಿ..

ಹೌದು, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಅಂದ್ರೇ ಇಸ್ರೋ ಹಾಗೂ ಸೆಮಿಕಂಡಕ್ಟರ್ ಪ್ರಯೋಗಾಲಯ




ವಿಕ್ರಮ್ 3201 ಎಂಬ ಸೆಮಿಕಂಡಕ್ಟರ್ ಚಿಪ್ ಅನ್ನು ಜಂಟಿಯಾಗಿ ಅಭಿವೃದ್ಧಿಪಡಿಸಿವೆ. ವಿಕ್ರಮ್ 3201 ಭಾರತದ ಮೊದಲ ಸಂಪೂರ್ಣ ಸ್ವದೇಶಿ 32–ಬಿಟ್ ಮೈಕ್ರೋಪ್ರೊಸೆಸರ್ ಆಗಿದೆ. ಇದನ್ನು ಸಾಮಾನ್ಯ ಕಂಪ್ಯೂಟರ್‌ಗಳಿಗಾಗಿ ಡಿಸೈನ್ ಮಾಡಿಲ್ಲ. ಬದಲಾಗಿ ರಾಕೆಟ್ ಉಡಾವಣೆಯಂತಹ ಬಾಹ್ಯಾಕಾಶದ ಕಠಿಣ ಪರಿಸ್ಥಿತಿಗಳಲ್ಲಿ ಕೆಲಸ ಮಾಡಲು ಸ್ಪೆಷಲ್ ಆಗಿ ವಿನ್ಯಾಸ ಮಾಡಲಾಗಿದೆ. ಉಡಾವಣಾ ವಾಹನಗಳಲ್ಲಿನ ಸಂಕೀರ್ಣ ಮ್ಯಾತ್ಸ್ ಅಂ–ದ್ರೇ ಗಣಿತ, ನ್ಯಾವಿಗೇಷನ್ ಮತ್ತು ನಿಯಂತ್ರಣ ಕಾರ್ಯಗಳನ್ನು ನಿಖರವಾಗಿ ನಿರ್ವಹಿಸುವುದು ಈ ಮೈಕ್ರೋಪ್ರೊಸೆಸರ್ ಉದ್ದೇಶ. ಸಂಪೂರ್ಣವಾಗಿ ಸ್ವದೇಶಿ ನಿರ್ಮಿತ ಮೈಕ್ರೋಪ್ರೊಸೆಸರ್ ಉತ್ಪಾದನೆಯೊಂದಿಗೆ ಜಗತ್ತಿನ ಕೆಲವೇ ದೇಶಗಳ ಸಾಲಿಗೆ ಭಾರತ ಸೇರಿದೆ. ಈ ಸಾಧನೆಯೊಂದಿಗೆ ಭಾರತವು ನಿರ್ಣಾಯಕ ಬಾಹ್ಯಾಕಾಶ ಟೆಕ್ನಾಲಜಿಗಳಿಗಾಗಿ ವಿದೇಶಿ ಅವಲಂಬನೆಯನ್ನು ಕಡಿಮೆ ಮಾಡಿಕೊಳ್ಳುವತ್ತ ದೊಡ್ಡ ಹೆಜ್ಜೆಯನ್ನು ಇಟ್ಟಿದೆ.

ಈಗ ವಿಕ್ರಮ್ 3201 ಏನು? ಅದರ ಫೀಚರ್‌ಗಳೇನು ಎಂಬುದನ್ನು ನೋಡೋಣ.. ವಿಕ್ರಮ್ 3201ರ ಫೀಚರ್‌ಗಳು ಅದರ ಸಾಮರ್ಥ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ.

ಇದು 32–ಬಿಟ್ ಆರ್ಕಿಟೆಕ್ಚರ್ ಹೊಂದಿದ್ದು, 100 ಮೆಗಾ ಹರ್ಟ್ಜ್ ವೇಗದಲ್ಲಿ ಕಾರ್ಯನಿರ್ವಹಿಸುತ್ತದೆ ಮತ್ತು 152 ಸೂಚನೆಗಳು ಅಥವಾ ಇನ್ಸ್ಟ್ರಕ್ಷನ್ಸ್ ಅನ್ನು ಬೆಂಬಲಿಸುತ್ತದೆ.

ಇದರ ಸ್ಪೆಷಲ್ ಏನೆಂದರೆ, ಬಾಹ್ಯಾಕಾಶದ ವಿಪರೀತ ತಾಪಮಾನವನ್ನು, ಅಂದರೆ –55 ಡಿಗ್ರಿ ಸೆಲ್ಸಿಯಸ್‌ನಿಂದ, +125 ಡಿಗ್ರಿ ಸೆಲ್ಸಿಯಸ್‌ವರೆಗಿನ ತಾಪಮಾನವನ್ನು ತಡೆದುಕೊಳ್ಳುವ ಸಾಮರ್ಥ್ಯ ಇದಕ್ಕಿದೆ.

ಕೇವಲ 500 ಮೆಗಾವ್ಯಾಟ್‌ಗಿಂತ ಕಡಿಮೆ ಶಕ್ತಿಯನ್ನು ಬಳಸುವ ಈ ಪ್ರೊಸೆಸರ್ ಅನ್ನು ಎಸ್‌ಸಿಎಲ್‌ನ 180ಎನ್‌ಎಂ ಸಿಎಂಒಎಸ್ ತಂತ್ರಜ್ಞಾನ ಬಳಸಿ ತಯಾರಿಸಲಾಗಿದೆ. ಇದು ಮೇಕ್ ಇನ್ ಇಂಡಿಯಾಗೆ ದೊಡ್ಡ ಜಯವಾಗಿದೆ.

ಇನ್ನೂ, ವಿಕ್ರಮ್ 3201 ಪ್ರೊಸೆಸರ್, 2009ರಿಂದ ಇಸ್ರೋದ ಉಡಾವಣಾ ವಾಹನಗಳಿಗೆ ಶಕ್ತಿ ತುಂಬುತ್ತಿರುವ ಹಳೆಯ 16–ಬಿಟ್ ಸಾಮರ್ಥ್ಯದ ವಿಕ್ರಮ್ 1601 ಪ್ರೊಸೆಸರ್‌ನ ಅಪ್‌ಡೇಟೆಡ್ ವರ್ಶನ್ ಆಗಿದೆ. ಹೊಸ 32–ಬಿಟ್ ಆವೃತ್ತಿಯು 64–ಬಿಟ್ ಫ್ಲೋಟಿಂಗ್–ಪಾಯಿಂಟ್ ಕಾರ್ಯಾಚರಣೆಗಳಿಗೂ ಕೂಡ ಸಪೋರ್ಟ್ ಮಾಡುತ್ತದೆ.

ಅದಲ್ಲದೇ ಅಡಾನಂತಹ ಉನ್ನತ ಮಟ್ಟದ ಪ್ರೋಗ್ರಾಮಿಂಗ್ ಲ್ಯಾಂಗ್ವೇಜ್ ಅನ್ನು ಸಪೋರ್ಟ್ ಮಾಡಲು ಬೇಕಾದ ಎಲ್ಲಾ ಸಾಫ್ಟ್‌ವೇರ್ ಟೂಲ್‌ಗಳನ್ನು ಅಂದ್ರೇ ಕಂಪೈಲರ್‌ಗಳು, ಅಸೆಂಬ್ಲರ್‌ಗಳು ಮತ್ತು ಸಿಮ್ಯುಲೇಟರ್‌ಗಳನ್ನು ಇಸ್ರೋ ತನ್ನಲ್ಲೇ ನಿರ್ಮಿಸಿದೆ. ಈ ಮೂಲಕ ಸಾಫ್ಟ್‌ವೇರ್ ಕ್ಷೇತ್ರದಲ್ಲೂ ಭಾರತ ತನ್ನ ಸ್ವಾವಲಂಬನೆಯನ್ನು ಸಾಬೀತುಪಡಿಸಿದೆ.

ಪ್ರಮುಖವಾಗಿ ವಿಕ್ರಮ್ 3201 ಕೇವಲ ಪೇಪರ್ ಮೇಲಿನ ಸಾಧನೆಯಲ್ಲ.. ಇದನ್ನು ಈಗಾಗಲೇ ಕಖಐಗಿ–ಅ60 ಮಿಷನ್‌ನಲ್ಲಿ ಯಶಸ್ವಿಯಾಗಿ ಪರೀಕ್ಷಿಸಲಾಗಿದೆ. ಈ ಮಿಷನ್‌ನ ಆರ್ಬಿಟಲ್ ಎಕ್ಸ್‌ಪೆರಿಮೆಂಟಲ್ ಮಾಡ್ಯೂಲ್‌ನ ಕಂಪ್ಯೂಟರ್‌ಗೆ ಶಕ್ತಿ ತುಂಬುವ ಮೂಲಕ, ವಿಕ್ರಮ್ 3201 ಬಾಹ್ಯಾಕಾಶದಲ್ಲಿ ತನ್ನ ವಿಶ್ವಾಸಾರ್ಹತೆಯನ್ನು ಸಾಬೀತುಪಡಿಸಿದೆ.

ವಿಕ್ರಮ್ 3201 ಜೊತೆಗೆ, ಕಲ್ಪನಾ 3201 ಎಂಬ ಇನ್ನೊಂದು 32–ಬಿಟ್ ಪ್ರೊಸೆಸರ್ ಅನ್ನೂ ಕೂಡ ಇಸ್ರೋ ಅಭಿವೃದ್ಧಿಪಡಿಸಿದೆ.

# ಕರ್ನಾಟಕ ಬಿಸಿನೆಸ್ ಡೇ 2025: ಫ್ರಾಂಕ್‌ಫರ್ಟ್‌ನಲ್ಲಿ ಇಂಡೋ–ಜರ್ಮನ್ ಬಾಂಧವ್ಯಕ್ಕೆ ಹೊಸ ಆಯಾಮ

ಕರ್ನಾಟಕ ಮತ್ತು ಜರ್ಮನಿ ನಡುವಿನ ಆರ್ಥಿಕ ಸಂಬಂಧಗಳನ್ನು ಬಲಪಡಿಸುವ ಮಹತ್ವದ ಹೆಜ್ಜೆಯಾಗಿ, ಭಾರತದ ರಾಯಭಾರಿ ಕಚೇರಿ; ಫ್ರಾಂಕ್‌ಫರ್ಟ್, ರೈನ್ ಮೇನ್ ಕನ್ನಡ ಸಂಘದ ಸಹಯೋಗದೊಂದಿಗೆ 'ಕರ್ನಾಟಕ ಬಿಸಿನೆಸ್ ಡೇ 2025' ಎಂಬ ಭವ್ಯ ಕಾರ್ಯಕ್ರಮವನ್ನು ಜುಲೈ 5ರಂದು ಯಶಸ್ವಿಯಾಗಿ ಆಯೋಜಿಸಿತು.

ಜರ್ಮನಿಯ ಫ್ರಾಂಕ್‌ಫರ್ಟ್‌ನಲ್ಲಿರುವ ಸಾಲ್‌ಬಾಸ್ ಝುಂಟ್ರಮ್ ಆಮ್ ಬ್ಯೂಗೆಲ್‌ನಲ್ಲಿ ನಡೆದ ಈ ಕಾರ್ಯಕ್ರಮ, ಇಂಡೋ–ಜರ್ಮನ್ ಸಹಭಾಗಿತ್ವದಲ್ಲಿ ಆಸಕ್ತಿ ಹೊಂದಿರುವ ಅನೇಕ ಉದ್ಯಮಿಗಳು, ವೃತ್ತಿಪರರು ಮತ್ತು ಕಂಪನಿಗಳನ್ನು ಸೆಳೆಯಿತು. ಇದು ವ್ಯಾಪಾರ ಮತ್ತು ಹೂಡಿಕೆ ಅವಕಾಶಗಳನ್ನು ಹೆಚ್ಚಿಸಲು ಒಂದು ಅದ್ಭುತ ವೇದಿಕೆಯಾಯಿತು.

ಸಾಂಪ್ರದಾಯಿಕವಾಗಿ ಸಾಂಸ್ಕೃತಿಕ ಚಟುವಟಿಕೆಗಳು ಮತ್ತು ಸಮುದಾಯದ ಕಾರ್ಯಕ್ರಮಗಳಿಗೆ ಹೆಸರುವಾಸಿಯಾಗಿದ್ದ ರೈನ್ ಮೇನ್ ಕನ್ನಡ ಸಂಘವು ಈ ಬಾರಿ ಹೊಸ ಮತ್ತು ಪರಿಣಾಮಕಾರಿ ಪಾತ್ರವನ್ನು ನಿರ್ವಹಿಸಿತು. ಇದು ಕೇವಲ ಕನ್ನಡ ಸಂಸ್ಕೃತಿಯನ್ನು ಮಾತ್ರವಲ್ಲದೆ, ರಾಜ್ಯದ ಆರ್ಥಿಕ ಪ್ರಗತಿಯನ್ನೂ ಸಹ ಬೆಂಬಲಿಸುವ



ತನ್ನ ಬದ್ಧತೆಯನ್ನು ಪ್ರದರ್ಶಿಸಿತು. ಫ್ರಾಂಕ್‌ಫರ್ಟ್‌ನ ಭಾರತದ ಕಾನ್ಸುಲೇಟ್ ಜನರಲ್‌ನ ಬೆಂಬಲದೊಂದಿಗೆ ಈ ಸಂಸ್ಥೆ, ಅನೇಕರಿಗೆ ಹೊಸ ದೃಷ್ಟಿಕೋನ ನೀಡಿದ ಈ ಕಾರ್ಯಕ್ರಮವನ್ನು ಅತ್ಯಂತ ಸೂಕ್ಷ್ಮವಾಗಿ ಯೋಜಿಸಿ, ಯಶಸ್ವಿಯಾಗಿ ನಡೆಸಿತು.

ಕಾರ್ಯಕ್ರಮವು ನಾಡಗೀತೆಯ ಭಾವಪೂರ್ಣ ಗಾಯನ ಮತ್ತು ಭರತನಾಟ್ಯ ನೃತ್ಯದೊಂದಿಗೆ ಸಾಂಪ್ರದಾಯಿಕವಾಗಿ ಪ್ರಾರಂಭವಾಯಿತು. ಕರ್ನಾಟಕ ಸರ್ಕಾರದ ಸಚಿವರಾದ ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಮತ್ತು ಡಾ. ಸುಧಾಕರ ಮಾಲಪಲ್ಲಿ ಚೌಡಾ ರೆಡ್ಡಿ, ಭಾರತದ ಕಾನ್ಸುಲ್ ಜನರಲ್ ಬಿ.ಎಸ್. ಮುಬಾರಕ್, ಡಾ. ದಿನೇಶ್ ಕುಮಾರ್, ವೇದ ಕುಮಾರಸ್ವಾಮಿ, ಯಾಜ್ ಶಿರ್ಸಂಗಿ ಮತ್ತು ವಿಶ್ವನಾಥ್ ಬಾಲೇಕಾಯಿ ಅವರು ದೀಪ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಸಂಘಟಕರು ಮತ್ತು ಗಣ್ಯರ ಸಮೂಹಚಿತ್ರವು ಕಾರ್ಯಕ್ರಮದ ಅಧಿಕೃತ ಆರಂಭಕ್ಕೆ ಸಾಕ್ಷಿಯಾಯಿತು.

ಭಾರತದ ಕಾನ್ಸುಲ್ ಜನರಲ್ ಬಿ.ಎಸ್. ಮುಬಾರಕ್ ಅವರು ಸ್ವಾಗತ ಭಾಷಣದೊಂದಿಗೆ ದಿನದ ಚರ್ಚೆಗಳಿಗೆ ವೇದಿಕೆ ಕಲ್ಪಿಸಿದರು. ಇದರ ನಂತರ, ಕರ್ನಾಟಕದ ಸಚಿವರುಗಳಾದ ಡಾ. ಸುಧಾಕರ ಮಾಲಪಲ್ಲಿ ಚೌಡಾ ರೆಡ್ಡಿ ಮತ್ತು ಡಾ. ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಕರ್ನಾಟಕ ಮತ್ತು ಜರ್ಮನಿ ನಡುವಿನ ಸಹಯೋಗ ಹಾಗೂ ಆವಿಷ್ಕಾರವನ್ನು ಪ್ರೋತ್ಸಾಹಿಸುವ ತಮ್ಮ ದೃಷ್ಟಿಕೋನಗಳನ್ನು ಹಂಚಿಕೊಂಡರು.

ಎರಡು ಪ್ಯಾನಲ್ ಚರ್ಚೆಗಳು ಕಾರ್ಯಕ್ರಮದ ಪ್ರಮುಖ ಭಾಗಗಳಾಗಿದ್ದವು. 'ಕರ್ನಾಟಕ–ಜರ್ಮನಿ ವ್ಯಾಪಾರ ಸಮನ್ವಯವನ್ನು ಉತ್ತೇಜಿಸುವುದು – ತಂತ್ರಜ್ಞಾನ ಮತ್ತು ಕೈಗಾರಿಕಾ ಸಹಯೋಗವನ್ನು ಬಲಪಡಿಸುವುದು' ಎಂಬ ಶೀರ್ಷಿಕೆಯ ಮೊದಲ ಪ್ಯಾನಲ್ ಚರ್ಚೆಯನ್ನು ಎನ್‌ಆರ್‌ಡಬ್ಲ್ಯೂ–ಗ್ಲೋಬಲ್ ಬಿಸಿನೆಸ್ ಇಂಡಿಯಾದ ಮುಖ್ಯ ಪ್ರತಿನಿಧಿ ಅಂಬಿಕಾ ಬನೋತ್ರಾ ಅವರು ನಡೆಸಿಕೊಟ್ಟರು. ಈ ಪ್ಯಾನಲ್‌ನಲ್ಲಿ ತಜ್ಞರಾದ ಅಕ್ಷಯ್ ರಾವ್, ಡಾ. ಉಮೇಶ್, ಫೆಲಿಕ್ಸ್ ವೀಗ್, ಮಿಥುನ್ ಕುಮಾರ್ ಮತ್ತು ಸ್ಟೆಫನಿ ಬೀರೇಸ್ ಭಾಗವಹಿಸಿದ್ದರು. ಡಿಜಿಟಲ್ ಹಬ್‌ಗಳಿಗಾಗಿ ಟೆಕ್ ಕಂಪನಿಗಳು ಕರ್ನಾಟಕವನ್ನು ಏಕೆ ಆಯ್ಕೆ ಮಾಡುತ್ತಿವೆ, ಹಸಿರು ಹೂಡಿಕೆಗಳು ಮತ್ತು ಸ್ಮಾರ್ಟ್ ಉತ್ಪಾದನೆಯ ಹೆಚ್ಚಳ, ಮತ್ತು ಮುಂದಿನ ದಶಕವನ್ನು ರೂಪಿಸುವಲ್ಲಿ ಇಂಡೋ–ಜರ್ಮನ್ ಆವಿಷ್ಕಾರದ ಪಾತ್ರಗಳ ಬಗ್ಗೆ ಚರ್ಚೆಗಳು ನಡೆದವು.

ಇದರ ನಂತರ, ಎರಡನೇ ಪ್ಯಾನಲ್ ಚರ್ಚೆಯು 'ಮಾರುಕಟ್ಟೆ ಪ್ರವೇಶ ಮತ್ತು ಅನುಸರಣೆ: ಇಂಡೋ–ಜರ್ಮನ್ ವ್ಯಾಪಾರ ಪರಿಸರ ವ್ಯವಸ್ಥೆಯನ್ನು ಅರಿತುಕೊಳ್ಳುವುದು' ಎಂಬ ವಿಷಯದ ಮೇಲೆ ಕೇಂದ್ರೀಕೃತವಾಗಿತ್ತು.

# ದಿಲ್ಲಿ ಗಲಭೆ ಕೇಸ್‌ನಲ್ಲಿ ಉಮರ್ ಖಾಲಿದ್‌ಗೆ ಮತ್ತೊಮ್ಮೆ ಜಾಮೀನು ನಿರಾಕರಿಸಿದ ಹೈಕೋರ್ಟ್, 6ನೇ ಪ್ರಯತ್ನವೂ ವಿಫಲ

**ಹೊಸದಿಲ್ಲಿ:** 2020ರ ಈಶಾನ್ಯ ದಿಲ್ಲಿ ಗಲಭೆಗೆ ಸಂಬಂಧಿಸಿದ 'ಬೃಹತ್ ಸಂಚು' ಪ್ರಕರಣದಲ್ಲಿ ಬಂಧಿತರಾಗಿ ಜೈಲಿನಲ್ಲಿ ಇರುವ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದ (ಜೆಎನ್‌ಯು) ಮಾಜಿ ವಿದ್ಯಾರ್ಥಿ ನಾಯಕ ಉಮರ್ ಖಾಲಿದ್‌ಗೆ ದಿಲ್ಲಿ ಹೈಕೋರ್ಟ್ ಮತ್ತೊಮ್ಮೆ ಜಾಮೀನು ನಿರಾಕರಿಸಿದೆ. ಈ ಮೂಲಕ ಜಾಮೀನು ಪಡೆಯಲು ಖಾಲಿದ್ ನಡೆಸಿದ 6ನೇ ಪ್ರಯತ್ನವೂ ವಿಫಲವಾಗಿದೆ. ಖಾಲಿದ್ ಜೊತೆಗೆ, ಶಾರ್ಜಿಲ್ ಇಮಾಮ್ ಹಾಗೂ ಇತರ 8 ಆರೋಪಿಗಳ ಜಾಮೀನು ಅರ್ಜಿಯನ್ನೂ ನ್ಯಾಯಾಲಯ ಇದೇ ವೇಳೆ ತಿರಸ್ಕರಿಸಿದೆ.

ಈ ಹಿಂದೆ ಸೆಷನ್ಸ್ ನ್ಯಾಯಾಲಯದಲ್ಲಿ ಮೂರು ಬಾರಿ ಮತ್ತು ದಿಲ್ಲಿ ಹೈಕೋರ್ಟ್‌ನಲ್ಲಿ ಎರಡು ಬಾರಿ ಉಮರ್ ಖಾಲಿದ್ ಅವರ ಜಾಮೀನು ಅರ್ಜಿ ವಜಾಗೊಂಡಿತ್ತು. ಅಲ್ಲದೆ, ಸುಪ್ರೀಂ ಕೋರ್ಟ್‌ನಿಂದಲೂ ಒಮ್ಮೆ ಜಾಮೀನು ಅರ್ಜಿಯನ್ನು ಹಿಂಪಡೆದಿದ್ದರು.

2020ರ ಫೆಬ್ರವರಿ 23 ಮತ್ತು 25ರ



ನಡುವೆ ಈಶಾನ್ಯ ದಿಲ್ಲಿಯಲ್ಲಿ ನಡೆದ ಗಲಭೆಗಳಲ್ಲಿ 53 ಜನರು ಸಾವನ್ನಪ್ಪಿ, 700ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು. ಈ ಗಲಭೆಗಳ ಹಿಂದೆ ದೊಡ್ಡ ಸಂಚು ರೂಪಿಸಿದ ಆರೋಪವನ್ನು ಖಾಲಿದ್ ಮತ್ತು ಇತರರು ಎದುರಿಸುತ್ತಿದ್ದಾರೆ.

ಇವರ ವಿರುದ್ಧ ಭಾರತೀಯ ದಂಡ ಸಂಹಿತೆ (ಐಪಿಸಿ), ಸಾರ್ವಜನಿಕ ಆಸ್ತಿಪಾಸ್ತಿ ಹಾನಿ ತಡೆ ಕಾಯ್ದೆ (ಪಿಡಿಪಿಪಿ), ಶಸ್ತ್ರಾಸ್ತ್ರ ಕಾಯ್ದೆ ಮತ್ತು ಕಾನೂನುಬಾಹಿರ ಚಟುವಟಿಕೆಗಳ (ತಡೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಜುಲೈ 2021ರಲ್ಲಿ ಮೊದಲ ಬಾರಿಗೆ ಕರ್ಕರ್‌ಡೂಮಾ ನ್ಯಾಯಾಲಯಕ್ಕೆ ಉಮರ್ ಖಾಲಿದ್ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಆದರೆ ನಂತರ ಅದನ್ನು ಹಿಂಪಡೆದಿದ್ದರು. ಸೆಪ್ಟೆಂಬರ್ 2021ರಲ್ಲಿ ಅದೇ ನ್ಯಾಯಾಲಯದಲ್ಲಿ ಎರಡನೇ ಬಾರಿಗೆ ಜಾಮೀನು ಅರ್ಜಿ ಸಲ್ಲಿಸಿದ್ದರಿ. ಆದರೆ ಕೋರ್ಟ್‌ಮಾರ್ಚ್ 2022ರಲ್ಲಿ ಅರ್ಜಿಯನ್ನು ವಜಾಗೊಳಿಸಿತ್ತು.

ಇದಾದ ಬಳಿಕ 2022ರ ಏಪ್ರಿಲ್‌ನಲ್ಲಿ ಸೆಷನ್ಸ್ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಖಾಲಿದ್ ದಿಲ್ಲಿ ಹೈಕೋರ್ಟ್‌ಗೆ ಮೊರೆ ಹೋಗಿದ್ದರು. ಅಕ್ಟೋಬರ್ 2022ರಲ್ಲಿ ದಿಲ್ಲಿ ಹೈಕೋರ್ಟ್ ಕೂಡ ಅವರ ಅರ್ಜಿಯನ್ನು ತಿರಸ್ಕರಿಸಿತ್ತು.

ನಂತರ ಏಪ್ರಿಲ್ 2023ರಲ್ಲಿ ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿದ್ದರು. ಆದರೆ, ಫೆಬ್ರವರಿ 2024ರಲ್ಲಿ ಬದಲಾದ ಸನ್ನಿವೇಶಗಳನ್ನು ಉಲ್ಲೇಖಿಸಿ ಸುಪ್ರೀಂ ಕೋರ್ಟ್‌ನಿಂದ ಅರ್ಜಿಯನ್ನು ಹಿಂಪಡೆದಿದ್ದರು.

ಬಳಿಕ ಫೆಬ್ರವರಿ 2024ರಲ್ಲಿ ಕರ್ಕರ್‌ಡೂಮಾ ನ್ಯಾಯಾಲಯದಲ್ಲಿ ಮೂರನೇ ಬಾರಿಗೆ ಜಾಮೀನು ಅರ್ಜಿ ಸಲ್ಲಿಸಿದ್ದರು. ಆದರೆ ಮೇ 2024ರಲ್ಲಿ ಅದು ತಿರಸ್ಕೃತಗೊಂಡಿತ್ತು. ಜುಲೈ 2024ರಲ್ಲಿ ಮತ್ತೆ ದಿಲ್ಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಇದೀಗ ಇದರ ವಿಚಾರಣೆ ನಡೆಸಿದ ಹೈಕೋರ್ಟ್ ಸೆಪ್ಟೆಂಬರ್ 2, 2025ರಲ್ಲಿ ಎರಡನೇ ಬಾರಿಗೆ ಅವರ ಜಾಮೀನು ಅರ್ಜಿಯನ್ನು ವಜಾಗೊಳಿಸಿದೆ.

# ಧರ್ಮಸ್ಥಳದಲ್ಲಿ ಸೌಜನ್ಯ ಕೊಲೆ: ನಳಿನ್ ಕುಮಾರ್ ಭಾಷಣದ ತುಣುಕು ವೈರಲ್, ಸ್ಪಷ್ಟನೆ ಕೊಟ್ಟ ಸುನೀಲ್ ಕುಮಾರ್

**ಬೆಂಗಳೂರು:** ಧರ್ಮಸ್ಥಳ ಪ್ರಕರಣ ಇದೀಗ ಆಡಳಿತ ಪಕ್ಷ ಕಾಂಗ್ರೆಸ್ ಮತ್ತು ವಿರೋಧ ಪಕ್ಷ ಬಿಜೆಪಿ ನಡುವೆ ತೀವ್ರ ಜಟಾಪಟಿಗೆ ಕಾರಣವಾಗಿದೆ. ಈ ನಡುವೆ, 2023 ರಲ್ಲಿ ನಡೆದ ಸೌಜನ್ಯ ನ್ಯಾಯ ಹೋರಾಟದ ಅಂಗವಾಗಿ ನಡೆದ ಭಾಷಣದ ತುಣುಕನ್ನು ಸಚಿವ ಪ್ರಿಯಾಂಕ್ ಖರ್ಗೆ ಹಂಚಿಕೊಂಡಿದ್ದಾರೆ. ನಳಿನ್ ಕುಮಾರ್ ಕಟೀಲ್ ಮಾಡಿರುವ ಭಾಷಣವನ್ನು ಮುಂದಿಟ್ಟುಕೊಂಡು ಬಿಜೆಪಿಗೆ ಕೆಲವೊಂದು ಪ್ರಶ್ನೆಗಳನ್ನು ಕೇಳಿದ್ದಾರೆ. ಇದಕ್ಕೆ ಶಾಸಕ ಸುನೀಲ್ ಕುಮಾರ್ ಕೂಡಾ ಸ್ಪಷ್ಟನೆಯನ್ನು ನೀಡಿದ್ದಾರೆ.

ಸೌಜನ್ಯ ಹಂತಕರ ಬಗ್ಗೆ ಮಾಹಿತಿ



ಹೊಂದಿರುವ ಬಿಜೆಪಿ ನಾಯಕರು ಸತ್ಯ ಬಹಿರಂಗಪಡಿಸಲಿ. ಬಿಜೆಪಿ ಶಾಸಕ ಸುನಿಲ್ ಕುಮಾರ್ ಅವರಿಗೆ ಸೌಜನ್ಯ ಹತ್ಯೆ ಮಾಡಿದವರು ಯಾರು ಎಂಬ ಮಾಹಿತಿ ಇದೆ ಎಂದು ಸ್ವತಃ ಬಿಜೆಪಿಯ ನಳಿನ್ ಕುಮಾರ್ ಕಟೀಲ್ ಅವರು 2023ರಲ್ಲಿ ಪಕ್ಷದ ಅಧ್ಯಕ್ಷರು ಹಾಗೂ ಸಂಸದರಾಗಿದ್ದ ಕಾಲದಲ್ಲಿ ಹೇಳಿರುವುದು, ಹಾಗಾಗಿ ಈ ಮಾತನ್ನು ಗಂಭೀರವಾಗಿ ತೆಗೆದುಕೊಳ್ಳಬೇಕಿದೆ.

ಸೌಜನ್ಯ ಹಂತಕರ ಬಗ್ಗೆ ಬಿಜೆಪಿಯವರಿಗೆ ಮಾಹಿತಿ ಇದ್ದರೂ ಅಂದಿನಿಂದ ಇಂದಿನವರೆಗೂ ಗೌಪ್ಯವಾಗಿ ಇಟ್ಟಿರುವುದೇಕೆ? ಈಗಲೂ SIT ಮುಂದೆ ಮಾಹಿತಿ ನೀಡಲು ಮುಕ್ತ ಅವಕಾಶವಿದೆ, ಸೌಜನ್ಯ ಹಂತಕರ ಬಗ್ಗೆ ಮಾಹಿತಿ ನೀಡುವ ಬಿಜೆಪಿ ನಾಯಕರಿಗೆ ರಕ್ಷಣೆ ಒದಗಿಸುವುದು ನಮ್ಮ ಸರ್ಕಾರದ ಜವಾಬ್ದಾರಿ. ಬಿಜೆಪಿಯವರು ಸೌಜನ್ಯ ಹತ್ಯೆಗೆ ನ್ಯಾಯ ಒದಗಿಸುವ ತಮ್ಮ ವಾಗ್ದಾನವನ್ನು ನೆನಪು ಮಾಡಿಕೊಳ್ಳಲಿ, ಹಂತಕರ ಬಗ್ಗೆ ತಮಗಿರುವ ಮಾಹಿತಿ ಬಹಿರಂಗಪಡಿಸಿ ತಮ್ಮ ಬದ್ಧತೆಯನ್ನು ನಿರೂಪಿಸಲಿ.

## ಸಿದ್ದರಾಮಯ್ಯ ಪರ ಇದ್ದೇವೆ ಎಂದೇ ಅನ್ಯಾಯ : ಸೆಪ್ಟಂಬರ್ ಕ್ರಾಂತಿ ಬಗ್ಗೆ ಸ್ಫೋಟಕ ಸುಳಿವು ಕೊಟ್ಟ ರಾಜೇಂದ್ರ

**ಬೆಂಗಳೂರು:** ನಾವು ಸಿಎಂ ಸಿದ್ದರಾಮಯ್ಯ ಅವರ ಪರವಾಗಿ ಇದ್ದೇವೆ



ಎಂಬ ಕಾರಣಕ್ಕಾಗಿ ಅನ್ಯಾಯ ಆಗಿದೆ. ನಾವು ಇನ್ನು ಹತ್ತು ವರ್ಷ ಬಿಟ್ಟರೂ ಸಿದ್ದರಾಮಯ್ಯನವರ ಪರವೇ ಇರುತ್ತೇವೆ. ಬೇರೆ ಯಾರನ್ನೋ ತೋರಿಸಿದರೆ ನಮಗೆ ಮತ ಪಡೆಯೋದು ಅಷ್ಟರಲ್ಲೇ ಇದೆ ಎಂದು ಕೆ ಎನ್ ರಾಜಣ್ಣ ಅವರ ಪುತ್ರ ಹಾಗೂ ವಿಧಾನಪರಿಷತ್ ಸದಸ್ಯ ರಾಜೇಂದ್ರ ವಾಗ್ದಾಳಿ ನಡೆಸಿದರು.

ಬೆಂಗಳೂರಿನಲ್ಲಿ ಮಂಗಳವಾರ ಮಾತನಾಡಿದ ಅವರು, ಸೆಪ್ಟೆಂಬರ್ ಕ್ರಾಂತಿ ಬಾಲಕೃಷ್ಣ ಅವರಿಂದಲೇ ಶುರು ಆಗುತ್ತದೆ. ರಾಜಣ್ಣ ಹೇಳಿದ್ದ ಸೆಪ್ಟೆಂಬರ್ ಕ್ರಾಂತಿ ಇದೇ ಆಗಿದೆ. ಇವರ ಟೀಂ ಬಿಜೆಪಿಗೆ ಹೋಗಬಹುದು. ಸಿಎಂ ಮಾಡ್ತೀವಿ ಅಂದ್ರೆ ಇವರೆಲ್ಲ ಬಿಜೆಪಿಗೆ ಹೋಗಬಹುದು ಎಂದು ಸ್ಫೋಟಕ ಮಾಹಿತಿ ನೀಡಿದರು. ಬಹಿರಂಗವಾಗಿ ಕೆ ಎನ್ ರಾಜಣ್ಣ ಅವರನ್ನು ಬಿಜೆಪಿಯವರು ಭೇಟಿಯಾಗಿಲ್ಲ. ರಾಜಣ್ಣ ಅವರನ್ನು ಸಂಚು ಪಿತೂರಿಯಿಂದ ರಾಜೀನಾಮೆ ಪಡೆದಿದ್ದಾರೆ ಬಿಟ್ಟರೆ, ಭ್ರಷ್ಟಾಚಾರ ಮಾಡಿ ಸಚಿವ ಸ್ಥಾನ ಬಿಟ್ಟಿಲ್ವಲ್ಲಾ? ರಾಜಣ್ಣ ಯಾವತ್ತೂ ಪಕ್ಷದ ವಿರುದ್ಧ ಮಾತಾಡಿಲ್ವಲ್ಲಾ? ಎಂದು ಪ್ರಶ್ನಿಸಿದರು. ಡಿಕೆಶಿವಕುಮಾರ್ ಜೊತೆಗೆ ಕೆಲವರು ಕಾಲು ಹೊರಗಡೆ ಇಟ್ಟಿದ್ದಾರೆ ಎಂಬುದು ಸತ್ಯವಾ? ಎಂಬ ಪ್ರಶ್ನೆಗೆ ಹೌದು ಎಂದ ರಾಜೇಂದ್ರ, ನಾವು ಸಿದ್ದರಾಮಯ್ಯ ಪರ ಇದ್ದೇವೆ ಅಂತಲೇ ಇಷ್ಟೆಲ್ಲ ಮಾಡಿದ್ದಾರೆ. ನಮಗೆ ಆಗಿರೋ ಅನ್ಯಾಯದ ಪ್ರಕಾರ ಮತ್ತೆ ಸಚಿವ ಸ್ಥಾನ ಕೊಡಬೇಕು. ಎಸ್.ಟಿ ವರ್ಗಕ್ಕೆ ಸೇರಿದ 15 ಮಂದಿ ಶಾಸಕರಿದ್ದಾರೆ. ಹೀಗಾಗಿ ವಾಲ್ಮೀಕಿ ಸಮುದಾಯಕ್ಕೆ ಸಚಿವ ಸ್ಥಾನ ಕೊಡಬೇಕು ಎಂದು ಒತ್ತಾಯಿಸಿದರು.

ಸಿದ್ದರಾಮಯ್ಯ ಬೆಂಬಲದಿಂದಲೇ ಓಟು ಬರುತ್ತದೆ . ಇನ್ಯಾರದ್ದೋ ಮುಖ ತೋರಿಸಿದರೆ ಓಟು ಬರುತ್ತದೆ ಎಂದಿಲ್ಲ. ರಾಜಣ್ಣ ಅಸೆಂಬ್ಲಿಯಲ್ಲಿ ಆರ್ ಎಸ್ ಎಸ್ ಗೀತೆ ಹಾಡಲಿಲ್ಲ, ಬಾಲ್ಯದಿಂದ ಚಡ್ಡಿ ಹಾಕಿಕೊಂಡು ಶಾಖೆಗೆ ಹೋಗಲಿಲ್ಲ ಎಂದು ಹೇಳುವ ಮೂಲಕ ಡಿಕೆ ಶಿವಕುಮಾರ್ ವಿರುದ್ಧ ಪರೋಕ್ಷವಾಗಿ ರಾಜಣ್ಣ ಪುತ್ರ ರಾಜೇಂದ್ರ ವಾಗ್ದಾಳಿ ನಡೆಸಿದರು.

ಸಿಎಂ ಸಿದ್ದರಾಮಯ್ಯ ಅವರ ಪರ ಇರುವುದರಿಂದಲೇ ನಾವು ಇಷ್ಟು ಧೈರ್ಯವಾಗಿರೋದು. ಸೆಪ್ಟೆಂಬರ್‌ನಲ್ಲಿ ಇವರ ಬ್ರೈನ್ ಮ್ಯಾಪ್ ಮಾಡಿ. ಆವಾಗ ಯಾರ್ಯಾರು ಯಾರ್ಯಾರ ಸಂಪರ್ಕದಲ್ಲಿದ್ದಾರೆ ಅಂತ ಗೊತ್ತಾಗುತ್ತೆ ಎಂದು ಪರೋಕ್ಷವಾಗಿ ಡಿಕೆಶಿ ಬಣದ ವಿರುದ್ದ ರಾಜಣ್ಣ ಪುತ್ರ ನೇರ ವಾಗ್ದಾಳಿ ನಡೆಸಿದರು.

## ಬಿಜೆಪಿ ಆಯ್ತು ಇದೀಗ ಕಾಂಗ್ರೆಸ್ ನಿಂದ ಧರ್ಮಸ್ಥಳ ಚಲೋ : ಕುಣಿಗಲ್ ನಿಂದ 200 ಕಾರುಗಳ ಯಾತ್ರೆ



**ಬೆಂಗಳೂರು:** ಧರ್ಮಸ್ಥಳ ಪ್ರಕರಣ ಇದೀಗ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ಜಟಾಪಟಿಗೆ ಕಾರಣವಾಗುತ್ತಿದೆ. ಕ್ಷೇತ್ರಕ್ಕೆ ಅವಮಾನ ಮಾಡಲಾಗುತ್ತಿದೆ ಎಂದು ಆರೋಪಿಸಿ ಬಿಜೆಪಿ ಧರ್ಮಸ್ಥಳ ಚಲೋ ಹಮ್ಮಿಕೊಂಡಿತ್ತು. ಇದೀಗ ಅದರ ಬೆನ್ನಲ್ಲೇ ಕಾಂಗ್ರೆಸ್ ಧರ್ಮಸ್ಥಳ ಚಲೋ ಹಮ್ಮಿಕೊಂಡಿದೆ. ಕಾಂಗ್ರೆಸ್ ಶಾಸಕ ಕುಣಿಗಲ್ ರಂಗನಾಥ್ ನೇತೃತ್ವದಲ್ಲಿ ಧರ್ಮಸ್ಥಳ ಚಲೋ ನಡೆಯಲಿದೆ.

ಕುಣಿಗಲ್ ರಂಗನಾಥ್ ನೇತೃತ್ವದಲ್ಲಿ ಧರ್ಮಸ್ಥಳಕ್ಕೆ ಯಾತ್ರೆ ನಡೆಯಲಿದೆ. ಸುಮಾರು 200 ಕಾರುಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಕ್ಷೇತ್ರದ ಜನರು ಧರ್ಮಸ್ಥಳಕ್ಕೆ ತೆರಳಲಿದ್ದಾರೆ. ಈ ಯಾತ್ರೆ ಬಗ್ಗೆ ಕುಣಿಗಲ್ ರಂಗನಾಥ್ ಮಾತನಾಡಿ, ?ಬಿಜೆಪಿಯವರದ್ದು ದ್ವಂದ್ವ ನೀತಿ. ಕೌರವರಿಗೂ ಭಾವ, ಪಾಂಡವರಿಗೂ ಭಾವ ರೀತಿ ಅವರು ವರ್ತಿಸ್ತಿದ್ದಾರೆ. ಮಗುವನ್ನೂ ಚಿವುಟ್ತಾರೆ ತೊಟ್ಲೂ ತೂಗ್ತಾರೆ. ಧರ್ಮಸ್ಥಳ ವಿಚಾರದಲ್ಲಿ ಶಾಸಕರೆಲ್ಲರು ಭಕ್ತರಿದ್ದೇವೆ. ಮಂಜುನಾಥ ಸ್ವಾಮಿ ಪ್ರತಿಯೊಬ್ಬರ ಮನೆಯಲ್ಲಿದ್ದಾನೆ? ಎಂದರು.

ಧರ್ಮಸ್ಥಳದ ಬಗ್ಗೆ ಕೇಳಿ ಬಂದಿರುವ ಗೊಂದಲ ನಿವಾರಣೆಯಾಗಬೇಕು. ಅದಕ್ಕೆ ತನಿಖೆ ಮಾಡಿ ಎಂದಿದ್ದಾರೆ. ನಾವು ಕುಣಿಗಲ್ ನಿಂದ ಧರ್ಮಸ್ಥಳಕ್ಕೆ ಹೋಗ್ತೇವೆ. 200 ಕಾರುಗಳಲ್ಲಿ ಕ್ಷೇತ್ರಕ್ಕೆ ಹೋಗ್ತೇವೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು. ಡಿಸಿಎಂ ಹೇಳಿದಂತೆ ಷಡ್ಯಂತ್ರ ನಡೆದಿರೋದು ನಿಜ. ಸಂಸ್ಕೃತಿಯನ್ನು ಕೆಣಕುವ ಕೆಲಸ ಮಾಡ್ತಿದ್ದಾರೆ. ಅದನ್ನು ಬಿಜೆಪಿಯವರೇ ಮಾಡ್ತಿದ್ದಾರೆ ಎಂದು ಅವರು ಇದೇ ಸಂದರ್ಭದಲ್ಲಿ ಆರೋಪಿಸಿದರು.

ಬಿಜೆಪಿಯಿಂದ ಚಾಮುಂಡಿ ಚಲೋ ವಿಚಾರವಾಗಿ ಇದೇ ಸಂದರ್ಭದಲ್ಲಿ ಪ್ರತಿಕ್ರಿಯೆ ನೀಡಿ, ?ನಾನು ಮೈಸೂರಿನಲ್ಲೇ ಓದಿದವನು. ಚಾಮುಂಡಿ ಮೇಲೆ ಎಲ್ಲರು ಭಕ್ತಿ ಇಟ್ಟಿದ್ದೇವೆ. ಎಲ್ಲ ಧರ್ಮದವರು ವಿಜಯದಶಮಿ ಮಾಡ್ತಾರೆ. ಇವರು ಹಗೆಯನ್ನ ಮೂಡಿಸ್ತಿದ್ದಾರೆ. ಮುಂದೆ ಚಾಮುಂಡಿ ಶಾಪ ಅವರಿಗೆ ತಟ್ಟುತ್ತೆ. ಬಿಜೆಪಿಯವರಿಗೆ ಶಾಪ ತಟ್ಟುತ್ತೆ? ಎಂದು ಎಚ್ಚರಿ–ಕೆ ನೀಡಿದರು. ಮಸೀದಿಯನ್ನ ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಮಾಡಿಲ್ಲವೇ? ಬಿಜೆಪಿಗರು ಜನರ ಭಾವನೆಗಳನ್ನು ಕೆಣಕುತ್ತಿದ್ದಾರೆ. ಅವರಿಗೆ ದೇವಿಯ ಶಾಪ ತಟ್ಟಲಿದೆ ಎಂದು ಇದೇ ವೇಳೆ ಕುಣಿಗಲ್ ಶಾಸಕ ರಂಗನಾಥ್ ವಾಗ್ದಾಳಿ ನಡೆಸಿದರು.

ಧರ್ಮಸ್ಥಳ ವಿಚಾರವಾಗಿ ಬಿಜೆಪಿ ಚಲೋ ಧರ್ಮಸ್ಥಳ ಹಮ್ಮಿಕೊಂಡಿತ್ತು. ಕ್ಷೇತ್ರದ ಬಗ್ಗೆ ಅಪಪ್ರಚಾರ ಮಾಡಲಾಗುತ್ತಿದೆ ಎಂಬುವುದು ಬಿಜೆಪಿ ಆರೋಪವಾಗಿದೆ. ಆದರೆ ಇದೇ ವಿಚಾರವಾಗಿ ಬಿಜೆಪಿ ನಾಯಕರಿಗೆ ಕಾಂಗ್ರೆಸ್ ನಾಯಕರು ತಿರುಗೇಟು ನೀಡಿದ್ದಾರೆ. ಇದರ ನಡುವೆಯೂ ಧರ್ಮಸ್ಥಳದ ಬಗ್ಗೆ ಎಚ್ಚರಿಕೆಯ ಹೆಜ್ಜೆಯನ್ನು ಇಡಲು ಬಿಜೆಪಿ ಮುಂದಾಗಿದೆ.

## ಬೆಂಗಳೂರಿನಲ್ಲಿನ ಮಳೆಗೆ ಸ್ವಿಮ್ಮಿಂಗ್ ಪೂಲಾದ ಡಬಲ್ ಡೆಕ್ಕರ್ ಫ್ಲೈ ಓವರ್; 'ಅದ್ಭುತ ಎಂಜಿನಿಯರಿಂಗ್' ಎಂದು ನೆಟ್ಟಿಗರು ಟೀಕೆ!

**ಬೆಂಗಳೂರು:** ಹಲವಾರು ಗಡುವುಗಳ ನಂತರ ಡಬಲ್ ಡೆಕ್ಕರ್ ಫ್ಲೈ



ಓವರ್ ಉದ್ಘಾಟನೆ ಇತ್ತೀಚೆಗೆ ಲೋಕಾರ್ಪಣೆಗೊಂಡಿತ್ತು. ಆದರೆ, ಬೆಂಗಳೂರಿನಲ್ಲಿ ಸುರಿದ ಭಾರಿ ಮಳೆಗೆ ಸ್ವಿಮ್ಮಿಂಗ್ ಪೂಲ್‌ನಂತಾಗಿದೆ. ಫ್ಲೈ ಓವರ್ ಮೇಲೆ ನೀರು ತುಂಬಿರುವ ವಿಡಿಯೋ ವೈರಲ್ ಆಗಿದೆ. ಈ ಬಗ್ಗೆ ಎಕ್ಸ್ ಖಾತೆಯಲ್ಲಿ ಟೀಕೆ ವ್ಯಕ್ತವಾಗುತ್ತಿದೆ.

ಫ್ಲೈಓವರ್‌ನಲ್ಲಿ ನೀರು ತುಂಬಿಕೊಂಡಿರುವ ಬಗ್ಗೆ ಅತುಲ್ ಎಂಬ ಎಕ್ಸ್ ಬಳಕೆದಾರ ವಿಡಿಯೋ ಹಂಚಿಕೊಂಡಿದ್ದಾರೆ. ಆ ಬೆನ್ನಲ್ಲೇ ಡಬಲ್ ಡೆಕ್ಕರ್ ಫ್ಲೈಓವರ್ ವಿನ್ಯಾಸ ಮತ್ತು ಒಳಚರಂಡಿ ವ್ಯವಸ್ಥೆಯ ಬಗ್ಗೆ ತೀವ್ರ ಟೀಕೆ ವ್ಯಕ್ತವಾಗಿದೆ.

ಡಬಲ್ ಡೆಕ್ಕರ್ ಫ್ಲೈ ಓವರ್‌ನಲ್ಲಿ ಚರಡಿ ವ್ಯವಸ್ಥೆ ಸರಿಯಾಗಿ ನಿರ್ಮಿಸಿಲ್ಲ. ಇದಕ್ಕೆ ಇನ್ನೆಷ್ಟು ಕೋಟಿ ಹಣ ಹೂಡಿಕೆ ಮಾಡಿ ಲೂಟಿ ಮಾಡುತ್ತಾರೋ ಎಂದು ನೆಟ್ಟಿಗರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನಾನು ಇದನ್ನು ಡಬಲ್ ಡೆಕ್ಕರ್ ಸ್ವಿಮ್ಮಿಂಗ್ ಪೂಲ್ ಎನ್ನುತ್ತಾನೆ ಟೀಕೆ ಮಾಡುತ್ತಿದ್ದಾರೆ.

ಒಂದು ಗಂಟೆ ಮಳೆ ಬಂದರೆ ನೀರು ನಿಲ್ಲಲ್ಲು ಹೇಗೆ ಸಾಧ್ಯ. ಇದೊಂದು ಫ್ಲೈಓವರ್ ನಿರ್ಮಿಸಿದ ಎಂಜಿನಿಯರ್ ಅದ್ಭುತ ಎಂದು ಟೀಕೆ ಮಾಡಿದ್ದಾರೆ. ಹಳದಿ ಮಾರ್ಗದ ಮೆಟ್ರೋ ಚಾಲನೆಗೆ ತೇಜಸ್ವಿ ಸೂರ್ಯ ಭಾರಿ ಹೋರಾಟ ಮಾಡುತ್ತಿದ್ದರು. ಈಗ ಎಲ್ಲಿದ್ದಾರೆ. ಫ್ಲೈ ಓವರ್‌ನ ಈ ಸ್ಥಿತಿಗೆ ಏನಂತಾರೆ ಎಂದು ಮತ್ತೊಬ್ಬ ಬಳಕೆದಾರ ಟೀಕೆ ಮಾಡಿದ್ದಾರೆ. ಹೆಚ್ಚು ಪ್ರಚಾರ ಪಡೆದ ಬೆಂಗಳೂರಿನ ಡಬಲ್ ಡೆಕ್ಕರ್ ಫ್ಲೈಓವರ್ ಉದ್ಘಾಟನೆಯಾಗಿ ಇನ್ನೂ ಒಂದು ವರ್ಷವಾಗಿಲ್ಲ. ಆಗಲೇ ಚರಂಡಿ ಸಮಸ್ಯೆಯಿಂದಾಗಿ ಮಳೆಗೆ ನದಿಯಂತಾಗಿದೆ. ನೀರಿನ ಒಳಚರಂಡಿಗೆ ಹೋಗುವ ಪ್ರತಿಯೊಂದು ಮಾರ್ಗವೂ ಮುಚ್ಚಿಹೋಗಿದೆ. ಒಳಚರಂಡಿಯಂತಹ ಮೂಲಭೂತ ಮೂಲಸೌಕರ್ಯಗಳನ್ನು ನಿರ್ಲಕ್ಷಿಸಿದರೆ, ಇಂತಹ ಭವ್ಯ ಯೋಜನೆಗಳಿಗೆ ಕೋಟಿಗಟ್ಟಲೆ ತೆರಿಗೆದಾರರ ಹಣವನ್ನು ಖರ್ಚು ಮಾಡುವುದರಲ್ಲಿ ಅರ್ಥವೇನು? ಫ್ಲೈಓವರ್ ವಾಹನಗಳನ್ನು ನೀರಿನಲ್ಲಿ ಸಿಲುಕಿಸಲು ಅಲ್ಲ, ಸಂಚಾರವನ್ನು ಸುಗಮಗೊಳಿಸಲು ಉದ್ದೇಶಿಸಿ ನಿರ್ಮಿಸಲಾಗಿದೆ.

# ಕಪ್ಪು ಎಂದು ಪತ್ನಿಯನ್ನೇ ಜೀವಂತ ಸುಟ್ಟ ಪಾಪಿಗೆ ಮರಣ ದಂಡನೆ



**ಉದಯಪುರ:** ಮೈ ಬಣ್ಣ ತೂಕದ ಕಾರಣಕ್ಕೆ ಪತ್ನಿಯನ್ನು ಸದಾ ನಿಂದಿಸುತ್ತಿದ್ದ ವ್ಯಕ್ತಿ ಬಳಿಕ ಅವಳನ್ನು ಸುಟ್ಟು ಹಾಕಿದ್ದಾನೆ. ಈ ಪ್ರಕರಣಕ್ಕೆ ಸಂಬಂಧಿಸಿ ಆರೋಪಿಯ ವಿಚಾರಣೆ ನಡೆಸಿದ ಉದಯಪುರದ ನ್ಯಾಯಾಲಯವು ಆತನನ್ನು ಅಪರಾಧಿ ಎಂದು ಘೋಷಿಸಿ ಮರಣದಂಡನೆ ಶಿಕ್ಷೆಯನ್ನು ವಿಧಿಸಿದೆ. ಆರೋಪಿಯು ಪತ್ನಿಯ ಮೈ ಬಣ್ಣ ಮತ್ತು ದೇಹದ ತೂಕಕ್ಕಾಗಿ ಸದಾ ನಿಂದಿಸುತ್ತಿದ್ದ. ಅವಳಿಗೆ ಹಿಂಸೆಯನ್ನು ನೀಡುತ್ತಿದ್ದ ಎಂದು ಪ್ರಾಸಿಕ್ಯೂಷನ್ ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

ಪತ್ನಿಯದ್ದು ಕಪ್ಪು ಮೈಬಣ್ಣ ಎಂದು ಪದೇ ಪದೇ ನಿಂದಿಸಿ ಕಿರುಕುಳ ನೀಡುತ್ತಿದ್ದ ವ್ಯಕ್ತಿ ಬಳಿಕ ಆಕೆಗೆ ಬೆಂಕಿ ಹಚ್ಚಿದ್ದಾನೆ ಎಂದು ಆರೋಪಿಸಿ ಆತನಿಗೆ ಉದಯಪುರದ ನ್ಯಾಯಾಲಯವು ಮರಣದಂಡನೆ ಶಿಕ್ಷೆ ವಿಧಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಿಶನ್ ಎಂಬಾತ ತನ್ನ ಪತ್ನಿ ಲಕ್ಷ್ಮಿ ಮೇಲೆ ಆಸಿಡ್ ಸುರಿದು ಬೆಂಕಿ ಹಚ್ಚಿದ್ದನು. ಕಿಶನ್ ನಿರಂತರ ಲಕ್ಷ್ಮಿಯನ್ನು ನಿಂದಿಸುತ್ತಿದ್ದ. ಆಕೆಯ ಮೈ ಬಣ್ಣ ಮತ್ತು ದೇಹದ ತೂಕಕ್ಕಾಗಿ ಅವಳನ್ನು ಹೀಯಾಳಿಸುತ್ತಿದ್ದ. ಅಪರಾಧದ ನಡೆದ ದಿನ ರಾತ್ರಿ ಅವನು ತನ್ನ ಹೆಂಡತಿಗೆ ಔಷಧವೆಂದು ಆಸಿಡ್ ತಂದು ಆಕೆಯ ದೇಹದ ಮೇಲೆ ಎರಚಿದ್ದಾನೆ. ಅದು ಆಮ್ಲೀಯ ವಾಸನೆ ಇತ್ತು. ಬಳಿಕ ಆತ ಧೂಪದ್ರವ್ಯದ ಕಡ್ಡಿಯನ್ನು ಹಚ್ಚಿ ಆಕೆಯ ಬಟ್ಟೆ ಮೇಲೆ ಹಾಕಿದ್ದಾನೆ. ಇದರಿಂದ ತೀವ್ರ ಸುಟ್ಟಗಾಯಗಳಾಗಿ ಆಕೆ ಸಾವನ್ನಪ್ಪಿದ್ದಾಳೆ.

ಈ ಕುರಿತು ಉದಯಪುರದ ವಲ್ಲಭನಗರ ಪೊಲೀಸ್ ಠಾಣೆಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿದ್ದು, ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಲಾಯಿತು. ಪಬ್ಲಿಕ್ ಪ್ರಾಸಿಕ್ಯೂಟರ್ ದಿನೇಶ್ ಪಾಲಿವಾಲ್ ಅವರು ಆರೋಪಿ ತನ್ನ ಹೆಂಡತಿಯ ಮೈಬಣ್ಣದ ಮೇಲಿನ ಗೀಳಿನಿಂದ ಈ ಅಪರಾಧ ನಡೆಸಿದ್ದಾನೆ ಎಂದು ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

# ಭಯೋತ್ಪಾದನೆ ಜಾಗತಿಕ ಶಾಂತಿಗೆ ಮತ್ತು ಭದ್ರತೆಗೆ ಅತಿದೊಡ್ಡ ಬೆದರಿಕೆಯಾಗಿದೆ : ನರೇಂದ್ರಮೋದಿ

**ಟಿಯಾನ್‌ಜಿನ್:** ಭಯೋತ್ಪಾದನೆ ಜಾಗತಿಕ ಶಾಂತಿಗೆ ಮತ್ತು ಭದ್ರತೆಗೆ ಅತಿದೊಡ್ಡ ಬೆದರಿಕೆ-ಯಾಗಿದೆ ಎಂದು ಕಳವಳ ವ್ಯಕ್ತಪಡಿಸಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಪಾಕಿಸ್ತಾನದ ಪ್ರಧಾನಿ ಶಹಬಾಸ್ ಷರೀಫ್ ಎದುರೇ ಪಹಲ್ಗಾಮ್ ದಾಳಿಯನ್ನು ಖಂಡಿಸಿದರು. ಭಯೋತ್ಪಾದನೆಗೆ ಕುಮ್ಮಕ್ಕು ನೀಡುತ್ತಿರುವ ಪಾಕಿಸ್ತಾನದ ಧೋರಣೆ ಸಹಿಸಲು ಸಾಧ್ಯವಿಲ್ಲ ಎಂದು ಖಡಕ್ ಸಂದೇಶ ರವಾನಿಸಿದರು.





ಕಳೆದ 4 ದಶಕಗಳಿಂದ ಭಾರತ ಭಯೋತ್ಪಾದನೆಯ ಭಾರವನ್ನು ಹೊರುತ್ತಿದೆ. ಇತ್ತೀಚೆಗೆ ಜಮ್ಮು-ಕಾಶ್ಮೀರದ ಪಹಾಲ್ಗಾಮ್ ನಲ್ಲಿ ನಡೆದ ಉಗ್ರರ ದಾಳಿಯ ಕರಾಳ ಮುಖವನ್ನು ನಾವು ನೋಡಿದ್ದೇವೆ. ಈ ದಾಳಿಯು ಮಾನವೀಯತೆಯಲ್ಲಿ ನಂಬಿಕೆ ಹೊಂದಿರುವ ಪ್ರತಿಯೊಂದು ದೇಶ ಮತ್ತು ವ್ಯಕ್ತಿಗೆ ಬಹಿರಂಗ ಸವಾಲಾಗಿತ್ತು ಎಂದು ಹೇಳಿದರು.

ಕೆಲ ದೇಶಗಳು ಭಯೋತ್ಪಾದಕನಿಗೆ ಬಹಿರಂಗವಾಗಿಯೇ ಕುಮ್ಮಕ್ಕು ನೀಡುತ್ತಿದೆ. ಪ್ರತಿಯೊಂದು ರೂಪ ಮತ್ತು ಬಣ್ಣದಲ್ಲೂ ಭಯೋತ್ಪಾದನೆಯನ್ನು ಸರ್ವಾನುಮತದಿಂದ ವಿರೋಧಿಸಬೇಕು ಎಂದು ಕರೆ ನೀಡಿದರು.

ಸದಸ್ಯ ರಾಷ್ಟ್ರಗಳು ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿ ಅಳವಡಿಸಿಕೊಳ್ಳುವ ಅಗತ್ಯವಿದೆ. "ಭಯೋತ್ಪಾದನೆ ಮತ್ತು ಉಗ್ರವಾದ ಮಾನವೀಯತೆಗೆ ಜಂಟಿ ಸವಾಲು. ಈ ಬೆದರಿಕೆಗಳು ಇರುವವರೆಗೆ ಯಾವುದೇ ದೇಶ ಅಥವಾ ಸಮಾಜ ತನ್ನನ್ನು ತಾನು ಸುರಕ್ಷಿತವೆಂದು ಪರಿಗಣಿಸಲು ಸಾಧ್ಯವಿಲ್ಲ" ಎಂದು ಹೇಳಿದ್ದಾರೆ

**ಪಾಕ್ ಪ್ರಧಾನಿಗೆ ಪರೋಕ್ಷವಾಗಿ ತರಾಟೆ:**

ಶಾಂಘೈ ಸಹಕಾರ ಶೃಂಗಸಭೆಯ ಸಮಗ್ರ ಅಧಿವೇಶನದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ಉದ್ಘಾಟನಾ ಹೇಳಿಕೆಯ ನಂತರ ಮಾತನಾಡದ ಪ್ರಧಾನಿ ನರೇಂದ್ರ ಮೋದಿ, ಪಾಕಿಸ್ತಾನ ಪ್ರಧಾನಿ ಶಹಬಾದ್ ಷರೀಪ್ ಭಾಗಿಯಾಗಿದ್ದ ವೇದಿಕೆಯಲ್ಲಿಯೇ ಭಯೋತ್ಪಾದನೆಯನ್ನು ಬೆಂಬಲಿಸುತ್ತಿರುವ ದೇಶಗಳಿಗೆ ಕಠಿಣ ಸಂದೇಶ ರವಾನಿಸಬೇಕಾಗಿದೆ ಎಂದಿದ್ದಾರೆ.

ಜಮ್ಮು ಕಾಶ್ಮೀರದ "ಪಹಲ್ಗಾಮ್‌ನಲ್ಲಿ ಭಯೋತ್ಪಾದನೆಯ ಕೆಟ್ಟ ಮುಖವನ್ನು ನೋಡಿದ್ದೇವೆ" ಕೆಲವು ದೇಶಗಳು ಭಯೋತ್ಪಾದಕರಿಗೆ ಬಹಿರಂಗ ಬೆಂಬಲ ನೀಡುತ್ತಿವೆ ಎಂದು ಪಾಕಿಸ್ತಾನದ ಹೆಸರು ಉಲ್ಲೇಖಿಸದೆ ತರಾಟೆಗೆ ತೆಗೆದುಕೊಂಡ ಅವರು ಭಯೋತ್ಪಾದನೆಯ ಬಗ್ಗೆ ಜಾಗತಿಕ ಮೌನ ಪ್ರಶ್ನಾರ್ಹ ಎಂದಿದ್ದಾರೆ.

ಕಳೆದ ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ 26 ಜೀವಗಳನ್ನು ಬಲಿ ಪಡೆದ ಭಯೋತ್ಪಾದಕ ದಾಳಿ ಅತ್ಯಂತ ಖಂಡನೀಯ. "ಕೆಲವು ದೇಶಗಳು ಭಯೋತ್ಪಾದನೆಗೆ ಮುಕ್ತ ಬೆಂಬಲ ನೀಡುತ್ತಿವೆ, ಅಂತಹ ದೇಶಗಳನ್ನು ಸ್ವೀಕರಿಸಲು ಸಾಧ್ಯವೆ ಎಂದು ಪ್ರಶ್ನಿಸಿದ್ದಾರೆ

ಯುರೋಪಿನಾದ್ಯಂತ ರಾಷ್ಟ್ರಗಳು ಮತ್ತು ಸರ್ಕಾರದ ಮುಖ್ಯಸ್ಥರು ಭಾಗವಹಿಸಿದ್ದ ನಾಯಕರ ಸಭೆಯು ಪ್ರಾದೇಶಿಕ ಸ್ಥಿರತೆ, ಆರ್ಥಿಕ ಸಹಕಾರ ಮತ್ತು ಬಹುಪಕ್ಷೀಯ ರಾಜತಾಂತ್ರಿಕತೆಯ ಮೇಲೆ ಗಮನ ಹರಿಸುವ ವೇದಿಕೆಯಾಗಿದ್ದರೂ ಪಾಕಿಸ್ತಾನದ ಪ್ರಧಾನಿ ಶಹಬಾದ್ ಷರೀಫ್ ಭಾಗಿಯಾಗಿದ್ದ ಹಿನ್ನೆಲೆಯಲ್ಲಿ ಭಯೋತ್ಪಾದನೆ ಮತ್ತು ಪಾಕಿಸ್ತಾನದ ವಿರುದ್ಧ ಪ್ರಧಾನಿ ಗುಡುಗಿದ್ದಾರೆ.

ಪ್ರಾದೇಶಿಕ ಶಾಂತಿ ಕಾಪಾಡುವಲ್ಲಿ ಮತ್ತು ವೇಗವಾಗಿ ಬದಲಾಗುತ್ತಿರುವ ಜಾಗತಿಕ ಭೂದೃಶ್ಯದಲ್ಲಿ ಸಮತೋಲಿತ ಅಭಿವೃದ್ಧಿಯನ್ನು ಉತ್ತೇಜಿಸುವಲ್ಲಿ ಶಾಂಘೈ ಸಹಕಾರ ಶೃಂಗ ಮಹತ್ವದ ಪಾತ್ರ ವಹಿಸಿದೆ ಎಂದು ಹೇಳಿದರು

ತಮ್ಮ ಆರಂಭಿಕ ಭಾಷಣದಲ್ಲಿ ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಶಾಂಘೈ ಸಹಕಾರ ಸಂಘಟನೆಯ ಸದಸ್ಯ ರಾಷ್ಟ್ರಗಳೊಂದಿಗೆ ಸಹಕಾರ ಬಲಪಡಿಸುವ ಚೀನಾದ ಬದ್ಧತೆಯನ್ನು ಪುನರುಚ್ಚರಿಸಿ ಮತ್ತು ಜಾಗತಿಕ ನ್ಯಾಯವನ್ನು ರಕ್ಷಿಸುವಲ್ಲಿ ಒಗ್ಗಟ್ಟಿನ ನಿಲುವಿಗೆ ಕರೆ ನೀಡಿದ್ದಾರೆ

ವಿಶ್ವಸಂಸ್ಥೆಯ ಪಾತ್ರವನ್ನು ರಕ್ಷಿಸುವ, ಏಕಪಕ್ಷೀಯತೆ ವಿರೋಧಿಸುವ ಮತ್ತು ಜಾಗತಿಕ ಆರ್ಥಿಕ ಸ್ಥಿರತೆಗೆ ಅತ್ಯಗತ್ಯ.,ಬಹುಪಕ್ಷೀಯ ವ್ಯಾಪಾರ ವ್ಯವಸ್ಥೆಯನ್ನು ಎತ್ತಿಹಿಡಿಯುವ ಅಗತ್ಯವಿದೆ ಎಂದಿದ್ದಾರೆ

ಅಭಿವೃದ್ಧಿ ಭಾಗವಾಗಲು ಆಹ್ವಾನ

ಜಾಗತಿಕ ಶಕ್ತಿಗಳನ್ನು ಭಾರತದ ಅಭಿವೃದ್ಧಿ ಪ್ರಯಾಣದ ಭಾಗವಾಗಿ ಎಂದು ಪ್ರಧಾನಿ ನರೇಂದ್ರ ಮೋದಿ ಮುಕ್ತ ಆಹ್ವಾನ ನೀಡಿದ್ದಾರೆ.

ಭಾರತ ಸುಧಾರಣೆ, ಸಾಧನೆ ಮತ್ತು ಪರಿವರ್ತನೆ ಎಂಬ ಮಂತ್ರವನ್ನು ಅನುಸರಿಸಿ ಮುಂದುವರಿಂ ಯುತ್ತಿದೆ.ಪ್ರತಿಯೊಂದು ಸವಾಲನ್ನು ಅವಕಾಶವನ್ನಾಗಿ ಪರಿವರ್ತಿಸಲು ಪ್ರಯತ್ನಿಸಿದ್ದೇವೆ.ಭಾರತದ ಅಭಿವೃದ್ಧಿ ಪ್ರಯಾಣದ ಭಾಗವಾಗಲು ನಿಮ್ಮೆಲ್ಲರನ್ನೂ ಆಹ್ವಾನಿಸುತ್ತೇನೆ" ಎಂದು ಹೇಳಿದರು

# ಪ್ರಬಲ ಭೂಕಂಪನಕ್ಕೆ ಆಫ್ಘಾನ್ ತತ್ತರ : 800 ಮಂದಿ ಸಾವು

ಕಾಬೂಲ್: ಆಫ್ಘಾನಿಸ್ತಾನದ ಹಲವು ಭಾಗಗಳಲ್ಲಿ ಇಂದು ಮುಂಜಾನೆ ನಾಲ್ಕು ಬಾರಿ ರಿಕ್ಟರ್ ಮಾಪನದಲ್ಲಿ 6.3ರಷ್ಟು ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದೆ. ಇದರ ಪರಿಣಾಮ 800ಕ್ಕೂ ಮಂದಿ ಸಾವನ್ನಪ್ಪಿದ್ದು ಸಾವಿರಾರು ಜನರು

ಗಾಯಗೊಂಡಿದ್ದಾರೆ. ಮೃತರ ಸಂಖ್ಯೆ ಇನ್ನಷ್ಟು ಏರಿಕೆಯಾಗುವ ಆತಂಕ ಎದುರಾಗಿದೆ.

ಪ್ರಬಲ ಭೂಕಂಪನದಿಂದ ತತ್ತರಿಸುವ ಆಫ್ಘಾನ್ ಕುನಾರ್ ಪ್ರಾಂತ್ಯದ ಮೂರು ಹಳ್ಳಿಗಳು ಸಂಪೂರ್ಣವಾಗಿ ನೆಲಸಮಗೊಂಡಿವೆ. ಅವಶೇಷಗಳಡಿಯಲ್ಲಿ ಸಿಕ್ಕಿ ಹಾಕಿಕೊಂಡವರ ರಕ್ಷಣೆಗಾಗಿ ಪರಿಹಾರ ಕಾರ್ಯಗಳು ಚುರುಕುಗೊಳಿಸಲಾಗಿದೆ ಎಂದು ವಿದೇಶಾಂಗ ಕಚೇರಿ ವಕ್ತಾರರು ತಿಳಿಸಿದ್ದಾರೆ.

ಭೂಕಂಪದ ಕೇಂದ್ರಬಿಂದು ಕಾಬೂಲ್‌ನಿಂದ ಕೇವಲ 23 ಕಿಲೋಮೀಟರ್ ದೂರದಲ್ಲಿದೆ. ಆಫ್ಘಾನಿಸ್ತಾನದಲ್ಲಿ ಸಂಭವಿಸಿದ ಭೂಕಂಪನದ ಪರಿಣಾಮ ನೆರೆಯ ದೇಶಗಳಾಧ ಪಾಕಿಸ್ತಾನ, ತಜಿಕಿಸ್ತಾನ್ ಮತ್ತು ಉತ್ತರ ಭಾರತದ ಕೆಲವು ಭಾಗಗಳಲ್ಲಿ ಆತಂಕದ ವಾತಾವರಣ ಸೃಷ್ಟಿ ಮಾಡಿದೆ.

ಈ ಕಂಪನಗಳು ನಾಲ್ಕು ದೇಶಗಳ ಜನರಲ್ಲಿ ಆತಂಕದ ವಾತಾವರಣ ಸೃಷ್ಟಿ ಮಾಡಿದ್ದು ಭೂಕಂಪನದ ಅನುಭವ ಆಗುತ್ತಿದ್ದಂತೆ



ಜನರು ಹಿಡಿ ಜೀವ ಹಿಡಿದು ರಕ್ಷಣೆಗಾಗಿ ಓಡಾಗಿ ಒದ್ದಾಡಿದ ಘಟನೆ ನಡೆದಿದೆ. ಮನೆ ಕಟ್ಟಡದಡಿ ಸಿಲುಕಿರುವ ಮಂದಿಯ ರಕ್ಷಣಾ ಕಾರ್ಯ ಭರದಿದಂದ ಸಾಗಿದೆ, ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು ಸಾವು ನೋವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಪಾಕಿಸ್ತಾನದ ಕೆಲವು ಭಾಗಗಳು ಸೇರಿದಂತೆ ಆಫ್ಘಾನಿಸ್ತಾನದ ಪ್ರದೇಶದಾದ್ಯಂತ ಕಂಪನದ ಅನುಭವವಾಗಿದೆ. ಕಂಪನಕ್ಕೆ ಸುಮಾರು 800ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದು ಸುಮಾರು ಸಾವಿರಾರು ಜನರು ಗಾಯಗ-ಓಂಡಿದ್ದಾರೆ. ಸಾವು ನೋವಿನ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ.

ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರದ ಮಾಹಿತಿ ಪ್ರಕಾರ, ಭೂಕಂಪ ಮುಂಜಾನೆ ಸಂಭವಿಸಿದೆ. ಮೊದಲು 6.3 ತೀವ್ರತೆಯ ಭೂಕಂಪ ಸಂಭವಿಸಿದೆ, ನಂತರ 4 ರಿಂದ 5ರ ನಡುವಿನ ತೀವ್ರತೆಯ ಕಂಪನಗಳು ಸಂಭವಿಸಿವೆ.

ಅದರಲ್ಲಿ 4.7 ತೀವ್ರತೆಯ ಭೂಕಂಪವು ಸುಮಾರು 140 ಕಿ.ಮೀ. ಆಳದಲ್ಲಿ ಸಂಭವಿಸಿದೆ ಎಂದು ಹೇಳಲಾಗಿದೆ.

ಆಫ್ಘಾನಿಸ್ತಾನದಲ್ಲಿ ನಾಲ್ಕು ಭೂಕಂಪನ ಸಂಭವಿಸಿದ್ದು ಅದರಲ್ಲಿ 4.7 ತೀವ್ರತೆಯ ಭೂಕಂಪನ ಸಂಭವಿಸಿದೆ, ಬಳಿಕ, ಕ್ರಮವಾಗಿ 140 ಕಿ.ಮೀ. ಮತ್ತು 40 ಕಿ.ಮೀ. ಆಳದಲ್ಲಿ 4.3 ಮತ್ತು 5.0 ತೀವ್ರತೆಯ ಮತ್ತಷ್ಟು ಭೂಕಂಪಗಳು ಸಂಭವಿಸಿವೆ ಎಂದು ಹೇಳಲಾಗಿದೆ.

ಭೂಮಿಯ ಮೇಲ್ಮೈಗೆ ಹತ್ತಿರ ಅಥವಾ ಮಧ್ಯಮ ಆಳದ ಭೂಕಂಪಗಳು ಅಪಾಯಕಾರಿ ಆಳವಾದ ಭೂಕಂಪಗಳು ಸಾಮಾನ್ಯವಾಗಿ ಹೆಚ್ಚು. ಏಕೆಂದರೆ ಇವುಗಳ ಕಂಪನ ತರಂಗಗಳು ಮೇಲ್ಮೈಗೆ ತಲುಪಲು ಕಡಿಮೆ ಸಮಯ ತೆಗೆದುಕೊಳ್ಳುತ್ತವೆ. ಇದರಿಂದ ನೆಲದ ಕಂಪನಗಳು ಹೆಚ್ಚು ತೀವ್ರವಾಗಿ ಮತ್ತು ಕಟ್ಟಡಗಳಿಗೆ ಹೆಚ್ಚು ಹಾನಿ ಮತ್ತು ಸಾವು-ನೋವುಗಳೀಗೆ ಕಾರಣವಾಗಲಿದೆ ಎಂದು ಹೇಳಲಾಗಿದೆ.

ರೆಡ್ ಕ್ರಾಸ್ ಸಂಸ್ಥೆಯ ಪ್ರಕಾರ, ಆಫ್ಘಾನಿಸ್ತಾನದಲ್ಲಿ ಈ ಹಿಂದೆ ಅನೇಕ ಪ್ರಬಲ ಭೂಕಂಪಗಳನ್ನು ಅನುಭವಿಸಿದೆ. ಮತ್ತು ಹಿಂದೂ ಕುಶ್ ಪರ್ವತ ಶ್ರೇಣಿಯು ಭೌಗೋಳಿಕವಾಗಿ ಸಕ್ರಿಯವಾಗಿದೆ, ಪ್ರತಿ ವರ್ಷವೂ ಭೂಕಂಪಗಳು ಸಂಭವಿಸುತ್ತವೆ.

ಆಫ್ಘಾನಿಸ್ತಾನವು ಇಂಡೋ-ಯುರೇಷಿಯನ್ ಟೆಕ್ಟೋನಿಕ್ ಪ್ಲೇಟ್‌ಗಳ ನಡುವಿನ ಹಲವಾರು ಭೂಪದರಗಳ ಮೇಲೆ ಇದೆ, ಮತ್ತು ಹೆರಾಟ್ ಮೂಲಕವೂ ಒಂದು ಭೂಪದರ ಹಾದು ಹೋಗುತ್ತದೆ.

# ಸಚಿವ ಜಮೀರ್ ಗೆ 2 ಕೋಟಿ ನೀಡಿದ ನಟಿ ರಾಧಿಕಾಗೆ ಲೋಕಾ ಗ್ರಿಲ್



**ಬೆಂಗಳೂರು:** ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರಿಗೆ 2 ಕೋಟಿ ರೂ ಹಣಕಾಸು ನೆರವು ನೀಡಿದ ಸಂಬಂಧ ನಟಿ ರಾಧಿಕಾ ಕುಮಾರಸ್ವಾಮಿ ಕಳೆದ ವಾರ ಲೋಕಾಯುಕ್ತ ವಿಚಾರಣೆಗೆ ಹಾಜರಾಗಿದ್ದಾರೆ.

ಜಮೀರ್ ಅಹ್ಮದ್ ಖಾನ್‌ಗೆ ಹಣ ಕೊಟ್ಟಿರುವ ಬಗ್ಗೆ ಲೋಕಾಯುಕ್ತ ವಿಚಾರಣೆ ವೇಳೆ ರಾಧಿಕಾ ಕುಮಾರಸ್ವಾಮಿ ಹೇಳಿಕೆ ದಾಖಲಿಸಿದ್ದಾರೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

ಅಕ್ರಮ ಆಸ್ತಿ ಗಳಿಕೆ ಆರೋಪ ಸಂಬಂಧ ಜಮೀರ್ ಅಹಮದ್ ಖಾನ್ ಅವರ ನಿವಾಸ ಮತ್ತು ಕಚೇರಿಗಳ ಮೇಲೆ 2019 ರಲ್ಲಿ ಜಾರಿ ನಿರ್ದೇಶನಾಲಯ ದಾಳಿ ನಡೆಸಿತ್ತು. ಆಗ ಜಮೀರ್‌ಗೆ ಹಣಕಾಸು ನೆರವು ಅಥವಾ ನೀಡಿದ ವಿವರಗಳನ್ನು ಇಡಿ ಸಂಗ್ರಹಿಸಿತ್ತು. ರಾಧಿಕಾ ಕುಮಾರಸ್ವಾಮಿ ಕೂಡ ಹಣ ನೀಡಿದ್ದರು ಎಂಬುದು ತಿಳಿದು ಬಂದಿತ್ತು.

ಆಗ ಜೆಡಿಎಸ್ ಕಾಂಗ್ರೆಸ್ ಸಮ್ಮಿಶ್ರ ಸರ್ಕಾರ ಅಸ್ತಿತ್ವದಲ್ಲಿದ್ದು, ಜಮೀರ್ ಸಚಿವರಾಗಿದ್ದರು. ಜಮೀರ್ ವಿರುದ್ಧ ಭ್ರಷ್ಟಾಚಾರ ವಿಗ್ರಹದಳ (ಎಸಿಬಿ) ಪ್ರಕರಣ ದಾಖಲಿಸಿತ್ತು. ಬಳಿಕ ರಾಜ್ಯದಲ್ಲಿ ಎಸಿಬಿ ರದ್ದುಗೊಂಡಿದ್ದರಿಂದ ಆ ಪ್ರಕರಣದ ತನಿಖೆಯನ್ನು ಲೋಕಾಯುಕ್ತ ಮುಂದುವರಿಸಿತ್ತು. ಅದರಂತೆ ತನಿಖೆಗೆ ಹಾಜರಾಗುವಂತೆ ರಾಧಿಕಾ ಕುಮಾರಸ್ವಾಮಿಗೆ ನೋಟಿಸ್ ನೀಡಲಾಗಿತ್ತು.

ಕಳೆದ 2012ರಲ್ಲಿ ಶಮಿಕಾ ಎಂಟರ್‌ಪ್ರೈಸಸ್ ಹೆಸರಿನಲ್ಲಿ ಯಶ್ ಮತ್ತು ರಮ್ಯಾ ಅಭಿನಯದ ಚಿತ್ರ ನಿರ್ಮಾಣ ಮಾಡಿದ್ದು ಅದರ ಯಶಸ್ಸು ಮತ್ತು ಸ್ಯಾಟಲೈಟ್ ಹಕ್ಕಿನಿಂದ ದೊರೆತ ಲಾಭಾಂಶದಲ್ಲಿ ಎರಡು ಕೋಟಿ ರೂಗಳನ್ನು ಸಚಿವರಿಗೆ ನೀಡಿದ್ದಾಗಿ ರಾಧಿಕಾ ಕುಮಾರಸ್ವಾಮಿ ಲೋಕಾಯುಕ್ತ ವಿಚಾರಣೆ ವೇಳೆ ತಿಳಿಸಿದ್ದಾರೆ.

ರಾಧಿಕಾ ಕುಮಾರಸ್ವಾಮಿ ಹೇಳಿಕೆ ದಾಖಲಿಸಿಕೊಂಡಿರುವ ಲೋಕಾಯುಕ್ತರು, ಪೂರಕ ದಾಖಲೆಗಳನ್ನು ಒದಗಿಸುವಂತೆ ಸೂಚಿಸಿದ್ದಾರೆ. ಮತ್ತೊಂದೆಡೆ, ರಾಧಿಕಾ ಕುಮಾರಸ್ವಾಮಿ ಮಾತ್ರವಲ್ಲದೆ ಇನ್ನೂ ಹಲವರಿಂದ ಜಮೀರ್ ಹಣ ಪಡೆದಿದ್ದರು ಎನ್ನಲಾಗಿತ್ತು. ಜೆಡಿಎಸ್ ಮುಖಂಡ ಕುಪೇಂದ್ರ ರೆಡ್ಡಿ ಸೇರಿದಂತೆ ಅನೇಕರಿಂದ ಜಮೀರ್ ಅಹ್ಮದ್ ಖಾನ್ ಹಣ ಪಡೆದಿದ್ದರು ಎನ್ನಲಾಗಿತ್ತು. ಈ ವಿಚಾರವಾಗಿ ಲೋಕಾಯುಕ್ತ ತನಿಖೆ ಮುಂದುವರಿದಿದೆ.

# ಮಂಗಳಮುಖಿಯರ ಅಟ್ಟಹಾಸಕ್ಕೆ ಜನ ದಂಗು! ಪೊಲೀಸ್ ಮೇಲೆ ಅಟ್ಯಾಕ್

**ಡಿಯೋರಿಯಾ:** ತೃತೀಯ ಲಿಂಗಿಗಳ ಗುಂಪೊಂದು ರೈಲು ನಿಲ್ದಾಣದಲ್ಲಿ ದಾಂಧಲೆ ಎಬ್ಬಿಸಿದ್ದಲ್ಲದೆ ಆರ್‌ಪಿಎಫ್ ಇನ್ಸ್‌ಪೆಕ್ಟರ್ ಮೇಲೆ ಹಲ್ಲೆ ಮಾಡಿರುವ ಆಘಾತಕಾರಿ ಘಟನೆ ಉತ್ತರ ಪ್ರದೇಶದ ಡಿಯೋರಿಯಾ ಸದರ್ ರೈಲ್ವೆ ನಿಲ್ದಾಣದಲ್ಲಿ ನಡೆದಿದೆ. ರೈಲು ಪ್ರಯಾಣಿಕರಿಂದ ಅಕ್ರಮ ಹಣ ಸುಲಿಗೆ ಮಾಡಿದ್ದಕ್ಕಾಗಿ ಆರ್‌ಪಿಎಫ್ ಇನ್ಸ್‌ಪೆಕ್ಟರ್‌ಗೆ ಮಾಹಿತಿ ನೀಡಲಾಗಿದೆ. ಇದನ್ನು ಪ್ರಶ್ನಿಸಿದ್ದಕ್ಕೆ ಕೋಪಗೊಂಡ ತೃತೀಯ ಲಿಂಗಿಗಳ ಗುಂಪು, ರೈಲ್ವೆ ನಿಲ್ದಾಣದ ಪ್ಲಾಟ್‌ಫಾರ್ಮ್‌ನಲ್ಲಿ ಮನಸೋ ಇಚ್ಛೆ ಥಳಿಸಿದ್ದಾರೆ.

ಆರ್‌ಪಿಎಫ್ ಇನ್ಸ್‌ಪೆಕ್ಟರ್ ಅವರನ್ನು ಥಳಿಸಿರುವ ದೃಶ್ಯದ ವಿಡಿಯೊ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದೆ. ಘಟನೆ ಸಂಬಂಧ ಈಗಾಗಲೇ ಪೊಲೀಸರು ಇಬ್ಬರನ್ನು ಬಂಧಿಸಿದ್ದಾರೆ. ರೈಲ್ವೆ ನಿಲ್ದಾಣದ ಬಳಿಯ ವ್ಯಾಪಾರಿಗಳು, ಪ್ರಯಾಣಿಕರು ತೃತೀಯ ಲಿಂಗಿಗಳ ಹಿಂಸಾತ್ಮಕ ದಾಳಿಯಿಂದ ಅಧಿಕಾರಿಯನ್ನು ರಕ್ಷಿಸಿದ್ದಾರೆ.

ಆರ್‌ಪಿಎಫ್ ಇನ್ಸ್‌ಪೆಕ್ಟರ್ ಮೊಹಮ್ಮದ್ ತಮ್ಮ ಸಹೋದ್ಯೋಗಿಗಳೊಂದಿಗೆ ಡಿಯೋರಿಯಾ ರೈಲ್ವೆ ನಿಲ್ದಾಣದಲ್ಲಿ ಅವಧ್ ಅಸ್ಸಾಂ ಎಕ್ಸ್‌ಪ್ರೆಸ್ ರೈಲನ್ನು ಪರಿಶೀಲಿಸುತ್ತಿದ್ದರು. ಈ ವೇಳೆ ಕೆಲವು ಪ್ರಯಾಣಿಕರು ತೃತೀಯ ಲಿಂಗಿ ವ್ಯಕ್ತಿಗಳು ಸುಲಿಗೆ ಮಾಡುತ್ತಿದ್ದಾರೆ ಎಂದು ಇನ್ಸ್‌ಪೆಕ್ಟರ್‌ಗೆ ದೂರು ನೀಡಿದರು. ಹಣವನ್ನು ನೀಡದಿದ್ದರೆ ಕೆಟ್ಟದಾಗಿ ವರ್ತಿಸುತ್ತಾರೆ ಎಂದು ಪ್ರಯಾಣಿಕರು ದೂರಿದ್ದಾ-ರೆ.ಇನ್ನು ಪ್ರಯಾಣಿಕರ ದೂರಿನ ಮೇರೆಗೆ, ನಿಲ್ದಾಣದಲ್ಲಿ ಸುತ್ತಾಡುತ್ತಿರುವ ತೃತೀಯ ಲಿಂಗಿ ವ್ಯಕ್ತಿಗಳಿಗೆ ಪ್ರಯಾಣಿಕ-ರಿಂದ ಹಣ ವಸೂಲಿ ಮಾಡದಂತೆ ಸೂಚನೆ ನೀಡಿದರು.

ಹೆಚ್ಚಿನ ದೂರುಗಳು ಬಂದರೆ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಇದಕ್ಕೆ ಕೋಪಗೊಂಡ ತೃತೀಯ ಲಿಂಗಿಗಳು ಗಲಾಟೆ ಎಬ್ಬಿಸಿದ್ದಾರೆ. ಕೆಲವೇ ಕ್ಷಣಗಳಲ್ಲಿ, ತೃತೀಯ ಲಿಂಗಿಗಳ ಗುಂಪು ರೈಲ್ವೆ ನಿಲ್ದಾಣದಲ್ಲಿ ಜಮಾಯಿಸಿ ಪ್ಲಾಟ್‌ಫಾರ್ಮ್ ಸಂಖ್ಯೆ 1 ರಲ್ಲಿ ಗಲಾಟೆ ಮಾಡಲು ಪ್ರಾರಂಭಿಸಿದರು. ರೈಲಿಗಾಗಿ ಕಾಯುತ್ತಿದ್ದ ಪ್ರಯಾಣಿಕರೊಂದಿಗೆ ಅನುಚಿತವಾಗಿ ವರ್ತಿಸಲು ಪ್ರಾರಂಭಿಸಿದರು.

ಗಲಾಟೆಯ ಬಗ್ಗೆ ಮಾಹಿತಿ ಪಡೆದ ಆರ್‌ಪಿಎಫ್ ಇನ್ಸ್‌ಪೆಕ್ಟರ್ ಮೊಹಮ್ಮದ್, ಪೊಲೀಸ್ ಸಿಬ್ಬಂದಿಯೊಂದಿಗೆ ಸಾಮಾನ್ಯ ಉಡುಪಿನಲ್ಲಿ ಸ್ಥಳಕ್ಕೆ ಬಂದರು. ಕೋಪಗೊಂಡ ಅವರು ಆರ್‌ಪಿಎಫ್ ಇನ್ಸ್‌ಪೆಕ್ಟರ್ ಬಳಿಯಿದ್ದ ಲಾಠಿ ಕಸಿದುಕೊಂಡು ಅವರ ಮೇಲೆ ಹಲ್ಲೆ ನಡೆಸಿದ್ದಾರೆ. ಅವರನ್ನು ಬೆನ್ನಟ್ಟಿ ಮನಸೋ ಇಚ್ಛೆ ಥಳಿಸಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ತೃತೀಯ ಲಿಂಗಿಗಳು ಜಮಾಯಿಸಿದ್ದರಿಂದ ಪೊಲೀಸರಿಗೆ ನಿಯಂತ್ರಣ ಮಾಡಲು ಆಗಲಿಲ್ಲ.

ಅಷ್ಟೇ ಅಲ್ಲ ಆರ್‌ಪಿಎಫ್ ಕಚೇರಿಗೆ ನುಗ್ಗಿ ಧ್ವಂಸ ಮಾಡಿದ್ದಾರೆ. ಇನ್ಸ್‌ಪೆಕ್ಟರ್ ಅವರನ್ನು ಬೆನ್ನಟ್ಟಿ ಥಳಿಸಿದ್ದಾರೆ. ಈ ವೇಳೆ ಧೈರ್ಯವಾಗಿ ಮುಂದೆ ಬಂದ ವ್ಯಾಪಾರಿಗಳು ಹಾಗೂ ಪ್ರಯಾಣಿಕರು ಪೊಲೀಸರ ಪರವಾಗಿ ನಿಂತರು. ಹಲ್ಲೆ ಮಾಡದಂತೆ ಅವರನ್ನು ತಡೆದರು. ಇದರಿಂದ ದಾಳಿಕೋರರು ಹಿಂದೆ ಸರಿದರು.

# ಧರ್ಮಸ್ಥಳದಲ್ಲಿ ಬಿಜೆಪಿ ಯಾತ್ರೆ ಡೋಂಗಿತನ

**ಬೆಂಗಳೂರು:** ಬಿಜೆಪಿ ಧರ್ಮಸ್ಥಳದಲ್ಲಿ ರಾಜಕೀಯ ಮಾಡುತ್ತಿದೆ. ಧರ್ಮಸ್ಥಳದಲ್ಲಿ ಬಿಜೆಪಿ ನಡೆಸಿರುವ ಯಾತ್ರೆ ರಾಜಕೀಯ ಯಾತ್ರೆ. ಅದರಿಂದ ಅವರಿಗೆ ರಾಜಕೀಯ ಲಾಭ ಸಿಗಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ತಮ್ಮ ಹುಟ್ಟೂರು ಮೈಸೂರಿನ ಸಿದ್ಧರಾಮನ ಹುಂಡಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ರಚನೆಯಾದಾಗ ಬಿಜೆಪಿ ಯಾ-ಕೆ ಯಾತ್ರೆ ಮಾಡಲಿಲ್ಲ ಎಂದು ಪ್ರಶ್ನಿಸಿ, ಇದು ಬಿಜೆಪಿಯ ಡೋಂಗಿತನ ಅಲ್ಲವೆ ಎಂದರು.

ಬಿಜೆಪಿಯಿಂದ ಚಾಮುಂಡಿ ಚಲೋ ಯಾತ್ರೆ ನಡೆಸುವ ಬಗ್ಗೆಯೂ ಪ್ರತಿಕ್ರಿಯಿಸಿದ ಅವರು, ಹಿಂದೂತ್ವ ಗಟ್ಟಿಯಾಗುತ್ತದೆ ಎಂದು ಬಿಜೆಪಿ ಈ ಯಾತ್ರೆಗಳ ಪ್ಲಾನ್ ಮಾಡುತ್ತಿದೆ. ಇವರಿಂದ ಹಿಂದೂತ್ವ ಗಟ್ಟಿಯಾಗಲ್ಲ. ನಾನು ಕೂಡಾ ಹಿಂದೂ. ನಮ್ಮ ಊರಿನಲ್ಲಿ ರಾಮಮಂದಿರ ಕಟ್ಟಿಸಿದ್ದೇನೆ ಎಂದರು.



ಹಿಂದೂಗಳು ಎಂದರೆ ಸುಳ್ಳು ಹೇಳುವುದು, ಅಪಪ್ರಚಾರ ಮಾಡುವವರು ಅಲ್ಲ. ಮನುಷ್ಯತ್ವ ಇರುವವರು ಹಿಂದೂಗಳ ಅಮಾನವೀಯ ನಡವಳಿಕೆ ತೋರುವವರು ಹಿಂದೂಗಳಲ್ಲ ಎಂದರು. ಬಿಜೆಪಿಯವರು ಎಲ್ಲದರಲ್ಲೂ ಸುಳ್ಳು ಹೇಳುತ್ತಿದ್ದಾರೆ. ದಸರಾ ವಿಚಾರದಲ್ಲೂ ರಾಜಕೀಯ ಮಾಡುತ್ತಿದ್ದಾರೆ. ಅವರು ತಮ್ಮ ಸ್ವಂತ ಮನೆಯನ್ನು ಬೇಕಾದರೆ ರಾಜಕೀಯಕ-ಕ್ಕೆ ಬಳಸಿಕೊಳ್ಳುತ್ತಾರೆ. ಹಿಂದೂಗಳು ಎಲ್ಲ ಬಿಜೆಪಿ ಜತೆ ಇಲ್ಲ ಎಂದು ಸಿದ್ದರಾಮಯ್ಯ ತಿಳಿಸಿದರು. ಚಾಮುಂಡಿಬೆಟ್ಟ ಹಿಂದೂಗಳದಲ್ಲ ಎಂಬ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಡಿ. ಕೆ.ಶಿವಕುಮಾರ್ ಹೇಳಿರುವುದು ನನಗೆ ಗೊತ್ತಿಲ್ಲ. ಚಾಮುಂಡಿಬೆಟ್ಟ ಹಿಂದೂಗಳ ಆಸ್ತಿ ಇರಬಹುದು. ಆದರೆ ಈಗ ವಿಚಾರ ಇರುವುದು ಚಾಮುಂಡಿಬೆಟ್ಟದ್ದಲ್ಲ ದಸರಾ ನಾಡಹಬ್ಬ ಎಲ್ಲರಿಗೂ ಸೇರಿದ್ದು ಎಂದರು.

ನನ್ನ ಸ್ವಗ್ರಾಮದಲ್ಲಿ ನಾನು 5 ರಿಂದ 7ನೇ ತರಗತಿವರೆಗೆ ಓದಿದ ಶಾಲೆಗೆ ಹೊಸ ಕಟ್ಟಡ ಕಟ್ಟಿಸಿದ್ದೇನೆ. ಈ ಊರಿಗ ಪ್ರಾಥಮಿಕ ಶಾಲೆ, ಹೈಸ್ಕೂಲ್, ಪಿಯು ಕಾಲೇಜು ಆಗಿದೆ. ವಿದ್ಯಾರ್ಥಿಗಳು ಸಿಗಲ್ಲ ಎಂಬ ಕಾರಣಕ್ಕೆ ಪದವಿ ಕಾಲೇಜು ಮಾಡಿಲ್ಲ. ಹಾಗೆಯೇ ಊರಿಗೆ ಆರೋಗ್ಯ ಸೇವೆ ಸಿಗಲು ಎಲ್ಲ ವ್ಯವಸ್ಥೆ ಮಾಡಿದ್ದೇನೆ. ಊರಿನ ಋಣ ಯಾವಾಗಲೂ ಇದ್ದೆ ಇರುತ್ತದೆ. ಅದು ಯಾವಾಗಲೂ ಮುಗಿಯದ ಋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಈ ಸಂದರ್ಭದಲ್ಲಿ ಸಚಿವ ವೆಂಕಟೇಶ್ ಸೇರಿದಂತೆ ಹಲವು ಗಣ್ಯರು ಇದ್ದರು.

# ವಾಣಿಜ್ಯ ಸಿಲಿಂಡರ್ 51 ರೂ. ಇಳಿಕೆ





**ನವದೆಹಲಿ:** ದೇಶದಲ್ಲಿ ವಾಣಿಜ್ಯ ಸಿಲಿಂಡರ್ ಎಲ್‌ಪಿಜಿ ಬೆಲೆಯಲ್ಲಿ 51.50 ರೂ. ಇಳಿಕೆ ಮಾಡಿದ್ದು ಗೃಹ ಬಳಕೆಯ ಸಿಲಿಂಡರ್ ದರದಲ್ಲಿ ಯಥಾಸ್ಥಿತಿ ಮುಂದುವರಿದಿದೆ. ತೈಲ ಕಂಪನಿಗಳು 19ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯಲ್ಲಿ ಕಡಿತ ಘೋಷಿಸಿದ್ದು, ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು ಮತ್ತು ವ್ಯವಹಾರಗಳಲ್ಲಿ ತೊಡಗಿಸಿಕೊಂಡವರಿಗೆ ತುಸು ನೆಮ್ಮದಿಯ ನಿಟ್ಟಿಸಿರುವ ಬಿಟ್ಟಿದ್ದು ಹೊಸ ದರ ಇಂದಿನಿಂದಲೇ ಅನ್ವಯವಾಗಲಿದೆ.

ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬಳಕೆ ಮಾಡುತ್ತಿರುವ ಬೀದಿ ಬದಿಯ ತಿನಿಸು ತಯಾರಕರು, ಪಾನಿಪೂರಿ, ಡಾಬಾಗಳು ಮತ್ತು ಸಣ್ಣ ಪ್ರಮಾಣದ ಆಹಾರ ತಯಾರು ಮಾಡುವ ಮಂದಿಗೆ ತುಸು ಪರಿಹಾರ ಸಿಕ್ಕಿದೆ.

ಪರಿಷ್ಕೃತ ಬೆಲೆಯ ಪ್ರಕಾರ, ದೆಹಲಿಯಲ್ಲಿ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಚಿಲ್ಲರೆ ಮಾರಾಟ ಬೆಲೆ ಈಗ 1,580 ರೂ.ಗಳಾಗಿದ್ದು, ಪ್ರತಿ ಸಿಲಿಂಡರ್‌ಗೆ 51.50 ರೂ. ಕಡಿತವಾಗಿದೆ. ಜಾಗತಿಕ ಇಂಧನ ಮಾನದಂಡಗಳು ಮತ್ತು ಇನ್‌ಪುಟ್ ವೆಚ್ಚಗಳಿಗೆ ಸಂಬಂಧಿಸಿದ ನಿಯಮಿತ ಮಾಸಿಕ ಪರಿಷ್ಕರಣೆಗಳ ಭಾಗವಾಗಿ ಈ ಕಡಿತ ಮಾಡಲಾಗಿದೆ.

ಗೃಹ ಬಳಕೆಯ ಅಡುಗೆ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ. 14.2 ಕೆಜಿ ದೇಶೀಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆ ಯಥಾಸ್ಥಿತಿ ಮುಂದುವರಿದಿದೆ. ಅಂತರಾಷ್ಟ್ರೀಯ ಇಂಧನ ಬೆಲೆ ಚಲನೆಗಳು ಮತ್ತು ವಿದೇಶಿ ವಿನಿಮಯ ದರಗಳಲ್ಲಿನ ಏರಿಳಿತಗಳ ಆಧಾರದ ಮೇಲೆ ತೈಲ ಮಾರುಕಟ್ಟೆ ಕಂಪನಿಗಳು ಎಲ್‌ಪಿಜಿ ದರಗಳನ್ನು ಮಾಸಿಕವಾಗಿ ಪರಿಷ್ಕರಿಸುತ್ತವೆ.

ವಾಣಿಜ್ಯ ಬಳಕೆಯ ಸಿಲಿಂಡರ್ ದರವನ್ನು 51.50ರೂಪಾಯಿ ಇಳಿಕೆ ಮಾಡಿದ ಹಿನ್ನೆಲೆಯಲ್ಲಿ ದೇಶಾದ್ಯಂತ ವಾಣಿಜ್ಯ ಸಿಲಿಂಡರ್ ಬೆಲೆ 1580 ರೂಪಾಯಿನಷ್ಟಿದೆ. ಕೋಲ್ಕತ್ತಾ, 1,684, ಮುಂಬೈ-1531.5 ಮತ್ತು ಚೆನ್ನೈನಲ್ಲಿ 1,738 ಕ್ಕೆ ಇಳಿಯಲಿವೆ ಎಂದು ಭಾರತೀಯ ತೈಲ ನಿಗಮ ತಿಳಿಸಿದೆ.

ಏಪ್ರಿಲ್ 8 ರಿಂದ 14.2 ಕೆಜಿ ಸಿಲಿಂಡರ್‌ಗಳ ಬೆಲೆಗಳು ಬದಲಾಗದೆ ಉಳಿದಿವೆ. ದೆಹಲಿಯಲ್ಲಿ, ಒಂದು ಸಿಲಿಂಡರ್ ಬೆಲೆ 853 ಆಗಿದ್ದರೆ, ಚೆನ್ನೈ, ಕೋಲ್ಕತ್ತಾ ಮತ್ತು ಮುಂಬೈನಲ್ಲಿ ಬೆಲೆಗಳು 868.50, 879 ಮತ್ತು 852.50 ಆಗಿವೆ ಎಂದು ಮಾಹಿತಿ ಹಂಚಿಕೊಂಡಿದೆ.

# ಬೆಂಗಳೂರಲ್ಲಿ ವರುಣನ ಅಬ್ಬರ:,ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಅವಾಂತರ



**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿಂದು ಸಂಜೆ ವರುಣ ಅಬ್ಬರಿಸಿದ್ದಾನೆ. ಬೆಳಗ್ಗೆಯಿಂದ ಕಾಣಿಸಿಕೊಳ್ಳದ ಮಳೆರಾಯ ಸಂಜೆ ಅಪ್ಪಳಿಸಿ

ಕೆಲವೇ ನಿಮಿಷ ಸುರಿದ ಮಳೆಯಿಂದಾಗಿ ಹಲವೆಡೆ ಅವಾಂತರ ಉಂಟಾಗಿದೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದರಿಂದ ಜನರು ಪರದಾಡುವಂತಾಗಿದೆ. ಸೆಪ್ಟೆಂಬರ್ ಮೊದಲ ದಿನವೇ ಜೋರು ಮಳೆ ಸುರಿದಿದೆ. ಮಳೆಗಾಲದ ದಿನಗಳಿಗೆ ಹೋಲಿಕೆ ಮಾಡಿದರೆ ಇಂದು ಸಂಜೆ ಭರ್ಜರಿ ಮಳೆಯಾಗಿದೆ. ರಸ್ತೆಯಲ್ಲಿ ಜನ, ವಾಹನ ಸಂಚಾರ ಸಾಧ್ಯವಾಗದಷ್ಟು ಜೋರಾಗಿ ಸುರಿಯಿತು. ವಾಹನ ಸವಾರರು ಮಳೆಯಲ್ಲಿ ಸಂಚಾರ ಮಾಡುವ ಧೈರ್ಯ ಮಾಡದೇ ರಸ್ತೆ ಬದಿಯಲ್ಲಿ ವಾಹನಗಳನ್ನು ನಿಲ್ಲಿಸಿ ಮರ, ಕಟ್ಟಡಗಳ ಬಳಿ ಆಶ್ರಯ ಪಡೆದ ದೃಶ್ಯ ಕಂಡಿಬಂತು. ಕೆಲವೆಡೆ ಟ್ರಾಫಿಕ್ ದಟ್ಟಣೆ ಕೂಡ ಉಂಟಾಗಿ ಸವಾರರು ಸಂಕಷ್ಟಕ್ಕೆ ಸಿಲುಕಿದರು.

ರಸ್ತೆಯಲ್ಲಿ 2 ರಿಂದ 3 ಅಡಿಯಷ್ಟು ನೀರಿನಿಂದ ಆವೃತವಾಗಿತ್ತು. ಚರಂಡಿ ನೀರು ತುಂಬಿ ಹರಿಯುತ್ತಿದ್ದರಿಂದ ದುರ್ವಾಸನೆ ಬೀರುತ್ತಿತ್ತು. ಇದು ವಾಹನ ಸವಾರರನ್ನೂ ಹೈರಾಣಾಗುವಂತೆ ಮಾಡಿತ್ತು. ಇನ್ನೂ ಹಲವೆಡೆ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದರಿಂದ ಜನರು ಪರಿತಪಿಸುವಂತಾಯಿತು.

ಟೌನ್ ಹಾಲ್, ಕಾರ್ಪೋರೇಷನ್, ಜಯನಗರ, ಜೆಪಿ ನಗರ ಸುತ್ತಮುತ್ತ, ವಿಲ್ಸನ್ ಗಾರ್ಡನ್, ಶಾಂತಿನಗರ, ಲಾಲ್ ಬಾಗ್ ಸುತ್ತಮುತ್ತ, ಮಲ್ಲೇಶ್ವರಂ ರಸ್ತೆ, ಮಂತ್ರಿ ಮಾಲ್ ಯಲ್ಲಿ ಜೋರು ಮಳೆ ಉಂಟಾಗಿತ್ತು.

ಅಲ್ಲದೇ ಬಿಬಿಎಂಪಿ ವಲಯ ಕಚೇರಿ ಮುಂದಿನ ರಸ್ತೆಯೇ ತುಂಬಿ ಹರಿಯುತ್ತಿದ್ದ ದೃಶ್ಯವೂ ಕಂಡುಬಂದಿತು. ಅಲ್ಲದೇ ಕೆ.ಆರ್ ಮಾರ್ಕೆಟ್, ಶಾಂತಿನಗರದಲ್ಲೂ ಜೋರು ಮಳೆಯಾಗಿದ್ದು, ರಸ್ತೆಗಳು ಜಲಾವೃತಗೊಂಡವು.

# ತಂದೆಯಿಂದಲೇ ಅಪ್ರಾಪ್ತ ಪುತ್ರಿಗೆ ಲೈಂಗಿಕ ಕಿರುಕುಳಕ್ಕೆ ಯತ್ನ

**ವಿಜಯಪುರ:** ತಂದೆಯೊಬ್ಬ ತನ್ನ ಅಪ್ರಾಪ್ತ ಪುತ್ರಿಯ ಮೇಲೆಯೇ ಲೈಂಗಿಕ ಕಿರುಕುಳಕ್ಕೆ ಯತ್ನಿಸಿದ ಅಮಾನವೀಯ ಪ್ರಕರಣ ನಗರದಲ್ಲಿ ಬೆಳಕಿಗೆ ಬಂದಿದ್ದು, ಈ ಘಟನೆಯಿಂದ ಇಡೀ ಸಮಾಜ ತಲೆ ತಗ್ಗಿಸುವಂತಾಗಿದೆ.

ಐದು ವರ್ಷದ ಅಪ್ರಾಪ್ತ ಪುತ್ರಿಯ ಮೇಲೆಯೇ ತಂದೆಯೊಬ್ಬನು ಲೈಂಗಿಕ ಕಿರುಕುಳ ನೀಡಲು ಯತ್ನಿಸಿದ್ದಾನೆಂಬ ಪುತ್ರಿಯ ಬಾಯಿಂದ ಹೊರ ಬಿದ್ದ ಮಾತು ಕೇಳಿ ತಾಯಿಗೆ ಗರ ಸಿಡಿಲು ಬಡಿದಂತಾಯಿತು. ಕೆಲ ಹೊತ್ತು ವಿಚಲಿತಳಾದ ತಾಯಿ ವಿಜಯಪುರ ಮಹಿಳಾ ಪೊಲೀಸ್ ಠಾಣೆಯಲ್ಲಿ ಈ ಬಗ್ಗೆ ದೂರು ನೀಡಿದ್ದಾಳೆ.

ಮಕ್ಕಳನ್ನು ಸಂರಕ್ಷಿಸುವ ಜವಾಬ್ದಾರಿ ತಂದೆ ತಾಯಿಗಳಿಬ್ಬರ ಮೇಲೆಯೂ ಇರುತ್ತದೆ. ಆದರೆ ಇಲ್ಲಿ ತಂದೆಯೇ ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ಕಿರುಕುಳ ನೀಡಲು ಹೊರಟಿದ್ದು ನಾಗರಿಕ ಸಮಾಜ ತಲೆತಗ್ಗಿಸುವಂತೆ ಮಾಡಿದೆ.

ಪೊಲೀಸರು ತಕ್ಷಣ ಪೋಕ್ಸೋ ಕಾಯ್ದೆ ಅಡಿ ಪ್ರಕರಣವನ್ನು ದಾಖಲಿಸಿಕೊಂಡು ಆರೋಪಿ ತಂದೆಯನ್ನು ಬಂಧಿಸಿದ್ದಾರೆ. ಸದ್ಯ ಬಾಲಕಿಯನ್ನು ಸರ್ಕಾರಿ ಆಸ್ಪತ್ರೆಗೆ ಸೇರಿಸಲಾಗಿದೆ. ಅಲ್ಲಿ ಅಗತ್ಯ ವೈದ್ಯಕೀಯ ಚಿಕಿತ್ಸೆ ನೀಡಲಾಗುತ್ತಿದೆ.

ಮಗುವಿನ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

# ಜಿಬಿಎ ಐದು ಪಾಲಿಕೆಯ ಆಯುಕ್ತರನ್ನಾಗಿ ಹಿರಿಯ ಅಧಿಕಾರಿಗಳ ನೇಮಕ: ಡಿಕೆಶಿ

**ಬೆಂಗಳೂರು:** ಆಡಳಿತಾತ್ಮಕ ಅನುಭವ ವಿರುವ, ಉಪ ಆಯುಕ್ತರುಗಳಾಗಿ ಕೆಲಸ ನಿರ್ವಹಿಸಿರುವ ಹಿರಿಯ ಅಧಿಕಾರಿಗಳನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ಪಾಲಿಕೆಗಳಿಗೆ ಆಯುಕ್ತರನ್ನಾಗಿ ನೇಮಕ ಮಾಡಲು ತೀರ್ಮಾನ ತೆಗೆದುಕೊಳ್ಳಲಾಗಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಯಾವ, ಯಾವ ಅಧಿಕಾರಿಗಳನ್ನು ನಿಯೋಜನೆ ಮಾಡಬೇಕು ಎಂದು ಸಭೆಯಲ್ಲಿ ಚರ್ಚಿಸಲಾಯಿತು.

ಈಗ ಸ್ಥಳೀಯವಾಗಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳನ್ನೇ ಪಾಲಿಕೆಗಳಿಗೆ ನಿಯೋಜನೆ ಮಾಡಲಾಗುವುದು ಎಂದು ಹೇಳಿದರು.



ಸರ್ಕಾರಿ ಅಧಿಕೃತ ಕೆಲಸಗಳಿಗೆ ಹೆಲಿಕಾಪ್ಟರ್ ಮತ್ತು ವಿಮಾನಗಳ ಬಳಕೆ ಸ್ವರೂಪ ಕುರಿತು ಪ್ರತಿಕ್ರಯಿಸಿ, ಈ ವಿಚಾರ ಅನೇಕ ವರ್ಷದಿಂದಲೂ ಸರ್ಕಾರದ ಮುಂದೆ ಬಾಕಿ ಉಳಿದಿತ್ತು.

ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳಲು ಹಾಗೂ ಟೆ-ಂಡರ್ ಕರೆಯುವ ವಿಚಾರವಾಗಿ ಮುಖ್ಯಮಂತ್ರಿಯವರು ನನಗೆ ಜವಾಬ್ದಾರಿ ನೀಡದ್ದರು. ಬೇರೆ ರಾಜ್ಯಗಳಲ್ಲಿನ ವ್ಯವಸ್ಥೆಯನ್ನು ತಿಳಿದುಕೊಳ್ಳುವಂತೆ ಹಾಗೂ ಎಚ್‌ಎಎಲ್ ಅವರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವಂತೆ ಸೂಚಿಸಲಾಗಿದೆ ಎಂದರು.

ಬೋವಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ನಡೆದಿರುವ ಬಗ್ಗೆ ಮಾಹಿತಿಯಿಲ್ಲ. ಸಂಬಂಧಪಟ್ಟ ಸಚಿವರ ಬಳಿ ಮಾಹಿತಿ ಪಡೆದುಕೊಳ್ಳುತ್ತೇನೆ ಎಂದು ತಿಳಿಸಿದರು.

# ಡಿಸಿ ಆದೇಶ ಉಲ್ಲಂಘಿಸಿ: ರೇಣುಕಾಚಾರ್ಯ

## 'ಗಣೇಶೋತ್ಸವದಲ್ಲಿ ಡಿ.ಜೆ. ಬಳಕೆ ಹಿಂದೂ ಸಂಪ್ರದಾಯ' ಎಂದು ಪ್ರತಿಪಾದನೆ



**ದಾವಣಗೆರೆ:** ಗಣೇಶಮೂರ್ತಿ ವಿಸರ್ಜನೆಯ ಮೆರವಣಿಗೆಯಲ್ಲಿ ಡಿ.ಜೆ. ನಿಷೇಧಿಸಿ ಜಿಲ್ಲಾಧಿಕಾರಿ ಜಿ.ಎಂ. ಹೊರಡಿಸಿದ ಗಂಗಾಧರಸ್ವಾಮಿ ಅದೇಶವನ್ನು ಹಿಂದೂ ಯುವಕರು ಉಲ್ಲಂಘಿಸಬೇಕು ಎಂದು ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಸಲಹೆ ನೀಡಿದರು.

'ಗಣೇಶೋತ್ಸವದಲ್ಲಿ ಡಿ.ಜೆ. ಬಳಸುವುದು ಹಿಂದೂಗಳ ಸಂಪ್ರದಾಯ. 'ಸುಪ್ರೀಂ ಕೋರ್ಟ್ ಕೂಡ ಡಿ.ಜೆ.ಗೆ ಅವಕಾಶ ಕಲ್ಪಿಸಿದೆ. ನ್ಯಾಯಾಲಯದ ಷರತ್ತುಗಳನ್ನು ಪಾಲಿಸಿ ಡಿ.ಜೆ. ಬಳಕೆಗೆ ಅವಕಾಶ ನೀಡಬೇಕು. ಸಂಪೂರ್ಣ ನಿಷೇಧ ಹೇರುವುದು ಸರ್ವಾಧಿಕಾರಿ ಧೋರಣೆಯಾಗುತ್ತದೆ' ಎಂದು ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಕಿಡಿಕಾರಿದರು.

'ಹುಬ್ಬಳ್ಳಿ ಧಾರವಾಡ, ಬೆಳಗಾವಿ, ಹಾವೇರಿ ಸೇರಿ ಹಲವು ಜಿಲ್ಲೆಗಳಲ್ಲಿ ಡಿ.ಜೆ.

ಬಳಸಲು ಅವಕಾಶ ನೀಡಲಾಗಿದೆ. ಆದರೆ, ದಾವಣಗೆರೆಯಲ್ಲಿ ಇದಕ್ಕೆ ನಿಷೇಧ ಹೇರಲಾಗಿದೆ. ಇದನ್ನು ನೆಪವಾ ಗಿಟ್ಟುಕೊಂಡು ಪೊಲೀಸರು ದೌರ್ಜನ್ಯ ಎಸಗುತ್ತಿದ್ದಾರೆ. ಹಿಂದೂ ಯುವಕರು ಡಿ.ಜೆ. ಬಳಸಿ ಶಕ್ತಿಯನ್ನು ಪ್ರದರ್ಶಿಸಬೇ-ಕು' ಎಂದರು.

ಮಾಜಿ ಸಚಿವ ಬಸವರಾಜ ನಾಯ್ಕ, ಎನ್.ರಾಜಶೇಖರ್, ಮಲ್ಲಿಕಾರ್ಜುನ,

**ಡಿ.ಜೆ ನಿಷೇಧಿಸಿದ ಜಿಲ್ಲಾಡಳಿತವು ಅಜಾನ್ ಕೂಡ ನಿಷೇಧಿಸಬೇಕು.ಪಿ.ಬಿ. ರಸ್ತೆಯಲ್ಲಿ ಸಂಚಾರ ನಿರ್ಬಂಧಿಸಿ ಮಾಡುವ ಧಾರ್ಮಿಕ ಆಚರಣೆಗಳಿಗೆಕಡಿವಾಣ ಹಾಕಬೇಕು**

**– ಎಂ.ಪಿ.ರೇಣುಕಾಚಾರ್ಯ, ಮಾಜಿ ಸಚಿವ**

### 'ಶಿವತಾಂಡವ ನೃತ್ಯವೇ ಡಿ.ಜೆ'

ಆಡಿ.ಜೆ. ಹಿಂದೂ ಅಥವಾ ಭಾರತೀಯ ಸಂಸ್ಕೃತಿಯೇ?
ರೇಣುಕಾಚಾರ್ಯ: ಹೌದು, ಹಿಂದೂ ಸಂಸ್ಕೃತಿಯಲ್ಲಿ ಅವೇಶಭರಿತ ಹಾಡು, ನೃತ್ಯಗಳಿವೆ. ಶಿವತಾಂಡವ ನೃತ್ಯದ ಮುಂದುವರಿದ ರೂಪವೇ ಡಿ.ಜೆ. ಆಡಿಸಿ ಆದೇಶ ಉಲ್ಲಂಘಿಸುವಂತೆ ಯುವಕರನ್ನು ಪ್ರೇರೇಪಿಸುವ ಬದಲು ನೀವೇ ಮೊದಲು ಡಿ.ಜೆ. ಹಾಕಬೇಕಲ್ಲವೇ?
ರೇಣುಕಾಚಾರ್ಯ: ನಾವು ನಾಯಕರು, ಡಿ.ಜೆ. ತರಿಸುವ ಆಲೋಚನೆಮಾಡಿಲ್ಲ. ಹಿಂದೂಗಳ ಹಕ್ಕು ಕೇಳುವಂತೆ ಯುವಕರಿಗೆ ಹೇಳುತ್ತಿದ್ದೇವೆ. ಯುವಸಮೂಹದಲ್ಲಿ ಜಾಗೃತಿ ಮೂಡಿಸುತ್ತಿದ್ದೇವೆಯೇ ಹೊರತು ಕುಮ್ಮಕ್ಕು ನೀಡುತ್ತಿಲ್ಲ.
ಆಡಿ.ಜೆ.ಯಿಂದ ಆಗುವ 5 ಪ್ರಯೋಜನ ಹೇಳಿ?
**ರೇಣುಕಾಚಾರ್ಯ:** ಗಣೇಶೋತ್ಸವದ ಮೆರವಣಿಗೆಯಲ್ಲಿ ಹಿಂದೆ ಡೊಳ್ಳು,ಭಜನೆಯಂತಹ ಜಾನಪದ ಕಲೆಗಳಿದ್ದವು. ಕಾಲ ಬದಲಾದಂತೆ ಕಲೆಗಳು ಬದಲಾಗಿವೆ. ಡಿ.ಜೆ. ಈ ಕಾಲದ ಸಂಸ್ಕೃತಿ. ಇದನ್ನು ಬಳಸಬೇಡಿ ಎನ್ನುವ ಹಕ್ಕು ಜಿಲ್ಲಾಡಳಿತಕ್ಕೆ ಇಲ್ಲ.
ಆಡಿ.ಜೆ ಬದಲು ಜನಪದ ಕಲಾತಂಡಕ್ಕೆ ಒತ್ತು ನೀಡಬೇಕಲ್ಲವೇ?
**ರೇಣುಕಾಚಾರ್ಯ:** ಜನಪದ ಕಲೆಗಳನ್ನು ನಿರಾಕರಿಸುತ್ತಿಲ್ಲ. ಅವು ಕೂಡ ಮೆರವಣಿಗೆಯಲ್ಲಿ ಇರುತ್ತವೆ. ಈ ಕುರಿತು ಗಣೇಶೋತ್ಸವ ಸಮಿತಿಗಳಿಗೆ ಸೂಚನೆ ನೀಡಲಾಗುವುದು.
ಆಡಿ.ಜೆ.ಯಿಂದ ಜನರಿಗೆ ತೊಂದರೆ ಆಗುತ್ತಿದೆಯಲ್ಲಾ?
ರೇಣುಕಾಚಾರ್ಯ: ಸಾರ್ವಜನಿಕರಿಗೆ ತೊಂದರೆ ಆಗದಂತೆ ಡಿ.ಜೆ.ಬಳಸುತ್ತೇವೆ. ಸುಪ್ರೀಂ ಕೋರ್ಟ್ ನಿಗದಿಪಡಿಸಿದ ಡೆಸಿಬಲ್ ಪಾಲನೆ ಮಾಡುತ್ತೇವೆ. ಅಶ್ಲೀಲ ಹಾಡುಗಳ ಬದಲು ಭಕ್ತಿಗೀತೆಗಳನ್ನು ಮಾತ್ರ ಹಾಕುವಂತೆ ಸೂಚಿಸುತ್ತೇವೆ.

# ಕ್ರೀಡಾ ದಿನಾಚರಣೆ ಅಂಗವಾಗಿ ಸೈಕಲ್ ಜಾತ



**ದಾವಣಗೆರೆ:** ದಾವಣಗೆರೆ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಹಾಗೂ ದಾವಣಗೆರೆ ಬೈಸಿಕಲ್ ಕ್ಲಬ್ ಇವರ ಸಂಯುಕ್ತಾಶ್ರಯದಲ್ಲಿ ಭಾರತದ ಹಾಕಿ ಆಟಗಾರ ಮೇಜರ್ ಧ್ಯಾನ್ ಚಂದ್ ಅವರ ಜನ್ಮದಿನಾಚರಣೆಯ ಪ್ರಯುಕ್ತ ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಅಂಗವಾಗಿ ಇಂದು ಭಾನುವಾರ ಆಗಸ್ಟ್ 31 ರಂದು ಬೆಳಿಗ್ಗೆ 6.00 ಗಂಟೆಗೆ ಸೈಕಲ್ ಜಾತವನ್ನು ದಾವಣಗೆರೆ ಜಿಲ್ಲಾ ಕ್ರೀಡಾಂಗಣ ( ಆಚಿತಚಿಟಿರಜಡಿಜ ಞುಣ ಖಣಚಿಜುಣಟ) ನಿಂದ ಆರಂಭ ಮಾಡಿ, ಕೆ, ಇ. ಬಿ. ಸರ್ಕಲ್, ಜಯದೇವ ಸರ್ಕಲ್, ಗಾಂಧಿ ಸರ್ಕಲ್ ನಿಂದ ಮಹಾನಗರ ಪಾಲಿಕೆ ಮುಂಭಾಗದಿಂದ, ಕನ್ನಡ ಸರ್ಕಲ್, ಸಂಗೊಳ್ಳಿ ರಾಯಣ್ಣ ಸರ್ಕಲ್, ಲಕ್ಷ್ಮಿ ಫ್ಲೋರ್ ಮಿಲ್, ಗುಂಡಿ ಸರ್ಕಲ್, ಮೂಲಕ ನಗರದ ಎಲ್ಲಾ ಮುಖ್ಯರಸ್ತೆಗಳ ಮೂಲಕ ಸೈಕಲ್ ಸವಾರಿ ಮಾಡಿ ಜಿಲ್ಲಾ ಕ್ರೀಡಾಂಗಣದಲ್ಲಿ ಮುಕ್ತಾಯ ಮಾಡಲಾಯಿತು.

ಈ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಸಿಇಒ ಗಿತ್ತೆ ಮಾಧವ ವಿಠ್ಠಲ ಉದ್ಘಾಟಿಸಿದ ಅವರು ಪ್ರತಿದಿನ ಸೈಕಲ್ ತುಳಿಯುವುದರಿಂದ, ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು, ಇದಕ್ಕಿಂತ ಉತ್ತಮವಾದ ವ್ಯಾಯಾಮ ಬೇರೆ ಯಾವುದೂ ಇಲ್ಲ, ದಿನಕ್ಕೆ ಅರ್ಧ ಗಂಟೆ ಸೈಕಲ್ ತುಳಿಯುವುದರಿಂದ ಮಾನಸಿಕ ನೆಮ್ಮದಿ, ಮಾನವನಲ್ಲಿ ಚೈತನ್ಯ ವೃದ್ಧಿಯಾಗುತ್ತದೆ, ಇಂತಹ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕನಿಷ್ಠಪಕ್ಷ 500 ಜನ ಆದರೂ ಭಾಗವಹಿಸಬೇಕಿತ್ತು, ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಲಿ ಎಂದು ಮಾತನಾಡಿದರು.

ಮತ್ತು ಸ್ವತಃ ಸೈಕಲ್ ಜಾತದಲ್ಲಿ ಭಾಗವಹಿಸಿದರು ಜೊತೆಗೆ ಈ ಸಂದರ್ಭದಲ್ಲಿ ದಾವಣಗೆರೆ ಬೈಸಿಕಲ್ ಕ್ಲಬ್ ನ ಕಾರ್ಯದರ್ಶಿಗಳಾದ ಕೆ ಎಸ್ ಮಹೇಶ್ ಅವರು ಒಂದು ಲಕ್ಷ ಕಿಲೋಮೀಟರ್ ಸೈಕಲ್ ಸವಾರಿಯನ್ನು ಯಶಸ್ವಿಯಾಗಿ ಮಾಡಿ ಮುಗಿಸಿದ್ದು ಅವರಿಗೆ ಜಿಲ್ಲಾ ಪಂಚಾಯತ್ ಸಿಇಒ ಮತ್ತು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀಹರ್ಷಾ ಅವರು ಸನ್ಮಾನಿಸಿ ಶುಭ ಹಾರೈಸಿದರು, ಯುವ ಸಬಲೀಕರಣ ಖೋ -ಖೋ ತರಬೇತಿರಾದ ಜೆ ರಾಮಲಿಂಗಪ್ಪ. ಸುನಿತಾ, ಸೂಪರ್ಡೆಂಟ್ ಅರ್ಪಿತ, ಅಶೋಕ್, ಬಾಷಾ,

ಹಾಗೂ ಸೈಕಲ್ ಜಾತಾದಲ್ಲಿ ದಾವಣಗೆರೆ ಬೈಸಿಕಲ್ ಕ್ಲಬ್ ನ ಉಪಾಧ್ಯಕ್ಷರಾದ ಡಾ.ಎಲ್ ಎಸ್ ಪಾಟೀಲ್,ಕಾರ್ಯದರ್ಶಿಗಳಾದ ಕೆ ಎಸ್ ಮಹೇಶ್, ಸದಸ್ಯರಾದ ವೀರೇಶ್, ನಾಗರಾಜ್,ಡಾ. ರಾಘವೇಂದ್ರ, ಚಂದ್ರ ಮೌಳಿ, ಪ್ರಭು, ಸಂತೋಷ, ಶಶಾಂಕ್,ನಂದು, ಅರುಣಾ ಮೇಡಂ ಹಾಗೂ ಹಿಮಾಲಯನ್ ಅಡ್ವೆಂಚರ್ ಅಂಡ್ ನೇಚರ್ ಅಕಾಡೆಮಿ ಎನ್. ಕೆ. ಕೊಟ್ರೇಶ್ ಅವರು ಭಾಗವಹಿಸಿ ಕಾರ್ಯಕ್ರಮನ್ನು ಯಶಸ್ವಿಯಾಗಿ ನೆರವೇರಿಸಿದರು.

## ಬೀದಿನಾಟಕ ಕಲಾ ತಂಡಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಪ್ರಸಕ್ತ ಸಾಲಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಡಿಯಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕಾರ್ಯಕ್ರಮ, ಯೋಜನೆಗಳ ಕುರಿತು ಜಾನಪದ ಕಲಾ ತಂಡಗಳ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಜಾನಪದ ಕಲಾ ತಂಡಗಳನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ತಂಡಗಳು ಸಾಂಗ್ ಮತ್ತು ಡ್ರಾಮಾ ಡಿವಿಜನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಂಸ್ಕೃತಿ ಇಲಾಖೆ, ಇತರೆ ವಿವಿಧ ಸರ್ಕಾರಿ ಇಲಾಖೆಯಲ್ಲಿ ಭಾಗವಹಿಸಿ ಗುರುತಿಸಲ್ಪಟ್ಟಿದ್ದು, ಜಿಲ್ಲಾ ನೋಂದಣಿ ಇಲಾಖೆಯಲ್ಲಿ ನೋಂದಾಯಿತ ಸಂಸ್ಥೆಯಾಗಿರಬೇಕು. ಕಲಾ ತಂಡದಲ್ಲಿ ಕನಿಷ್ಠ 06 ರಿಂದ 08 ಜನ ಕಲಾವಿದರು ಇರಬೇಕು. ಈ ಪೈಕಿ ಇಬ್ಬರು ಮಹಿಳಾ ಕಲಾವಿದರು, ಒಬ್ಬರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರನ್ನೊಳಗೊಂಡಿರಬೇಕು. ಸಂಗೀತ ಸಲಕರಣೆಗಳನ್ನು ಹಾಗೂ ಸಮವಸ್ತ್ರ ಹೊಂದಿರಬೇಕು.

ಆಸಕ್ತ ಅರ್ಹ ಜಾನಪದ ಬೀದಿ ನಾಟಕ ಕಲಾತಂಡಗಳು ತಮ್ಮ ತಂಡದ ಸಂಪೂರ್ಣ ವಿವರ, ಕಲಾವಿದರ ವಿವರ, ಅನುಭವದ ದಾಖಲೆಗಳ ಅರ್ಜಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಗೆ ಸೆಪ್ಟೆಂಬರ್ 9 ರೊಳಗಾಗಿ ಸಲ್ಲಿಸಬೇಕು. ತಂಡಗಳಿಗೆ ಆಯ್ಕೆ ಮಾಡುವ ದಿನಾಂಕವನ್ನು ನಂತರ ತಿಳಿಸಲಾಗುವುದು. ಅರ್ಜಿ ಸಲ್ಲಿಸಿದ ಕಲಾ ತಂಡಗಳು ತಮ್ಮ ಸ್ವಂತ ಖರ್ಚಿನಲ್ಲಿ ಈ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿ, ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು.

ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯಲ್ಲಿ ಕಲಾ ತಂಡಗಳನ್ನು ಆಯ್ಕೆ ಮಾಡಲಾಗುತ್ತದೆ. ಆಸಕ್ತ ಜಾನಪದ ಬೀದಿನಾಟಕ ಕಲಾ ತಂಡಗಳು, ಕಚೇರಿಯ ಸಮಯದಲ್ಲಿ ನಿಗದಿತ ಅರ್ಜಿ ನಮೂನೆಯನ್ನು ಹಾಗೂ ಹೆಚ್ಚಿನ ಮಾಹಿತಿಯನ್ನು ಐ.ಇ.ಸಿ.ವಿಭಾಗ ರೂ.ನಂ:03 ಪಡೆದು, ಸಲ್ಲಿಸಬಹುದಾಗಿದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

## ಕಚೇರಿ ಸ್ಥಳಾಂತರ

**ದಾವಣಗೆರೆ :** ಸಹಾಯಕ ನಿರ್ದೇಶಕರು, ಅನೌಪಚಾರಿಕ ಪಡಿತರ ಪ್ರದೇಶ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆಯ ಕಚೇರಿಯು ಕೃಷಿ ಉತ್ಪನ್ನ ಮಾರುಕಟ್ಟೆ ಕಚೇರಿ ಆವರಣದಲ್ಲಿರುವ ಕಟ್ಟಡಕ್ಕೆ ಸೆ.1 ರಿಂದ ಸ್ಥಳಾಂತರಿಸಲಾಗಿದೆ.

ಸಾರ್ವಜನಿಕರು ಈ ವಿಳಾಸಕ್ಕೆ ಭೇಟಿ ನೀಡಿ ಅನೌಪಚಾರಿಕ ಪಡಿತರ ಪ್ರದೇಶದ ಕಾದಾರರು ತಮ್ಮ ಕುಂದುಕೊರತೆಗಳನ್ನು ನಿವಾರಿಸಿಕೊಳ್ಳಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಎಂ.ಎಸ್ ವಿಶ್ವನಾಥಗೌಡ ತಿಳಿಸಿದ್ದಾರೆ.

## ಜಲಸಿರಿ ನೀರಿನ ಶುಲ್ಕ ಪಾವತಿಸಲು ಸೂಚನೆ

**ದಾವಣಗೆರೆ :** ಮಹಾನಗರಪಾಲಿಕೆ ವತಿಯಿಂದ ಜಲಸಿರಿ ಯೋಜನೆಯಡಿಯಲ್ಲಿ ನೀರಿನ ಶುಲ್ಕ ಪಾವತಿಸುತ್ತಿರುವ ನೀರಿನ ಬಳಕೆಗೆ ಅನುಗುಣವಾಗಿ ನಿಗದಿಪಡಿಸಿರುವ ನೀರಿನ ದರಗಳ ಪ್ರಕಾರ ಪರಿಮಾಣಾಧಾರಿತ ನೀರಿನ ಶುಲ್ಕದ ಬಿಲ್ಲುಗಳನ್ನು ನೀಡಲಾಗುತ್ತಿದ್ದು, ಬಿಲ್ಲಿನಲ್ಲಿ ನಮೂದಿಸಿರುವ ನೀರಿನ ಶುಲ್ಕವನ್ನು ಕಡ್ಡಾಯವಾಗಿ ಮಹಾನಗರಪಾಲಿಕೆಯ ಆವರಣದಲ್ಲಿರುವ ಗ್ರಾಹಕರ ಸೇವಾಕೇಂದ್ರ, ನಿಟ್ಟುವಳ್ಳಿ ಉದ್ಯಾನವನದಲ್ಲಿರುವ ಗ್ರಾಹಕರ ಸೇವಾ ಕೇಂದ್ರದಲ್ಲಿ ಮತ್ತು ಆಶ್ರಯ ಆಸ್ಪತ್ರೆ ಪಕ್ಕದ ಮಹಾನಗರಪಾಲಿಕೆಯ ವಲಯ ಕಛೇರಿ-03 ರ ಜಲಸಿರಿ ಕೌಂಟರ್‌ನಲ್ಲಿ ನಗದು ರೂಪದಲ್ಲಿ ಪಾವತಿಸಬೇಕು.. ಆನ್ ಲೈನ್ ಮುಖಾಂತರ ಕೂಡ ಪಾವತಿಸಲು ಜಲಸಿರಿ ಅಪ್ಲಿಕೇಶನ್ ಅಥವಾ www.Davangerewater.co.in ಮುಖಾಂತರವೂ ಪಾವತಿಸಬಹುದು. ನೀರಿನ ಶುಲ್ಕವನ್ನು ನಿಗಧಿತ ಸಮಯದಲ್ಲಿ ಪಾವತಿಸದೇ ಇದ್ದಲ್ಲಿ ನೀರು ಸರಬರಾಜನ್ನು ಸ್ಥಗಿತಗೊಳಿಸಲಾಗುವುದು. 24/7 ನೀರು ಸರಬರಾಜಿಗೆ ಸಂಬಂದಿಸಿದಂತೆ ಯಾವುದೇ ತೊಂದರೆಗಳಿದ್ದಲ್ಲಿ ಗ್ರಾಹಕರ ಸೇವಾ ಕೇಂದ್ರದ ಸಂಖ್ಯೆ 9036544419 ವನ್ನು ಸಂಪರ್ಕಸಬಹುದೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಗದಗ:** ಭಾರತೀಯ ಸೇನೆ/ಇತರೆ ಯುನಿಫಾರ್ಮ ಸೇವೆಗಳಿಗೆ ಸೇರಬಯಸುವ ಹಿಂದುಳಿದ ವರ್ಗಗಳ ಪ್ರವರ್ಗ-1, 2 ಎ, 3 ಎ , 3ಬಿ ಅರ್ಹ ಅಭ್ಯರ್ಥಿಗಳಿಗೆ ಕಲಬುರಗಿ ಜಿಲ್ಲಾ ಕೇಂದ್ರದಲ್ಲಿ ಉಚಿತವಾಗಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 10 ಆಗಿದ್ದು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ , ಕಲಬುರಗಿ ಇಲ್ಲಿ ಸಂಪರ್ಕಿಸಬಹುದಾಗಿದೆ.

# ಅಪಘಾತಗಳನ್ನು ನಿಯಂತ್ರಿಸುವ ಬಗ್ಗೆ ಮನವಿ



**ದಾವಣಗೆರೆ:** ಕಳೆದ 8 ತಿಂಗಳಿನಲ್ಲಿ ದಾವಣಗೆರೆ ನಗರದಲ್ಲಿ ಕೆಎಸ್ಸಾರ್ಟಿಸಿ ಹಾಗೂ ಖಾಸಗಿ ಬಸ್‌ಗಳಿಂದ ದಾವಣಗೆರೆ ನಗರ ವ್ಯಾಪ್ತಿಯಲ್ಲಿ ಏಳು ಭೀಕರ ಅಪಘಾತಗಳಾಗಿವೆ. ಈ ಅಪಘಾತಗಳಲ್ಲಿ ಕೆಲವರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಇನ್ನೂ ಕೆಲವರು ಶಾಶ್ವತ ಅಂಗವೈಕಲ್ಯಕ್ಕೆ ಒಳಗಾಗಿದ್ದಾರೆ. ಉದಾ.: ದಾವಣಗೆರೆಯ ರಿಂಗ್ ರಸ್ತೆಯ ಅಪಘಾತ. ದಾವಣಗೆರೆ ಜಿಲ್ಲಾಧಿಕಾರಿಗಳ ಮನೆಯಿಂದ ಕೂಗಳತೆಯ ದೂರದಲ್ಲಿ ರಿಂಗ್ ರಸ್ತೆಯಲ್ಲಿ ಬೆಳಿಗ್ಗೆ 10.30ಕ್ಕೆ ಕೆಎಸ್ಸಾರ್ಟಿಸಿ ಬಸ್ಸೊಂದು ತನ್ನ ಪಾಡಿಗೆ ಆರ್‌ಟಿಓ ಕಚೇರಿಗೆ ಕರ್ತವ್ಯಕ್ಕೆ ಹೊರಟಿದ್ದ ಆರ್‌ಟಿಓ ಕಚೇರಿಯ ಅಧೀಕ್ಷಕರಿಗೆ ಡಿಕ್ಕಿ ಹೊಡೆದು ಬಲಿ ತೆಗೆದುಕೊಂಡಿದೆ. ಈ ಅಪಘಾತಗಳಿಂದ ಮೃತರ ಕುಟುಂಬದವರಿಗೆ ತುಂಬಾ ಅನ್ಯಾಯವಾಗಿದ್ದು, ಅವರ ಜೀವನ ದುಃಖಕರವಾಗಿದೆ. ಕೆಲವರು ಸಂಸಾರದ ಜವಾಬ್ದಾರಿಯುತ ವ್ಯಕ್ತಿಗಳಾಗಿದ್ದು ಒಬ್ಬರೇ ದುಡಿದು ಜೀವನ ನಡೆಸುವಂತವರಿದ್ದಾರೆ. ಇವರ ಸ್ಥಿತಿಯಂತೂ ಶೋಚನೀಯವಾಗಿದೆ ಎಂದು ವಿಶ್ವ ಕರ್ನಾಟಕ ರಕ್ಷಣಾ ವೇದಿಕೆಯ ವಾಹನ ಚಾಲಕರರ ಜಿಲ್ಲಾಘಟಕದ ಜಿಲ್ಲಾಧ್ಯಕ್ಷ ಇಸ್ಮಾಯಿಲ್ ಜಬೀವುಲ್ಲಾ ಅವರು ವಿಷಾದ ವ್ಯಕ್ತಪಡಿಸುತ್ತಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಮತಿ ಉಮಾ ಪ್ರಶಾಂತ್‌ರವರಿಗೆ ಮನವಿ ಸಲ್ಲಿಸಿದರು.

ಕಳೆದ 10 ದಿನಗಳ ಹಿಂದೆ ಪಿ.ಬಿ. ರಸ್ತೆಯಲ್ಲಿರುವ ಸಬ್‌ರಿಜಿಸ್ಟ್ರಾರ್ ಕಚೇರಿಯ ಮುಂದೆ ಹರಿಹರದ ಕಡೆಯಿಂದ ಬಂದ ಕೆಎಸ್ಸಾರ್ಟಿಸಿ ಬಸ್ಸೊಂದು ಪಾದಚಾರಿಗೆ ಡಿಕ್ಕಿ ಹೊಡೆದು ಅವರ ಕೈಕಾಲು ಮೂಳೆಗಳ ಮುರಿತಕ್ಕೆ ಕಾರಣವಾಗಿದ್ದು ಹಾಗೂ ಈ ಕೆಳಗಿನ ನಂಬರ್‌ಗಳಲ್ಲಿ ಕಾಣಿಸುವ ಬಸ್‌ಗಳು ದಿ.19-07-2025 ಕೆಎ-17 ಎಫ್1623 ಪಿ.ಬಿ. ರಸ್ತೆ, ಶಂಕರ್ ಮಿಲ್ ಬಳಿ, 03-03-2025 ಕೆಎ 17 ಎಎ 6824 ಹದಡಿ ಬ್ರಿಡ್ಜ್,

ದಿ. 23-05-2025 ಖಾಸಗಿ ಬಸ್, ಸಂಗೊಳ್ಳಿ ರಾಯಣ್ಣ ವೃತ್ತ, 08-08-2025, ಕೆಎ 17 ಎಫ್ 2066, ಜಿಲ್ಲಾಧಿಕಾರಿಗಳ ಮನೆಯ ವೃತ್ತ, ದಿ. 02-07-2025 ಕೆಎಸ್‌ಆರ್‌ಟಿಸಿ ಬಸ್ ಸ್ಟಾಪ್, ದಿ. 16-8-2025 ಕೆಎಸ್ಸಾರ್ಟಿಸಿ ಬಸ್, ಸಬ್‌ರಿಜಿಸ್ಟ್ರಾರ್ ಕಚೇರಿ ಮುಂದೆ ಅಪಘಾತಗಳನ್ನು ಮಾಡಿವೆ.

ಈ ಕೂಡಲೇ ತಾವು ದಾವಣಗೆರೆ ನಗರವ್ಯಾಪ್ತಿಯಲ್ಲಿ ವೇಗದ ಮಿತಿಯಿಲ್ಲದೇ ಯಾವುದೇ ಲಂಗುಲಗಾಮಿಲ್ಲದೇ ಸಾರ್ವಜನಿಕರ ಜೀವದ ಜೊತೆಗೆ ಚೆಲ್ಲಾಟವಾಡುತ್ತಿರುವ ಕೆಎಸ್ಸಾರ್ಟಿಸಿ ಹಾಗೂ ಖಾಸಗಿ ಬಸ್‌ಗಳ ಆಟಾಟೋಪಕ್ಕೆ ಕಡಿವಾಣ ಹಾಕಬೇಕಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಮತಿ ಉಮಾ ಪ್ರಶಾಂತ್ ರವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಇಸ್ಮಾಯಿಲ್ ಜಬೀವುಲ್ಲಾ, ಸೈಯದ್ ಶಹಬಾಜ್, ನವೀನ್, ಕೆ. ಶಿವಕುಮಾರ್, ಮೈನುದ್ದೀನ್ ಸೇರಿದಂತೆ ಜೊತೆಯಲ್ಲಿದ್ದರು.

# ಜಲಮೂಲ ನಿರ್ವಹಣೆಗೆ ಉಪಗ್ರಹ, ಎಐ ತಂತ್ರಜ್ಞಾನ

**ಬೆಂಗಳೂರು:** ಜಲಮೂಲಗಳ ಸಮಗ್ರ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನ 'ಡಿಜಿಟಲ್ ಸ್ಟಾಕ್' ಯೋಜನೆಯನ್ನು ದೇಶದಲ್ಲಿ ಪ್ರಥಮ ಬಾರಿಗೆ ರಾಜ್ಯದಲ್ಲಿ ಜಾರಿಗೆ ತರಲಾಗುತ್ತಿದೆ ಎಂದು ಸಣ್ಣ ನೀರಾವರಿ ಸಚಿವ ಎನ್.ಎಸ್ ಬೋಸರಾಜು

ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಕುಸಿತಗೊಂಡಿದ್ದು, ವಿವಿಧ ಇಲಾಖೆಗಳಲ್ಲಿ ಹೋಗಿರುವ ಜಲಮೂಲಗಳನ್ನು ಒಂದೇ ವೇದಿಕೆಯಡಿ ನಿರ್ವಹಿಸಿ, ನೀರಿನ ನಿರ್ವಹಣೆ ಮಾಡುವುದು ಈ ಯೋಜನೆಯ ಮೂಲ ಉದ್ದೇಶ ಎಂದು ಹೇಳಿದರು.

ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ (ಕೆಟಿಸಿಡಿಎ) ಈ ಯೋಜನೆಯ ನಿರ್ವಹಣೆ ಮಾಡಲಿದೆ. ಕೆರೆಗಳು ಮತ್ತು ಇನ್ನಿತರ ಜಲಮೂಲಗಳ ಸರ್ವೆ ಸೇರಿದಂತೆ ಮೇಲ್ವಿಚಾರಣೆ ಹಾಗೂ ಸಮರ್ಪಕವಾಗಿ ನಿರ್ವಹಣೆ-ಯನ್ನು 'ಡಿಜಿಟಲ್ ವಾಟರ್ ಸ್ಟಾಕ್' (ಡಿಡಬ್ಲ್ಯುಎಸ್) ಖಚಿತಪಡಿಸಲಿದೆ ಎಂದರು.

ಉಪಗ್ರಹ ಸೆನ್ಸರ್, ಇಮೇಜಿಂಗ್ ಮತ್ತು ಎಐ ತಂತ್ರಜ್ಞಾನಗಳ ಮೂಲಕ ಕೆರೆಗಳು ಮತ್ತು ಭೂಗರ್ಭದ ಜಲಧಾರೆಗಳ ಸಮಗ್ರ ನಿರ್ವಹಣೆಯಲ್ಲಿ

ಇದು ಮಹತ್ವದ ಹೆಜ್ಜೆಯಾಗಿದೆ ಎಂದು ಸಚಿವರು ಹೇಳಿದರು.

**41 ತಾಲ್ಲೂಕುಗಳಲ್ಲಿ ಡಿಡಬ್ಲ್ಯುಎಸ್:** ಮೊದಲ ಹಂತದಲ್ಲಿ ಅಂತರ್ಜಲವನ್ನು ಅತಿಯಾಗಿ ಬಳಕೆ ಮಾಡುತ್ತಿರುವ41 ಯೋಜನೆಯನ್ನು ಜಾರಿಗೆ ತರಲಾಗುವುದು, ಜಲಮೂಲಗಳನ್ನು 'ನೈಸರ್ಗಿಕ ಉಳಿತಾಯ ಖಾತೆಯಂತೆ' ಪರಿವರ್ತಿಸಿ ಅವುಗಳ ಸಮರ್ಪಕ ನಿರ್ವಹಣೆಗೆ ಸರ್ಕಾರ ಬದ್ಧವಾಗಿದೆ.

### ಏನಿದು 'ಡಿಜಿಟಲ್ ವಾಟರ್ ಸ್ಟಾಕ್'?

ಉಪಗ್ರಹಗಳ ಸೆನ್ಸರ್‌ಗಳಿಂದ ಪಡೆದ ದತ್ತಾಂಶ, ಎಐ ಹಾಗೂ ಮಷಿನ್ ಲರ್ನಿಂಗ್‌ನಿಂದ ಇಮೇಜಿಂಗ್‌ನ ವಿಶ್ಲೇಷಣೆ ಮಾಡುವ ತಂತ್ರಜ್ಞಾನ 'ಡಿಜಿಟಲ್ ವಾಟರ್ ಸ್ಟಾಕ್ ' (ಡಿಡಬ್ಲ್ಯು ಎಸ್). ಇದರಿಂದ ಜಲಮೂಲಗಳ ಐದು ವರ್ಷಗಳು ಹಿಂದಿನ ದತ್ತಾಂಶವನ್ನು ಪಡೆದುಕೊಂಡು, ಪ್ರಸ್ತುತ ಸ್ಥಿತಿಗತಿಯನ್ನು ಹೋಲಿಕೆ ಮಾಡಬಹುದು
ಜಲಮೂಲದ ಸ್ವರೂಪ, ನೀರಿನ ಶೇಖರಣೆಯಲ್ಲಿ ಆಗುತ್ತಿರುವ ವ್ಯತ್ಯಾಸವನ್ನು ಗುರುತಿಸಬಹುದು. ಆ ಮೂಲಕ ಅದನ್ನು ಸರಿಪಡಿಸಲು ಕ್ರಮ ಕೈಗೊಳ್ಳಬಹುದಾಗಿದೆ.
ಡಿಡಬ್ಲ್ಯು ಎಸ್ ಮೂಲಕ ರಾಜ್ಯಮಟ್ಟದಲ್ಲಿ ಜಲಮೂಲಗಳ ನೀರಿನ ನಿರ್ವಹಣೆಯ ಡ್ಯಾಶ್‌ಬೋರ್ಡ್ ಮತ್ತು 'ಮಾಸ್ಟರ್ ವಾಟರ್ ಅಟ್ಲಾಸ್' ರಚನೆಯಾಗಲಿದೆ. ಅಂತರ್ಜಲದ ಮಟ್ಟ, ಮಳೆಯ ಪ್ರಮಾಣ, ಮೇಲೆ ಹರಿವು, ಬಳಕೆ ಮತ್ತು ನೀರಿನ ಗುಣಮಟ್ಟದ ದತ್ತಾಂಶ ಸಂಗ್ರಹಿಸಲಾಗುವುದು. ಈ ಯೋಜನೆಯ ಮೂಲಕ ನಗರೀಕರಣ ಹಾಗೂ ಕೃಷಿ ಒತ್ತಡದಿಂದ ಉಂಟಾಗುವ ನೀರಿನಮಟ್ಟ ಕುಸಿತ, ಮಾಲಿನ್ಯ ಮತ್ತು ಅತಿಕ್ರಮಣಗಳನ್ನು ಸರಿಯಾದ ಸಮಯದಲ್ಲಿ ಗುರುತಿಸಿ, ತಕ್ಷಣದ ಕ್ರಮ ಕೈಗೊಳ್ಳಬಹುದಾಗಿದೆ.

## ಅಂತರಿಕ ದೂರು ಸಮಿತಿ ರಚನೆಗೆ ಸೂಚನೆ

**ದಾವಣಗೆರೆ :** ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾಣಿಜ್ಯ ಸಂಸ್ಥೆಗಳು, ಉದ್ದಿಮೆಗಳು, ಕಾರ್ಖಾನೆಗಳು, ಸಂಸ್ಥೆಯ ಮಾಲೀಕರು ತಮ್ಮ ಸಂಸ್ಥೆಯಲ್ಲಿ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಕಾಯ್ದೆಯ ಸರ್ವೋಚ್ಚ ನ್ಯಾಯಾಲಯ ನೀಡಿರುವ ನಿರ್ದೇಶನಗಳಂತೆ 10 ಮತ್ತು 10 ಕ್ಕಿಂತ ಹೆಚ್ಚಿನ ಕಾರ್ಮಿಕರನ್ನು ಹೊಂದಿರುವ ಪ್ರತಿ ಸಂಸ್ಥೆಯ ಮಾಲೀಕರು ತಮ್ಮ ಸಂಸ್ಥೆಯಲ್ಲಿ ಆಂತರಿಕ ದೂರು ಸಮಿತಿ ಯನ್ನು ( ಖಅಅ ) ರಚಿಸಬೇಕು.

ಜಿಲ್ಲೆಯಲ್ಲಿ ಹಲವು ಸಂಸ್ಥೆಗಳು ಇದುವರೆಗೂ ಆಂತರಿಕ ದೂರು ಸಮಿತಿಯನ್ನು ರಚಿಸದೇ ಮತ್ತು ರಚಿಸಿರುವ ಬಗ್ಗೆ ಮಾಹಿತಿ ನೀಡದಿರುವುದು ಕಂಡುಬಂದಿದೆ.

ಸರ್ವೋಚ್ಚ ನ್ಯಾಯಾಲಯ ನೀಡಿರುವ ನಿರ್ದೇಶನದಂತೆ ಆಂತರಿಕ ಸಮಿತಿಯನ್ನು ರಚಿಸದ ಎಲ್ಲಾ ವಾಣಿಜ್ಯ ಸಂಸ್ಥೆಗಳು, ಉದ್ದಿಮೆಗಳು, ಕಾರ್ಖಾನೆಗಳು, ಈ ಕೂಡಲೇ ಆಂತರಿಕ ದೂರು ಸಮಿತಿಯನ್ನು ರಚನೆ ಮಾಡಿ, ಸಮಿತಿ ರಚಿಸಿದ ಆದೇಶದ ಪ್ರತಿಯನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ಕೂಡಲೇ ಸಲ್ಲಿಸಬೇಕು. ಜೊತೆಗೆ ಕಾರ್ಮಿಕ ಅಧಿಕಾರಿಗಳ ಕಛೇರಿ ದಾವಣಗೆರೆ ಉಪ ವಿಭಾಗ, ದಾವಣಗೆರೆ, ಬಿ.ಎಸ್.ಎನ್.ಎಲ್. ಆಫೀಸ್ 2ನೇ ಮಹಡಿ, ಶ್ರೀ ಡಿ. ದೇವರಾಜ ಅರಸು ಬಡಾವಣೆ, ಪಿ.ಬಿ.

ರೋಡ್ ದಾವಣಗೆರೆ-577006. ಕಚೇರಿಗೆ ಸಲ್ಲಿಸಬೇಕೆಂದು ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

## ಮಹಾತ್ಮಗಾಂಧೀ ಸೇವಾ ಪ್ರಶಸ್ತಿ ಕರ್ನಾಟಕ ಆಯ್ಕೆಗೆ ಅರ್ಜಿ ಆಹ್ವಾನ

**ಹಾಸನ :** ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷರೂಪಾಯಿ ನಗದನ್ನು ಒಳಗೊಂಡ ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕ ಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನುಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.

ಮಹಾತ್ಮಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ "ಅಸ್ಪೃಶ್ಯತೆ ನಿವಾರಣೆ". "ಅಹಿಂಸೆ", "ಮಹಿಳಾ ಸಬಲೀಕರಣ", "ಗ್ರಾಮೀಣ ನೈರ್ಮಲ್ಯ", "ಮದ್ಯಪಾನ ವಿರೋಧಿ ನೀತಿ", "ಖಾದಿ ಮತ್ತು ಸ್ವದೇಶಿವಸ್ತು ಬಳಕೆ", "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಏಳಿಗೆ", ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ.

ಅರ್ಜಿಗಳನ್ನು 2025 ನೇ ಸೆಪ್ಟೆಂಬರ್ 19 ರ ಒಳಗಾಗಿ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ. ನಂ. 17. ಭಗವಾನ್ ಮಹಾವೀರರಸ್ತೆ (ಇನ್‌ಫೆಂಟ್ರಿರಸ್ತೆ), ಬೆಂಗಳೂರು-560001 ಅಥವಾ ಇ-ಮೇಲ್‌ವಿಳಾಸ ುಟಿಜಿಂಡಿಟಚಿಣುಲಿಜುರಿಡಿಚಿಧಿಚಿಡಿಛ@ರಟಚಿಟ.ಛಿಂಟಹಾಗೂ ಖುದ್ದಾಗಿ ಇಲಾಖೆಗೆ ಕಳುಹಿಸಬಹುದಾಗಿದೆಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಇಲಾಖೆಯಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳತ್ತ ಚಿತ್ತ ಹರಿಸಬೇಕು



**ದಾವಣಗೆರೆ:** ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳತ್ತ ಹೆಚ್ಚಿನ ಗಮನ ನೀಡಬೇಕು. ಉನ್ನತ ಹುದ್ದೆ ಅಲಂಕರಿಸಲು ಸತತ ಪರಿಶ್ರಮ, ಕಠಿಣ ಅಭ್ಯಾಸ, ಕಷ್ಟಪಟ್ಟು ಓದಿದರೆ ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಗಂಭೀರವಾದ ಆಲೋಚನೆ ಮಾಡುವ ಅಗತ್ಯತೆ ಇದೆ ಎಂದು ಮಿಲ್ಲತ್ ವಿದ್ಯಾ ಸಂಸ್ಥೆಯ ಗೌರವ ಕಾರ್ಯದರ್ಶಿ ಅಲಹಾಜ್ ಸೈಯದ್ ಸೈಫುಲ್ಲಾ ಅವರು ಸಲಹೆ ನೀಡಿದರು.

ನಗರದ ಮಿಲ್ಲತ್ ವಿದ್ಯಾ ಮತ್ತು ಕಲ್ಯಾಣ ಸಂಸ್ಥೆಯ ಡಾ. ಜಾಕೀರ್ ಹುಸೇನ್ ಪ್ರಥಮ ದರ್ಜೆ ಕಾಲೇಜಿನಲ್ಲಿ ಏರ್ಪಡಿಸಿದ್ದ ಪ್ರಥಮ ಪದವಿ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಐಎಎಸ್, ಐಪಿಎಸ್, ಕೆಎಎಸ್ ನಂಥ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸಿ. ಹಗಲಿರುಳು ಓದಿ. ಉನ್ನತ ಹುದ್ದೆಗೆ ಏರುತ್ತೇನೆಂಬ ಹಠ ಇದ್ದರೆ ಸಾಧನೆ ಕಷ್ಟವಾಗದು. ಪೋಷಕರು ಮಕ್ಕಳಿಗೆ ಇಂಥ ಪರೀಕ್ಷೆಗಳಿಗೆ ತಯಾರು ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸಿ ಎಂದು ಸಲಹೆ ನೀಡಿದರು.

ಕೇವಲ ಪದವಿ ಪಡೆಯಲಷ್ಟೇ ಓದಿದರೆ ಸಾಲದು. ಯಾವುದೇ ವಿಷಯವಾದರೂ ಸಮಗ್ರ ಅಧ್ಯಯನ ಮತ್ತು ಸಂಶೋಧನೆ ಮಾಡಿ. ಏನೂ ಆಗುವುದಿಲ್ಲವೆಂದು ಸುಮ್ಮನೆ ಕೂರಬೇಡಿ. ಭವಿಷ್ಯದಲ್ಲಿ ಸಾಧನೆ ಮಾಡಿಯೇ ತೀರುತ್ತೇವೆಂಬ ಸಂಕಲ್ಪ ಮಾಡಿ. ಇಂದಿನಿಂದಲೇ ಸಿದ್ಧತೆ ಆರಂಭಿಸಿ. ಮುಂದಿನ ದಿನಗಳಲ್ಲಿ ಕಷ್ಟವಾಗದು ಎಂದು ಅವರು ತಿಳಿಸಿದರು.

ಪಿಯುಸಿ ಉತ್ತೀರ್ಣರಾಗಿ ಪದವಿ ತರಗತಿಗಳಿಗೆ ಬಂದಿದ್ದೀರಾ. ಉಜ್ವಲ ಭವಿಷ್ಯ ನಿಮ್ಮದು. ವಿದ್ಯಾರ್ಥಿ ಜೀವನ ಬಂಗಾರದಂಥದ್ದು. ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬೇಡಿ. ಪೋಷಕರು ಕಂಡಿರುವ ಕನಸು ನನಸು ಮಾಡಲು ಮುಂದಾಗಿ. ಯಾವುದೇ ಕಾರಣಕ್ಕೂ ಅರ್ಧದಲ್ಲಿಯೇ ವಿದ್ಯಾಭ್ಯಾಸ ಬಿಡಬೇಡಿ. ಕಷ್ಟಪಟ್ಟು ಓದಿದರೆ ಉನ್ನತ ಹುದ್ದೆಗಳು ಭವಿಷ್ಯದಲ್ಲಿ ನಿಮ್ಮನ್ನು ಅರಸಿ ಬಂದೇ ಬರುತ್ತವೆ ಎಂದು ಸೈಯದ್ ಸೈಫುಲ್ಲಾ ಅವರು ಸಲಹೆ ನೀಡಿದರು.

ವೇದಿಕೆಯಲ್ಲಿ ಜಂಟಿ ಕಾರ್ಯದರ್ಶಿ ಸೈಯದ್ ಖಾಲಿದ್ ಅಹಮದ್, ಆಡಳಿತಾಧಿಕಾರಿ ಸೈಯದ್ ಅಲಿ, ಶೈಕ್ಷಣಿಕ ಆಡಳಿತಾಧಿಕಾರಿ ಸಿದ್ದಪ್ಪ, ಮಿಲ್ಲತ್ ಐಐಟಿ ಕಾಲೇಜಿನ ಪ್ರಾಂಶುಪಾಲರಾದ ಸೈಯದ್ ಜೂಪಿಶಾನ್, ವ್ಯವಸ್ಥಾಪಕ ಜೀಶಾನ್ ಏಲೈಟ್, ಪ್ರಾಂಶುಪಾಲರಾದ ಡಾ. ಖುಷ್ತರೀ ಬೇಗಂ, ಉಪನ್ಯಾಸಕರಾದ ಡಾ. ಅರ್ಫಿಯಾ ಫಿರ್ದೂಸ್, ಡಾ. ಅಬ್ದುಲ್ ಖಾದರ್ ಜಿಲಾನಿ, ಡಿ. ಫರ್ಹಾನ, ಕಾಶೀಫುಲ್ಲಾ ಆರ್. ಷರೀಫ್ ಮತ್ತಿತರರು ಹಾಜರಿದ್ದರು. ತೃತೀಯ ವರ್ಷದ ಸೈಯದ್ ಮಹಬೂಬ್ ಖಿರಾತ್ ಹಾಗೂ ಸುರೈಯ ಬಾನು ಅವರು ಪ್ರಾರ್ಥಿಸಿದರು. ಹೀನಾ ಕೌಸರ್ ಸ್ವಾಗತಿಸಿದರು. ಸೈಯಿದ ಫಾತಿಮ ನಿರೂಪಿಸಿದರು. ಅಂತಿಮ ವರ್ಷದ ಪದವಿ ವಿದ್ಯಾರ್ಥಿನಿ ಅಂಜುಂ, ಆಫ್ರೀನ್ ಅವರು ವಂದಿಸಿದರು.

# ಎರಡು ತಿಂಗಳಿಗೊಮ್ಮೆ ನೀರು ಮತ್ತು ನೈರ್ಮಲ್ಯ ಸಭೆ ನಡೆಸಿ

## ಜಿಲ್ಲಾ ಪಂಚಾಯ್ತಿ ಉಪಕಾರ್ಯದರ್ಶಿ ಡಾ.ರಂಗಸ್ವಾಮಿ ಸೂಚನೆ

**ಚಿತ್ರದುರ್ಗ:** ಎಲ್ಲಾ ಗ್ರಾಮಗಳಲ್ಲಿ ಪ್ರತಿ ಎರಡು ತಿಂಗಳಿಗೊಮ್ಮೆ ಕಡ್ಡಾಯವಾಗಿ ನೀರು ಮತ್ತು ನೈರ್ಮಲ್ಯ ಸಮಿತಿಗಳನ್ನು ಸಭೆಗಳನ್ನು ನಡೆಸಬೇಕು ಎಂದು ಜಿ.ಪಂ.ಉಪಕಾರ್ಯದರ್ಶಿ ಡಾ.ರಂಗಸ್ವಾಮಿ ಸೂಚಿಸಿದರು.

ನಗರದ ಜಿ.ಪಂ. ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಪಂಚಾಯತಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಹಾಗೂ ಅನುಷ್ಠಾನ ಬೆಂಬಲ ಸಂಸ್ಥೆ (ಗ್ರಾಮ್ಸ್) ಸಹಯೋಗದಲ್ಲಿ, ಜಲಜೀವನ್ ಮಿಷನ್, ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಹಾಗೂ ಕರ್ನಾಟಕ ಸುಸ್ಥಿರ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ (ಕೆ.ಎಸ್.ಆರ್.ಡಬ್ಲ್ಯೂ.ಎಸ್.ಪಿ) ಕುರಿತು ಆಯೋಜಿಸಿದ ಕಾರ್ಯಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.





ನೀರು ಮತ್ತು ನೈರ್ಮಲ್ಯ ಸಭೆಯಲ್ಲಿ ಗ್ರಾಮ ಪಂಚಾಯಿತಿಗಳು ನೀರಿನ ಕಾರ್ಯಚರಣೆ ಹಾಗೂ ನಿರ್ವಹಣೆ ನೀತಿಯನ್ನು ಸೂಕ್ತವಾಗಿ ಅಳವಡಿಸಿಕೊಳ್ಳಬೇಕು. ಸಭೆಯಲ್ಲಿ 2025-26ನೇ ಸಾಲಿನ ನೀರಿನ ಬಜಟ್ ತಯಾರಿಸುವುದರೊಂದಿಗೆ ಈಗಾಗಲೇ ಘೋಷಣೆ ಮಾಡಿರುವ 24x7 ನೀರು ಸರಬರಾಜು ಗ್ರಾಮಗಳಲ್ಲಿ ಸಮರ್ಪಕವಾಗಿ ಕುಡಿಯುವ ನೀರಿನ ಸರಬರಾಜು ಆಗುವಂತೆ ಕ್ರಮ ವಹಿಸಬೇಕು. ಸಭೆಯ ನಡಾವಳಿಯನ್ನು ತಪ್ಪದೇ ಜಿಲ್ಲಾ ಪಂಚಾಯತ್ ಕಾರ್ಯಾಲಯಕ್ಕೆ ಸಲ್ಲಿಸುವುದು ಎಂದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ದಯಾನಂದಸ್ವಾಮಿ, ಲಿಂಗರಾಜು, ಜಲ ಜೀವನ್ ಮಿಷನ್ ಜಿಲ್ಲಾ ಯೋಜನಾ ವ್ಯವಸ್ಥಾಪಕ ಮಂಜುನಾಥ.ಎಸ್.ನಾಡರ್, ಜಿಲ್ಲಾ ಐ.ಇ.ಸಿ.ಸಮಾಲೋಚಕರಾದ ಬಿ.ಸಿ.ನಾಗರಾಜು ಕೆ.ಎಸ್.ಆರ್.ಡಬ್ಲ್ಯೂ.ಎಸ್.ಪಿ ಸಮಾಲೋಚಕ ಕಿರಣ್ ಕುಮಾರ್, ಚಂದ್ರಕಾಂತ್, ಪ್ರವೀಣ್, ಯಲಪ್ಪ, ಗೀತಾ ಲಕ್ಷ್ಮಿ, ಅನುಷ್ಠಾನ ಬೆಂಬಲ ಸಂಸ್ಥೆ (ಗ್ರಾಮ್ಸ್) ತಂಡದ ನಾಯಕರಾದ ನಾಗರಾಜ್, ಪ್ರತಾಪ್ ಸೇರಿದಂತೆ ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕುಗಳ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗಣಕಯಂತ್ರ ನಿರ್ವಾಹಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಂಜಿನಿಯರ್ಸ್ ಉಪಸ್ಥಿತರಿದ್ದರು.

## ಸೆ.7 ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ

**ಚಿಕ್ಕಮಗಳೂರು, ಸೆ.2:** ಜಿಲ್ಲಾಡಳಿತದ ವತಿಯಿಂದ ಸೆಪ್ಟೆಂಬರ್ 7 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಆಚರಣೆ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸಲಿದ್ದಾರೆ.

ಚಿಕ್ಕಮಗಳೂರು ಕ್ಷೇತ್ರದ ಶಾಸಕರಾದ ಹೆಚ್.ಡಿ.ತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷರಾದ ಬಿ.ಶೀಲಾ ದಿನೇಶ್ ಪಾಲ್ಗೊಳ್ಳಲಿದ್ದಾರೆ.

ಸಾಹಿತಿ ಬಿ.ತಿಪ್ಪೇರುದ್ರಪ್ಪ ಅವರು ಉಪನ್ಯಾಸ ನೀಡಲಿದ್ದಾರೆ.

## ಮಹಾತ್ಮಾ ಗಾಂಧಿ ಸೇವಾ ಪ್ರಶಸ್ತಿ ಕರ್ನಾಟಕ ಆಯ್ಕೆಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು ಸೆ.2:** ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಾ ಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು.

ಮಹಾತ್ಮಾ ಗಾಂಧೀಜಿಯವರು ಪ್ರಚುರಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿ ವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಏಳಿಗೆ - ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ಶಿಫಾರಸ್ಸನ್ನು ಕೂಡ ಮಾಡಬಹುದಾಗಿದೆ.

ಅರ್ಜಿಗಳನ್ನು ಸೆಪ್ಟೆಂಬರ್ 19ರ ಒಳಗಾಗಿ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ. ನಂ. 17. ಭಗವಾನ್ ಮಹಾವೀರ ರಸ್ತೆ (ಇನ್‌ಫೆಂಟ್ರಿ ರಸ್ತೆ), ಬೆಂಗಳೂರು - 560 001 ಅಥವಾ ಇ - ಮೇಲ್ ವಿಳಾಸ informationdiprawards@gmail.com<mailto:informationdiprawards@gmail.com> ಹಾಗೂ ಖುದ್ದಾಗಿ ಇಲಾಖೆಗೆ ಕಳುಹಿಸಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.16 ರಂದು ಬಹಿರಂಗ ಹರಾಜು

**ಚಿತ್ರದುರ್ಗ :** ಚಳ್ಳಕೆರೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಉಗ್ರಾಣದಲ್ಲಿರುವ ಅನುಪಯುಕ್ತ ವಸ್ತುಗಳ ಬಹಿರಂಗ ಹರಾಜು ಸೆ.16 ರಂದು ನಡೆಯಲಿದೆ. ಹರಾಜು ಪ್ರಕ್ರಿಯೆ ಕುರಿತು ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರ ಮೊಬೈಲ್ ಸಂಖ್ಯೆ 9900398732 ಕರೆ ಮಾಡಬಹುದು.

# ಹರ್ಡೀಕರ್ ದೇಶಕ್ಕಾಗಿ ಜೀವನವನ್ನೇ ಮುಡಿಪಿಟ್ಟವರು : ರುದ್ರಪ್ಪ

**ಚಿಕ್ಕಮಗಳೂರು:** ನಾ.ಸು.ಹರ್ಡೀಕರ್ ದೇಶಸೇವೆಗೆ ತಮ್ಮ ಜೀವನವನ್ನೇ ಮುಡಿಪಾಗಿಡುವ ಜೊತೆಗೆ ಸ್ವಾತಂತ್ರ್ಯ ಹೋರಾಟದಲ್ಲಿ ಯುವಕ-ಯುವತಿಯರನ್ನು ಪ್ರೇರೇಪಿಸಿದವರು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ರುದ್ರಪ್ಪ ಹೇಳಿದರು.

ನಗರದ ಜಿಲ್ಲಾ ಸೇವಾದಳ ಕಚೇರಿಯಲ್ಲಿ ಭಾರತ ಸೇವಾದಳದ ಸಂಸ್ಥಾಪಕ ಡಾ. ನಾ.ಸು.ಹರ್ಡೀಕರ್ ಅವರ 50ನೇ ವರ್ಷದ ಪುಣ್ಯಸ್ಮರಣೆ ಕಾರ್ಯಕ್ರಮದ ಅಂಗವಾಗಿ ಭಾವಚಿತ್ರಕ್ಕೆ ಇತ್ತೀಚೆಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಬಾಲ್ಯದಿಂದಲೂ ದೇಶಪ್ರೇಮ, ತ್ಯಾಗಗಳಂತಹ ಗುಣಗಳನ್ನು ಮೈಗೂಡಿಸಿಕೊಂಡಿದ್ದ ನಾ.ಸು. ಹರ್ಡೀಕರ್ ಅವರು ಭಾರತದ ಸೇವಾದಳವನ್ನು ಕಟ್ಟಿ ಯುವಶಕ್ತಿಯನ್ನು ಜಾಗೃತಿಗೊಳಿಸಿ ದೇಶಕ್ಕಾಗಿ ಹೋರಾಡು ವಂತಹ ಸದ್ಗುಣಗಳನ್ನು ಬೆಳೆಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.



ಹರ್ಡೀಕರ್ ಅವರ ತತ್ವ, ಆದರ್ಶ ಗುಣಗಳನ್ನು ಪ್ರತಿಯೊಬ್ಬರೂ ಪಾಲಿಸಿದಲ್ಲಿ ಭಾರತವು ಜಗತ್ತಿನಲ್ಲಿ ಮತ್ತಷ್ಟು ಎತ್ತರಕ್ಕೆ ನಿಲ್ಲಲು ಸಾಧ್ಯವಾಗುತ್ತದೆ. ನಾವೆಲ್ಲರೂ ಅವರ ಧ್ಯೇಯೋದ್ದೇಶ ಹಾಗೂ ಮಾರ್ಗದರ್ಶನದಲ್ಲಿ ಮುನ್ನಡೆದಾಗ ಜನ್ಮದಿನಾರಣೆಗೆ ನಿಜವಾದ ಅರ್ಥ ಬರಲಿದೆ ಎಂದರು.

ಭಾರತ ಸೇವಾದಳದ ಕೇಂದ್ರ ಸಮಿತಿ ಸದಸ್ಯ ಐ.ಬಿ.ಶಂಕರ್ ಮಾತನಾಡಿ, ಹರ್ಡೀಕರ್ ರವರ ಸೇವಾದಳವು ದೇಶಕ್ಕೆ ಸ್ವಾತಂತ್ರ್ಯ ತಂದುಕೊಡುವಲ್ಲಿ ಪ್ರಮುಖ ಪಾತ್ರವಹಿಸಿದೆ. ಅವರ ಶಿಸ್ತು, ಸೇವಾ ಮನೋಭಾವ ಹಾಗೂ ತ್ಯಾಗ ಇಂದಿನ ಯುವ ಪೀಳಿಗೆಗೆ ಮಾದರಿಯಾಗಿವೆ. ಇವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯದರ್ಶಿ ಹಂಪಯ್ಯ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಪಾಲಾಕ್ಷಮೂರ್ತಿ, ತಾಲೂಕು ದೈಹಿಕ ಪರಿವೀಕ್ಷಕ ಮಹೇಶ್, ತಾಲೂಕು ಅಧ್ಯಕ್ಷ ಜಿ.ಶಂಕರ್, ಕಾರ್ಯದರ್ಶಿ ಮಹೇಶಪ್ಪ, ಶಿಕ್ಷಣ ಇಲಾಖೆಯ ಇಸಿಓಗಳು ಲೋಕೇಶ್ವರಾಚಾರ್ ಹಾಗೂ ಕುಮಾರಸ್ವಾಮಿ, ಸಂಘಟಕರಾದ ಚಂದ್ರಕಾಂತ್ ಮತ್ತಿತರರು ಉಪಸ್ಥಿತರಿದ್ದರು.

# ವಿಕಲಚೇತನ ಮಕ್ಕಳಲ್ಲಿ ಆತ್ಮಸ್ಥೈರ್ಯ ತುಂಬಬೇಕು : ಬಿ.ಜಿ.ಬಸಪ್ಪ



**ಬೀರೂರು:** ವಿಕಲಚೇತನ ಶಾಪವಲ್ಲದೇ ಬದಲಿಗೆ ಅಂಥಹ ಮಕ್ಕಳಲ್ಲಿ ಆತ್ಮಸ್ಥೈರ್ಯ ತುಂಬುವಂತಹ ಕಾರ್ಯಪಾಲಕರಿಂದ ಸಾಧ್ಯವಾಗಬೇಕು ಎಂದು ಬೀರೂರು ಶೈಕ್ಷಣಿಕ ವಲಯದ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಜಿ.ಬಸಪ್ಪ ಹೇಳಿದರು.

ಅವರು ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕರ್ಚೇರಿಯಲ್ಲಿ ವೈದ್ಯಕೀಯ ಮೌಲ್ಯಾಂಕನ ಶಿಬಿರದ ಅಂಗವಾಗಿ ಶಿಕ್ಷಣ ಇಲಾಖೆ ಮತ್ತು ಬೆಂಗಳೂರಿನ ಅಲಿಂಕೋ ಸಂಸ್ಥೆ ವಿಕಲಚೇತನ ಮಕ್ಕಳಿಗೆ ಉಚಿತ ಸಾಧನ ಸಲಕರಣೆಗಳನ್ನು ವಿತರಿಸಿ ಮಾತನಾಡಿದರು.

ಅಂಗವಿಕಲತೆಯನ್ನು ಪೋಷಕರು ಶಾಪವೆಂದು ತಪ್ಪುಗ್ರಹಿಸದೆ ಮಕ್ಕಳನ್ನು ಪ್ರೀತಿಯಿಂದ ಕಾಣುವಂತಾಗಬೇಕು. ಮಾತನಾಡಲು ಬಾರದ ಮಗುವಿಗೂ ಸಹ ಪ್ರೀತಿಯ ಭಾವನೆಗಳಿದ್ದು ನಾವು ಅದನ್ನು ಗ್ರಹಿಸಿ ಪರಿಹರಿಸುವಂತಹ ಶಕ್ತಿಯನ್ನು ಪಡೆಯಬೇಕು ಎಂದರು.

ವಿಕಲಚೇತನ ಮಕ್ಕಳಲ್ಲಿ ಚೇತನಾಶಕ್ತಿ ಸದಾ ಜಾಗೃತಿಯಾಗಿದ್ದು, ಆ ಚೇತನಾಶಕ್ತಿಯನ್ನು ಪಾಲಕರು ಮಗುವಿನ ಚಲನವಲನ ಶಕ್ತಿಗಳಿಗೆ ಸ್ವಲ್ಪ ಆಸಕ್ತಿಯನ್ನು ವಹಿಸಿ ಬೆಳೆಸಿದಲ್ಲಿ ಮುಂದಿನ ದಿನಗಳಲ್ಲಿನ ದುಷ್ಪರಿಣಾಮಗಳನ್ನು ತಡೆಗಟ್ಟುವಲ್ಲಿ ಸಹಕಾರಿಯಾಗಲಿದೆ ಎಂದರು.

ಕ್ಷೇತ್ರ ಸಮನ್ವಯಾಧಿಕಾರಿ ಶೇಖರಪ್ಪ ಮಾತನಾಡಿ, ವಿಕಲಚೇತನ ಮಕ್ಕಳಲ್ಲಿ ಚೇತನಾ ಶಕ್ತಿ ಇದೆ. ಅದನ್ನ ಪಾಲಕರು ಗ್ರಹಿಸುವ ಮೂಲಕ ಆತ್ಮಸ್ಥೈರ್ಯ ತುಂಬಬೇಕು ಮತ್ತು ಉತ್ತಮ್ಮ ದೈಹಿಕ ಚಿಕಿತ್ಸೆ ಕೊಡಿಸುವ ಮೂಲಕ ಬೆಳೆಸುತ್ತಾ ಬೆಳೆಸುತ್ತಾ ಹೋದರೆ ಸ್ವಲ್ಪವಾದರೂ ಮಕ್ಕಳು ಗುಣಮುಖರಾಗುತ್ತಾರೆ. ಇಂತಹ ಕಾರ್ಯಕ್ಕೆ ಸರ್ಕಾರ ವಿಶೇಷ ಕಾಳಜಿ ವಹಿಸಿ, ಸರ್ಕಾರಿ ಶಾಲೆಗಳಲ್ಲಿ ಜಾರಿಗೆ ತಂದಿದೆ ಇದರಿಂದ ವಿಕಲಚೇತನ ಮಕ್ಕಳಿಗೆ ಸ್ವಲ್ಪಮಟ್ಟಿಗಾದರೂ ಅನುಕೂಲವಾಗುತ್ತದೆ ಎಂದರು.

ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎನ್.ಗಿರೀಶ್ ಮಾತನಾಡಿ, ಅಂಗವಿಕಲತೆ ಕೇವಲ ಹಾರ್ಮೋನ್‌ಗಳ ಕೊರತೆಯಿಂದಾಗಿ ಉಂಟಾಗಬಹುದಾದ ರೋಗವೇ ಹೊರತು, ಯಾವುದೇ ರೀತಿಯ ಶಾಪದ ಅಪರಾಧವಲ್ಲ. ಸರ್ಕಾರವು ಶಿಕ್ಷಣ ಇಲಾಖೆಯಲ್ಲಿನ ವಿಕಲಚೇತನ ಮಕ್ಕಳಿಗೆ ಅನುಕೂಲವಾಗಲೆಂಬಂತೆ ಈ ರೀತಿ ಉತ್ತಮ ಯೋಜನೆಗಳನ್ನು ಹಮ್ಮಿಕೊಂಡಿದೆ, ಪೋಷಕರು ಮಕ್ಕಳಿಗೆ ನೀಡಿರುವ ಸಾಧನ ಸಲಕರಣೆಗಳನ್ನು ಕಡ್ಡಾಯವಾಗಿ ಬಳಸಲು ಸೂಚಿಸಬೇಕು ಎಂದರು.

ಬೀರೂರು, ಕಡೂರು, ತರೀಕೆರೆ ಸೇರಿದಂತೆ ಒಟ್ಟು 27 ಮಕ್ಕಳಿಗೆ ನಡೆದಾಡಲು ಅನುಕೂಲವಾಗುವಂತೆ ವಿಶೇಷ ಶೂ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಶಿಕ್ಷಕರ ಸಂಘದ ಕಾರ್ಯದರ್ಶಿ ಆರ್.ಟಿ.ಅಶೋಕ್, ಪುರಸಭೆ ಆಶ್ರಯ ಕಮಿಟಿ ಸದಸ್ಯ ಬಿ.ಟಿ.ಚಂದ್ರಶೇಖರ್, ಕ್ಷೇತ್ರ ವಿಶೇಷ ಸಂಪನ್ಮೂಲ ಶಿಕ್ಷಕಿ ದೇವಕಿ ಸೇರಿದಂತೆ ಮತ್ತಿತರರು ಇದ್ದರು.

# ಹೊನ್ನಾಳಿಯಲ್ಲಿ ಅಧ್ಯಯನ ಕೌಶಲ್ಯ ತರಬೇತಿ



**ಹೊನ್ನಾಳಿ:** ವಿದ್ಯಾರ್ಥಿಗಳು ಅಂದುಕೊಳ್ಳುವುದು ಕನಸು ಆದರೆ ಗುರಿಯನ್ನು ಪೂರ್ಣಗೊಳಿಸುವ ಪ್ರಯತ್ನದ ಮೂಲಕ ಯಶಸ್ವಿಗೊಳಿಸುವಲ್ಲಿ ಇರುವ ಮಾರ್ಗೋಪಾಯಗಳನ್ನು ಕಂಡುಕೊಳ್ಳುವುದು ಹೆಚ್ಚು ಸಹಕಾರಿಯಾಗಿದೆ ಎಂದು ಕಲಿಕಾ ಪ್ರೇರಣ ಗುರು ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಮೈಸೂರಿನ ಆರ್.ಎ. ಚೇತನ್ ರಾಮ್ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಇಲ್ಲಿನ ಸಾಂಸ್ಕೃತಿಕ, ಶೈಕ್ಷಣಿಕ ಹಾಗೂ ಚಾರಿಟೇಬಲ್ ಟ್ರಸ್ಟ್ ಹಮ್ಮಿಕೊಂಡಿದ್ದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಮಕ್ಕಳಿಗೆ ಉಚಿತ ಅಧ್ಯಯನ ಕೌಶಲ್ಯ ತರಬೇತಿ ಶಿಬಿರದಲ್ಲಿ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಓದಿಗೆ ಇರುವ 20 ಸಮಸ್ಯೆಗಳ ಬಗ್ಗೆ ವಿವರಿಸಿ ಪರಿಹಾರ ಕಂಡುಕೊಳ್ಳುವ ಬಗ್ಗೆ ಸಲಹೆ ನೀಡಿದ ಅವರು ಶೇ. 95ರಷ್ಟು ವಿದ್ಯಾರ್ಥಿಗಳು ಪರೀಕ್ಷೆ ಬರೆಯುವ ಸಮಯ ಒಮ್ಮೆ ಕೂತು ಬರೆಯುವ ಕಾರ್ಯಕ್ಕೆ ಮುಂದಾಗದಿರುವುದು ಅಪಾಯದ ಸಂಗತಿಯಾದರೆ, 15 ವರ್ಷಗಳಿಂದ ಶಿಕ್ಷಕರಿಗೆ ಸೂಕ್ತ ತರಬೇತಿ ನಡೆಯದಿರುವುದು ಮತ್ತೊಂದು ದುರಂತವೇ ಸರಿ ಎಂದರು.

ಚೆನ್ನಮಲ್ಲಿಕಾರ್ಜುನ ಸ್ವಾಮೀಜಿ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು. ಶಿಕ್ಷಣಾಧಿಕಾರಿ ನಿಂಗಪ್ಪ ಮಾತನಾಡಿದರು. ಬಿಆರ್‌ಸಿ ತಿಪ್ಪೇಶಪ್ಪ, ಹಿರೇಕಲ್ಮಠ ವ್ಯವಸ್ಥಾಪಕ ಚನ್ನಬಸಯ್ಯ, ಧರ್ಮ ಕಾರ್ಯಕರ್ತ ಅನ್ನದಾನಯ್ಯ, ಪ್ರಾಂಶುಪಾಲ ಉಮಾ ಕಾಂತ್, ಟ್ರಸ್ಟ್ ಅಧ್ಯಕ್ಷ ಸಂಗಮೇಶ್ ಕಾರ್ಯದರ್ಶಿ ಸೂರ್ಯ, ಖಜಾಂಚಿ ಗಾನಶ್ರೀ, ನಿರ್ದೇಶಕರಾದ ಯತಿನ್, ಚಂದನ್, ಕ್ಷಿತಿ, ರುತಿಫ್, ಎಸ್ಸೆ ನಾಗರತ್ನ, ವಿಜಯಾನಂದ್ ಇನ್ನಿತರರಿದ್ದರು.

# ಲೈಂಗಿಕ ದೌರ್ಜನ್ಯಗಳಿಂದ ಮಹಿಳೆಯರು ಹಾಗೂ ಬಾಲಕಿಯರು ಅನುಭವಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಹುಡುಕುವುದು 'ಭದ್ರಬಾಲ್ಯದ' ಪ್ರಧಾನ ಆಶಯ : ಪ್ರವೀಣ್

**ಕಡೂರು :** ಬಾಲ್ಯ ವಿವಾಹ, ಶಿಕ್ಷಣದ ಕೊರತೆ ಮತ್ತು ಲೈಂಗಿಕ ದೌರ್ಜನ್ಯಗಳಿಂದ ಮಹಿಳೆಯರು ಹಾಗೂ ಬಾಲಕಿಯರು ಅನುಭವಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಹುಡುಕುವುದು 'ಭದ್ರಬಾಲ್ಯದ' ಪ್ರಧಾನ ಆಶಯಗಳಾಗಿದೆ ಎಂದು ತಾಪಂ ಇಒ ಸಿ.ಆರ್. ಪ್ರವೀಣ್ ತಿಳಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಬಿಸಿಎಂ ಇಲಾಖೆ ಕಡೂರು, ತಾಲೂಕು ಆಡಳಿತ, ಜಿಲ್ಲಾ ಪಂಚಾಯತ್, ಕೆ.ಹೆಚ್.ಪಿ.ಟಿ ಬೆಂಗಳೂರು ಇಲಾಖೆಗಳ ಸಹಯೋಗದೊಂದಿಗೆ ಆಶಾ ಕಾರ್ಯಕರ್ತೆಯರು, ಅಂಗನವಾಡಿ, ಮುಖ್ಯ ಶಿಕ್ಷಕ ಹಾಗೂ ಪಿಡಿಓಗಳಿಗೆ 2 ದಿನಗಳ 'ಭದ್ರಬಾಲ್ಯ' ಪ್ರಧಾನ ಆಶಯಗಳ ಗ್ರಾಮ ಪಂಚಾಯಿತಿ ಮಟ್ಟದ ಸದಸ್ಯರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರಾಜ್ಯದಲ್ಲಿ ಕಳೆದ 10 ತಿಂಗಳ ಅವಧಿಯಲ್ಲಿ 24,436 ಬಾಲ ಗರ್ಭಿಣಿಯರ ಸಂಖ್ಯೆ ದಾಖಲಾಗಿದ್ದು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತ್ ಕಾರ್ಯಾನಿವಾಹಕ ಅಧಿಕಾರಿ ಹೆಚ್.ಎಸ್.ಕೀರ್ತನ ಅವರು 'ಭದ್ರಬಾಲ್ಯ' ಎಂಬ ಹೆಸರಿನಡಿಯಲ್ಲಿ ಕಾರ್ಯಕ್ರಮವನ್ನು ನಿಯೋಜಿಸಿ ಅತಿ ಹೆಚ್ಚು ಬಾಲ ಗರ್ಭಿಣಿಯರು ಕಂಡು ಬಂದಿರುವ ಜಿಲ್ಲೆಗಳನ್ನು ಆಯ್ಕೆ ಮಾಡಿಕೊಂಡು ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಗಳ ಮೂಲಕ ಅರಿವು ಮೂಡಿಸಿ ಬಾಲ್ಯದಲ್ಲೇ ಗರ್ಭಿಣಿ ಆಗುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಕಾವಲು ಸಮಿತಿ ಕಾರ್ಯನಿರ್ವಹಿಸುವ ದೃಷ್ಟಿಯಿಂದ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.




ಪ್ರತಿಯೊಂದು ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುವ ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಪಿಡಿಒ ಮತ್ತು ಶಾಲೆಯ ಮುಖ್ಯಶಿಕ್ಷಕರಿಗೆ ತರಬೇತಿ ನೀಡಲಾಗುತ್ತಿದ್ದು ಇವರುಗಳು ಕಾವಲು ಸಮಿತಿಯ ಸದಸ್ಯರಾಗಿದ್ದು ಸಂಬಂಧಸಿದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕಾವಲು ಸಮಿಯಿತನ್ನು ಸಕ್ರಿಯಗೊಳಿಸಿಕೊಂಡು ಪ್ರತಿ ಮಗುವು ಸುರಕ್ಷಿತ, ಗೌರವಪೂರ್ವಕ ಮತ್ತು ಸಬಲೀಕೃತ ಬಾಲ್ಯವನ್ನು ಅನುಭವಿಸುವಂತೆ ಮಾಡುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು, ಮಕ್ಕಳನ್ನು ಬಾಲ್ಯ ವಿವಾಹ, ಲೈಂಗಿಕ ಶೋಷಣೆ, ಅಪ್ರಾಪ್ತ ವಯಸ್ಸಿನಲ್ಲಿ ಗರ್ಭಧಾರಣೆ, ಬಾಲಕಾರ್ಮಿಕ ಪದ್ಧತಿ, ಮನೆ, ಪರಿಸರದಲ್ಲಿ ಆಗುವ ಕಿರುಕುಳ, ನಿಂದನೆ ಒತ್ತಡಗಳು, ಸಾಮಾಜಿಕ ದುರಂತಗಳಿಗೆ ಬಲಿಯಾಗದಂತೆ ತಡೆಯುವುದು ಕಾವಲು ಸಮಿತಿಯ ಮುಖ್ಯ ಉದ್ದೇಶವಾಗಿರುತ್ತದೆ ಎಂದರು.

ಇಂತಹ ಪ್ರಕರಣಗಳು ಕಂಡು ಬಂದರೆ ಮೊದಲು ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಗುರುತಿಸಿ ಸಂಬಂಧಸಿದ ಇಲಾಖೆ ಹಾಗೂ ಪೊಲೀಸ್ ಇಲಾಖೆಯ ಗಮನಕ್ಕೆ ತಂದು ಸಮಸ್ಯೆಗೆ ಪರಿಹಾರ ಕೊಡಿಸಲು ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದು ಕರೆ ನೀಡಿದರು.

ಭದ್ರಬಾಲ್ಯ ಯೋಜನೆ ಅನುಷ್ಠಾನಕ್ಕೆ ಪ್ರತಿಯೊಂದು ಇಲಾಖೆಗಳ ಸಹಕಾರ ನೀಡಬೇಕು ಉತ್ತಮ ಸಮಾಜ ನಿರ್ಮಾಣಕ್ಕೆ ಎಲ್ಲ ಇಲಾಖೆಗಳ ಅಧಿಕಾರಿಗಳು ಒಟ್ಟಾಗಿ ಕಾರ್ಯನಿರ್ವಹಿಸಬೇಕು ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿಯೂ ಬಾಲ್ಯ ವಿವಾಹ, ಶಾಲೆ ಬಿಟ್ಟಿರುವ ಮಕ್ಕಳನ್ನು ಪುನಃ ಶಾಲೆಗೆ ಸೇರಿಸುವುದು, ಲೈಂಗಿಕ ದೌರ್ಜನ್ಯಗಳು ನಡೆಯದಂತೆ ಕಾವಲು ಸಮಿತಿ ಸಕ್ರೀಯವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಲು ಕಾವಲು ಸಮಿತಿ ನಿಷ್ಕ್ರಿಯವಾಗಿರುವುದೆ ಕಾರಣ ಎಂದು ವಿಷಾದಿಸಿದರು.

ಗ್ರಾಮಗಳಲ್ಲಿನ ಪರಿಶಿಷ್ಟಜಾತಿ, ಪಂಗಡ, ಕಾಲೋನಿಗಳಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕು ಶಾಲೆ ಬಿಟ್ಟ ಮಕ್ಕಳು ಹೆಚ್ಚಿನ ದೌರ್ಜನ್ಯಕ್ಕೆ ಒಳಗಾಗುತ್ತಿದ್ದು ಇದನ್ನು ತಪ್ಪಿಸಬೇಕು ದುರ್ಬಲ ವರ್ಗದವರನ್ನು ಗುರುತಿಸಿ ಅವರ ಪರವಾಗಿ ನಿಲ್ಲಬೇಕು ಎಂಬ ಸೂಚನೆ ನೀಡಿದರು.

ಕಾರ್ಯಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಶಿವಯೋಗಿ ಬಿ ಹಿರೇಮಠ್, ಅರ್ಜುನ್ ಮಿರ್ಜಿ ಬಾಗಲಕೋಟೆ, ವಿಜಯಲಕ್ಷ್ಮೀ ವಿಜಯಪುರ, ಕೊಪ್ಪಳದ ನೇತ್ರಾವತಿ ತರಬೇತಿ ನೀಡಿದರು. ತಾಲೂಕು ಬಿಸಿಎಂ ಅಧಿಕಾರಿ ದೇವರಾಜ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಶಿವಪ್ರಕಾಶ್ ಮತ್ತಿತರು ಇದ್ದರು.

Published and Owned by : **PRATHIBHA M.S.**, Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**